ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ


ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 79 ಸಂಚಿಕೆ– 79 | PAGE- 8 ಪುಟ–8 | ಶುಕ್ರವಾರ 02.05.2025 | RS.2/- ಬೆಲೆ 2/–

# ಉಗ್ರರನ್ನು ಬುಡ ಸಮೇತ ಕಿತ್ತುಹಾಕ್ತೀವಿ:ಅಮಿತ್ ಶಾ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.1: ನಮ್ಮ ಹೋರಾಟ ಮುಗಿಯುವುದಿಲ್ಲ,ಒಬ್ಬ ಭಯೋತ್ಪಾದಕನನ್ನೂ ಬಿಡುವುದಿಲ್ಲ ಎಂದು ಗೃಹ ಸಚಿವ ಅಮಿತ್ ಶಾ ಗುಡುಗಿದ್ದಾರೆ.ಪಹಲ್ಗಾಮ್ ದಾಳಿಯ ನಂತರ ಮೊದಲ ಬಾರಿಗೆ ದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾರ್ವಜನಿಕವಾಗಿ ಮಾತನಾಡಿ ಉಗ್ರರನ್ನು ಸಂಹಾರ ಮಾಡುತ್ತೇವೆ ಎಂದು ತಿಳಿಸಿದರು. ಯಾರಾದರೂ ಹೇಡಿತನದ ದಾಳಿ ಮಾಡಿ ಅದು ತಮಗೆ ಸಿಕ್ಕಿದ ದೊಡ್ಡ

ಗೆಲುವು ಎಂದು ಭಾವಿಸಿದರೆ ಒಂದು ವಿಷಯವನ್ನು ಅರ್ಥಮಾಡಿಕೊಳ್ಳಿ. ಕೇಂದ್ರದಲ್ಲಿ ಇರುವುದು ನರೇಂದ್ರ ಮೋದಿ ಸರ್ಕಾರ. ಯಾರನ್ನೂ ಬಿಡುವುದಿಲ್ಲ. ಈ ದೇಶದ ಪ್ರತಿಯೊಂದು ಇಂಚಿನಿಂದಲೂ ಭಯೋತ್ಪಾದನೆಯನ್ನು ಬೇರುಸಹಿತ ಕಿತ್ತುಹಾಕುವುದು ನಮ್ಮ ಸಂಕಲ್ಪ ಮತ್ತು ಆ ಸಂಕಲ್ಪ ಈಡೇರುತ್ತದೆ ಎಂದು ಹೇಳಿದರು.

ಭಯೋತ್ಪಾದನೆಯನ್ನು ಹರಡುವ ಎಲ್ಲರಿಗೂ ಇದು ಯುದ್ಧದ ಅಂತ್ಯವಲ್ಲ. ಪ್ರತಿಯೊಬ್ಬ ಉಗ್ರನಿಗೂ ಶಿಕ್ಷೆ ನೀಡಲಾಗುವುದು ಎಂದು ತಿಳಿಸಿದರು.140 ಕೋಟಿ ಭಾರತೀಯರು ಮಾತ್ರವಲ್ಲದೇ ಇಡೀ ಜಗತ್ತು ಈ ಹೋರಾಟದಲ್ಲಿ ಭಾರತದೊಂದಿಗೆ ನಿಂತಿದೆ. ಭಯೋತ್ಪಾದನೆಯ ವಿರುದ್ಧದ ಈ ಹೋರಾಟದಲ್ಲಿ ವಿಶ್ವದ ಎಲ್ಲಾ ದೇಶಗಳು ಒಗ್ಗೂಡಿ ಭಾರತದ ಜನರೊಂದಿಗೆ ನಿಂತಿವೆ. ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವವರೆಗೆ, ನಮ್ಮ ಹೋರಾಟ ಮುಂದುವರಿಯುತ್ತದೆ ಎಂದರು.


ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ನಾವು ಎಲ್ಲದಕ್ಕೂ ಬಲವಾದ ಉತ್ತರ ನೀಡಿದ್ದೇವೆ, ಅದು ಈಶಾನ್ಯವಾಗಿರಬಹುದು, ಎಡಪಂಥೀಯ ನಕ್ಸಲ್ ವಾದದ ಪ್ರದೇಶಗಳಾಗಿರಬಹುದು ಅಥವಾ ಕಾಶ್ಮೀರದಲ್ಲಿ ಭಯೋತ್ಪಾದನೆಯ ನೆರಳಾಗಿರಬಹುದು. ಯಾರನ್ನೂ ನಾವು ಬಿಡುವುದಿಲ್ಲ. ಈ ದೇಶದ ಪ್ರತಿಯೊಂದು ಇಂಚಿನಿಂದಲೂ ಭಯೋತ್ಪಾದನೆಯನ್ನು ಬೇರುಸಹಿತ ಕಿತ್ತುಹಾಕುವುದು ನಮ್ಮ ಸಂಕಲ್ಪ ಎಂದು ಗುಡುಗಿದರು.

## ಭಯೋತ್ಪಾದನಾ ಸಂಚು ವಿಫಲಗೊಳಿಸಿದ ಬಿಎಸ್ಎಫ್

ಮಲ್ಲಮ್ಮನುಡಿವಾರ್ತೆಅಮೃತಸರ:ಮೇ.1: ಪಹಲ್ಗಾಮ್ ಉಗ್ರರ ದಾಳಿ ಘಟನೆ ಜನರ ಮನಸ್ಸಿನಿಂದ ಮಾಸುವ ಮುನ್ನವೇ ಮತ್ತೊಂದು ದೊಡ್ಡ ಭಯೋತ್ಪಾದನಾ ಸಂಚನ್ನು ಗಡಿ ಭದ್ರತಾ ಪಡೆ ಅಮೃತಸರ ಗಡಿಯಲ್ಲಿ ವಿಫಲಗೊಳಿಸಿದೆ. ಅಮೃತಸರ ಜಿಲ್ಲೆಯ ಭರೋಪಾಲ್ ಗ್ರಾಮದ ಬಳಿ ಪಂಜಾಬ್ ಪೊಲೀಸರ ಸಮನ್ವಯದಲ್ಲಿ ಗಡಿ ಭದ್ರತಾ ಪಡೆ ಭಯೋತ್ಪಾದಕ ಸಂಚನ್ನು ವಿಫಲಗೊಳಿಸಿದ್ದು, ಶಸ್ತ್ರಾಸ್ತ್ರ ಮತ್ತು ಮದ್ದು ಗುಂಡುಗಳ ಸಂಗ್ರಹವನ್ನು ವಶಪಡಿಸಿಕೊಂಡಿದೆ.

(2ನೇ ಪುಟ ನೋಡಿ)

## ಜನರ ಒತ್ತಡಕ್ಕೆ ಕೇಂದ್ರದಿಂದ ಜಾತಿಗಣತಿ ಘೋಷಣೆ: ಮಲ್ಲಿಕಾರ್ಜುನ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.1:ಕೇಂದ್ರಸರ್ಕಾರಕ್ಕೆ ಜನಗಣತಿ ಮಾಡಲು ಇಷ್ಟವಿಲ್ಲ. ಆದರೂ ಜನರ ಒತ್ತಡಕ್ಕೆ ಈಗ ಜನಗಣತಿ ಜೊತೆಗೆ ಜಾತಿಗಣತಿ ಮಾಡುವ ಘೋಷಣೆ ಮಾಡಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಕರ್ನಾಟಕ ಸರ್ಕಾರದ ವತಿಯಿಂದ ನಡೆದ ಪೌರ ಕಾರ್ಮಿಕ ದಿನಾಚರಣೆಯಲ್ಲಿ ಮಾತನಾಡಿದ ಅವರು, ಜಾತಿಗಣತಿ ಆಗಬೇಕು ಅಂತ ರಾಹುಲ್ ಗಾಂಧಿ ಇಡೀ ದೇಶದಲ್ಲಿ ಓಡಾಟ ಮಾಡಿದರು. ಏಪ್ರಿಲ್ 16, 2023 ರಂದು ನಾನೇ ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದು ಜಾತಿಗಣತಿ ಮಾಡುವಂತೆ ಮನವಿ ಮಾಡಿದ್ದೆ. ಆದರೆ ನಾವು

(2ನೇ ಪುಟ ನೋಡಿ)

## ಇಂದು ಎಸ್ಎಸ್ ಎಲ್ಸಿ ಫಲಿತಾಂಶ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.1: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಶುಕ್ರವಾರ ಮೇ.2 ರಂದು 2024–25ನೇ ಸಾಲಿನ ಎಸ್ಎಸ್ಎಲ್ಸಿ –1 ವಾರ್ಷಿಕ ಪರೀ–ಕ್ಷೆಯ ಫಲಿತಾಂಶ ಪ್ರಕಟಿಸಲಿದೆ.ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮೇ.2 ರಂದು ಬೆಳಗ್ಗೆ 11:30ಕ್ಕೆ ಬೆಂಗಳೂರಿನ ಕರ್ನಾಟಕ ಪ್ರೌಢ ಪರೀಕ್ಷಾ ಮಂಡಳಿ ಕಚೇರಿಯಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಎಸ್ಎಸ್ಎಲ್ಸಿ ಫಲಿತಾಂಶವನ್ನು ಅಧಿಕೃತವಾಗಿ ಪ್ರಕಟಿಸಲಿದ್ದಾರೆ.ಮಾರ್ಚ್ 21 ರಿಂದ ಏಪ್ರಿಲ್ 4 ರವರೆಗೆ ಕರ್ನಾಟಕದಾದ್ಯಂತ 2,818 ಪರೀಕ್ಷಾ ಕೇಂದ್ರಗಳಲ್ಲಿ ಎಸ್ಎಸ್ಎಲ್ಸಿ ಪರೀಕ್ಷೆ ನಡೆಸಲಾಗಿತ್ತು. ಒಟ್ಟು ಸುಮಾರು 8.96 ಲಕ್ಷ ವಿದ್ಯಾರ್ಥಿಗಳು, 4,61,563 ಬಾಲಕರು ಮತ್ತು 4,34,884 ಬಾಲಕಿಯರು ಪರೀಕ್ಷೆ ಬರೆದಿದ್ದಾರೆ. ಎಸ್ಎಸ್ಎಲ್ಸಿ –1 ಫಲಿತಾಂಶ ನೋಡುವುದು ಹೇಗೆ?

(2ನೇ ಪುಟ ನೋಡಿ)

## ಬಂದ್ ಬಿಸಿಗೆ ಬಿಕೋ ಎಂದ ಗಾಣಗಾಪುರ ದತ್ತನ ಪುಣ್ಯಕ್ಷೇತ್ರ: ಸುಡುಬಿಸಿಲಲ್ಲಿ ಹೈರಾಣಾದ ಭಕ್ತರು





ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಮೇ.1:ಕಾಶಿಮಾದರಿಯಲ್ಲಿ ಗಾಣಗಾಪುರ ದತ್ತಾತ್ರೇಯ ಪುಣ್ಯ–ಕ್ಷೇತ್ರ ಅಭಿವೃದ್ಧಿಗಾಗಿ ಕಳೆದ 15 ದಿನಗಳಿಂದ ನಿರಂತರ ಧರಣಿ ಸತ್ಯಾಗ್ರಹ ನಡೆಯುತ್ತಿದ್ದು,ಇಂದು ಇನ್ನೊಂದು ಹಂತಕ್ಕೆ ಹೋರಾಟ ತಲುಪಿದ್ದು,ಗಾಣಗಾಪುರ ಬಂದ್‌ಗೆ ಕರೆ ನೀಡಿದ್ದರಿಂದ ಗಾಣಗಾಪುರ ಕ್ಷೇತ್ರ ಬಿಕೋ ಎನ್ನುತ್ತಿತ್ತು.ಹೋರಾಟಗಾರರು ಗಾಣಗಾಪುರ ಕ್ಷೇತ್ರದ ನಾಲ್ಕು ದಿಕ್ಕಿನಲ್ಲಿ ಸಂಪೂರ್ಣವಾಗಿ ನಾಲ್ಕು ರಸ್ತೆಗಳಿಗೆ ಮುಳ್ಳು ಕಂಟ್ಟಿಗಳನ್ನು ಬಡಿದು ಬಂದ್ ಮಾಡಿದ್ದರು.ಇದರಿಂದ ಕ್ಷೇತ್ರ ದರ್ಶನಕ್ಕೆ ಬಂದ ಭಕ್ತರು ಸುಡುಬಿಸಿಲಿನಲ್ಲಿ ಹೈರಾಣಾಗಿ ಪರದಾಡಬೇಕಾಯಿತು.

ಹೋರಾಟಗಾರ ಶಿವಕುಮಾರ ನಾಟಿಕಾರ ಸುದ್ದಿಗಾರರೊಂದಿಗೆ ಮಾತನಾಡಿ,ಜಿಲ್ಲಾಧಿಕಾರಿಗಳಿಗೆ ಗಾಣಗಾಪುರ ಅಭಿವೃದ್ಧಿ ಮಾಡಬೇಕೆನ್ನುವ ಮನಸ್ಸಿಲ್ಲ.ಸೌಜನ್ಯಕ್ಕೂ ಇಲ್ಲಿಯವರೆಗೆ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ನೀಡದ ಜಿಲ್ಲಾಧಿಕಾರಿಗಳು ಹುಂಡಿ ಹಣ ತಗೆದುಕೊಂಡು ಹೋಗಲು ತುರ್ತಾಗಿ ಬರುತ್ತಾರೆ. ಇವತ್ತು ಸ್ವಯಂ ಪ್ರೇರಿತರಾಗಿ ಗಾಣಗಾಪುರ ಜನರು ಬಂದ್ ಘೋಷಣೆ ಮಾಡಿಕೊಂಡಿದ್ದಾರೆ. ಗಾಣಗಾಪುರ ದತ್ತಾತ್ರೇಯರ ದರ್ಶನಕ್ಕೆ ಬರುವ ಭಕ್ತರಿಗೆ ಈ ಒಂದು ದಿನ ತೊಂದರೆಯಾಗುತ್ತಿರಬಹುದು ಆದರೆ ದಿನನಿತ್ಯ ಲಕ್ಷಾಂತರ ಭಕ್ತರು ಕಷ್ಟಪಡುವಂತಾಗಿದೆ.ಇದಕ್ಕೆ ತಾರ್ಕಿಕ ಅಂತ್ಯ ಕಾಣಲು ನಾವು ಧರಣಿ ಸತ್ಯಾಗ್ರಹ 15 ದಿನಗಳಿಂದ ಮಾಡುತ್ತ ಬಂದಿದ್ದೇವೆ.ಇವತ್ತು ಗಾಣಗಾಪುರ ಬಂದ್ ಆಗಿದೆ ಮುಂದೆ ಹೋರಾಟದ ಸ್ವರೂಪ ಯಾವ ಹಂತಕ್ಕೆ ತಲುಪುತ್ತದೆ ಎಂಬುವುದನ್ನು ಜಿಲ್ಲಾಧಿಕಾರಿಗಳು ಕಾದು ನೋಡಲಿ ಎಂದರು.

ಗಾಣಗಾಪುರಕ್ಕೆ ಬರುವ ಚೌಡಾಪುರ ರಸ್ತೆ,ತೆಲ್ಲೂರ ರಸ್ತೆ ಹಾಗೂ ಜೇವರ್ಗಿಯಿಂದ ಬರುವ ಅಂಕಲಗಿ ರಸ್ತೆಗೆ ಮುಳ್ಳು ಕಂಟ್ಟಿ ಬಡಿದು ಪ್ರತಿಭಟನೆಯ ಕಾವನ್ನು ತೀವ್ರ ಸ್ವರೂಪಕ್ಕೆ ಕೊಂಡ್ಯೊಯ್ಯಲಾಗಿತ್ತು.ಭಕ್ತರು ಸುಡುಬಿಸಿಲಲ್ಲಿ 2–3 ಕಿಲೋಮೀಟರ್ ನಡೆಯುತ್ತಲೆ ದತ್ತಾತ್ರೇಯರ ದರ್ಶನಕ್ಕೆ ಹೋಗುವುದು ಕಂಡು ಬಂತು.

## ಪಹಲ್ಗಾಮ್ ಉಗ್ರ ದಾಳಿಯಿಂದ ಗಮನ ಬೇರೆಡೆ ಸೆಳೆಯಲು ಜಾತಿ ಗಣತಿಗೆ ನಿರ್ಧಾರ

ಮುಂಬೈ:ಮೇ.1: ಮುಂದಿನ ಜನಗಣತಿಯೊಂದಿಗೆ ಜಾತಿ ಗಣತಿ ನಡೆಸಲು ನಿರ್ಧರಿಸಿದ ಕೇಂದ್ರ ಈ ಕ್ರಮಕ್ಕೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರೇ ಕಾರಣ ಎಂದು ಶಿವಸೇನೆ(ಯುಬಿಟಿ)ಸಂಸದ ಸಂಜಯ್ ರಾವತ್ ಗುರುವಾರ ಹೇಳಿದ್ದಾರೆ. ಆದರೆ ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ಟೀಕಿಸಿದ್ದಾರೆ.

ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಾವತ್, ದಕ್ಷಿಣ ಕಾಶ್ಮೀರದ ಪಹಲ್ಗಾಮ್ ಪಟ್ಟಣದಲ್ಲಿ

(2ನೇ ಪುಟ ನೋಡಿ)

## ಸರ್ಕಾರದ ಸೌಲಭ್ಯ ಬಳಸಿಕೊಂಡು ಪ್ರಗತಿ ಹೊಂದಲು ಪೌರಕಾರ್ಮಿಕರಿಗೆ ಸಿಎಂ ಕರೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.1:ಪೌರಕಾರ್ಮಿಕರನ್ನು ಪ್ರಸ್ತುತ ಖಾಯಂ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಸುಮಾರು 9000 ಸಂಖ್ಯೆಯಷ್ಟಿರಬಹುದಾದ ವಾಹನ ಚಾಲಕರು, ಸಹಾಯಕರು ಹಾಗೂ ಆಪರೇಟರ್ಸ್‌ಗಳನ್ನೂ ಖಾಯಂ ಮಾಡಲಾಗುವುದು.ಶುಚಿತ್ವದ ಕಾಯಕದಲ್ಲಿ ತೊಡಗಿರುವವರನ್ನು ಖಾಯಂ ನೇಮಕಾತಿ ಮಾಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಬಿಬಿಎಂಪಿ ವತಿಯಿಂದ ಆಯೋಜಿಸಲಾಗಿದ್ದ ಪೌರ ಕಾರ್ಮಿಕರ ದಿನಾಚರಣೆ ಹಾಗೂ ಪೌರ ಕಾರ್ಮಿಕರಿಗೆ ನೇಮಕಾತಿ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಪೌರ ಕಾರ್ಮಿಕರಿಗೆ ನೇಮಕಾತಿ ಪತ್ರ ವಿತರಿಸಿ ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ, ಪೌರಕಾರ್ಮಿಕರನ್ನು ಗುತ್ತಿಗೆದಾರರು ಶೋಷಣೆ ಮಾಡುತ್ತಿದ್ದು, ನ್ಯಾಯಯುತವಾದ ಸಂಬಳ ಕೊಡದೇ ಇದ್ದುದನ್ನು ಗಮನಿಸಿದ್ದೆ. ಅದಕ್ಕಾಗಿ ಶೋಷಣೆಗೊಳಗಾದ ಪೌರಕಾರ್ಮಿಕರ ಸಹಾಯಕ್ಕಾಗಿ ಕನಿಷ್ಟ ವೇತನ ಕಾಯ್ದೆ ಪ್ರಕಾರ ದೊರೆಯಬೇಕಾದ ಕನಿಷ್ಟ ಸಂಬಳವನ್ನು ಕಡ್ಡಾಯವಾಗಿ ದೊರೆಯುವ ವ್ಯವಸ್ಥೆಯನ್ನು ಮಾಡಿದೆ. ಮೊದಲು 7000 ರೂ. ದೊರೆಯುತ್ತಿದ್ದ ಸಂಬಳವನ್ನು 17000 ಕ್ಕೆ ಹೆಚ್ಚಿಸಿ, ನೇರವಾಗಿ ಬ್ಯಾಂಕ್ ಖಾತೆಗೆ ಪಾವತಿಯಾಗುವ ವ್ಯವಸ್ಥೆಯನ್ನು ಮಾಡಲಾಯಿತು. ಈ ರೀತಿ ಪೌರಕಾರ್ಮಿಕರಿಗೆ ಮಧ್ಯವರ್ತಿಗಳ ಹಾವಳಿಯಿಂದ ಮುಕ್ತಗೊಳಿಸಲಾಯಿತು ಎಂದರು.

ವಿರೋಧ ಪಕ್ಷದ ನಾಯಕನಾಗಿದ್ದ ಸಂದರ್ಭದಲ್ಲಿ ಪೌರಕಾರ್ಮಿಕರ ಬಹುದಿನಗಳ ಬೇಡಿಕೆಯಾಗಿದ್ದ ಖಾಯಂ ನೇಮಕಾತಿಯನ್ನು ಬೆಂಬಲಿಸಿ, ಆಗಿನ ಸರ್ಕಾರ ಖಾಯಂ ನೇಮಕಾತಿ ಬೇಡಿಕೆಯನ್ನು ಈಡೇರಿಸದಿದ್ದಲ್ಲಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಪೌರ ಕಾರ್ಮಿಕರ ಈ ಬೇಡಿಕೆಯನ್ನು ಪೂರೈಸುವುದಾಗಿ ನೀಡಲಾಗಿದ್ದ ಭರವಸೆಯನ್ನು ಇಂದು ಈಡೇರಿಸಲಾಗಿದೆ. ಇದರಿಂದ 4ನೇ ದರ್ಜೆಯ ಪೌರಕಾರ್ಮಿಕನ ವೇತನ, ಅವರ ಖಾತೆಗೆ ನೇರವಾಗಿ 39000 ರೂ.ಗಳು ಪಾವತಿಯಾಗಲಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

ಶುಚಿತ್ವದಲ್ಲಿ ದೈವತ್ವವನ್ನು ಕಾಣಬೇಕು

(2ನೇ ಪುಟ ನೋಡಿ)

7ನೇ ಪುಣ್ಯಸ್ಮರಣೆ



ಶ್ರೀ ದಿ.ಭೀಮರಾವ ತಂದೆ ನಾರಾಯಣರಾವ ಕಮ್ಮಾ (71)
ಹಣಮಂತವಾಡಿ (ಆರ್) ತಾ.ಬಸವಕಲ್ಯಾಣ ಜಿಲ್ಲಾ ಬೀದರ.

ನೀವು ನಮ್ಮನ್ನಗಲಿ ಇವತ್ತಿಗೆ 7 ವರ್ಷ
ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿ
ಸದಾ ಹಚ್ಚಹಸಿರಾಗಿದೆ.
ನಿಮ್ಮ ಸಹೃದಯವಂತಿಕೆ, ನಡೆ, ನುಡಿ, ವ್ಯಕ್ತಿತ್ವ ನಮ್ಮೆಲ್ಲರಿಗೆ
ಆದರ್ಶನಿಯವಾಗಿದೆ. ತಮ್ಮ ಪವಿತ್ರ ಆತ್ಮಕ್ಕೆ ಭಗವಂತನು
ಚಿರಶಾಂತಿ ಕರುಣಿಸಲೆಂದು ಪ್ರಾರ್ಥಿಸುವ

ಸದಾ ನಿಮ್ಮ ಪ್ರೀತಿಯ ನೆನಪಲ್ಲಿರುವ
ಸಮಸ್ತ ಕಮ್ಮಾ ಪರಿವಾರ ಹಾಗೂ ಕುಟುಂಬದವರು
ಬಂಧು ಮಿತ್ರರು,
ಹಣಮಂತವಾಡಿ (ಆರ್) ಬಸವಕಲ್ಯಾಣ. ಜಿ.ಬೀದರ್

ಒಂದನೇ ಪುಟದಿಂದ

## ಎಸ್‌ಎಸ್‌ಎಲ್‌ಸಿ ಫಲಿತಾಂಶ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಎಸ್‌ಎಸ್‌ಎಲ್‌ಸಿ ಅಥವಾ 10 ನೇ ತರಗತಿಯ ಬೋರ್ಡ್ ಪರೀಕ್ಷಾ ಫಲಿತಾಂಶವನ್ನು ಅಧಿಕೃತ ವೆಬ್‌ಸೈಟ್ https://kseab.karnataka.gov.in ಅಥವಾ https://karresults.nic.in ನಲ್ಲಿ ಪ್ರಕಟಿಸಲಿದೆ.karresults.nic.in ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ

SSLC Result 2025 ಲಿಂಕ್ ಮೇಲೆ ಕ್ಲಿಕ್ ಮಾಡಿ.ನಂತರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ 2025 ಲಾಗಿನ್ ಪೇಜ್ ತೆರೆದುಕೊಳ್ಳುತ್ತದೆ.ನೋಂದಣಿ ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ.

Submit ಬಟನ್ ಮೇಲೆ ಕ್ಲಿಕ್ ಮಾಡಿನಿಮ್ಮ ಫಲಿತಾಂಶವನ್ನು ಸ್ಕ್ರೀನ್ ಮೇಲೆ ತೋರಿಸುತ್ತದೆ, ನಿಮ್ಮ ವಿಷಯವಾರು ಅಂಕಗಳು ಮತ್ತು ಒಟ್ಟಾರೆ ಕಾರ್ಯಕ್ಷಮತೆಯನ್ನು ಪ್ರದರ್ಶಿಸುತ್ತದೆ.ಬಳಿಕ, ಫಲಿತಾಂಶ ಅಂಕಪಟ್ಟಿಯ ಪ್ರಿಂಟ್ ತೆಗೆದುಕೊಳ್ಳಿ.

## ಘೋಷಣೆ: ಮಲ್ಲಿಕಾರ್ಜುನ ಖರ್ಗೆ

ಮನವಿ ಮಾಡಿದಾಗ ಮಾಡದೇ ಮೋದಿ ಅವರು ಬುಧವಾರ ವಿಶೇಷ ಕ್ಯಾಬಿನೆಟ್ ಮಾಡಿ ಜಾತಿಗಣತಿ ಮಾಡೋ ಘೋಷಣೆ ಮಾಡಿ ತಾವು ಕ್ರೆಡಿಟ್ ಪಡೆಯೋದಕ್ಕೆ ಮುಂದಾಗಿದೆ ಎಂದು ಆರೋಪ ಮಾಡಿದರು.

ಜಾತಿಗಣತಿಯನ್ನ ನೆಹರು ಅವರು ವಿರೋಧ ಮಾಡಿದ್ರು ಅಂತ ಬಿಜೆಪಿ ಅಪ ಪ್ರಚಾರ ಮಾಡ್ತಿದೆ. ನೆಹರು ಇನ್ನ ವಿರೋಧ ಮಾಡಿರಲಿಲ್ಲ. ಅಂಬೇಡ್ಕರ್ ಮಾಡಿದ್ದ ಹಿಂದೂ ಕೋಡ್ ಬಿಲ್ ಜಾರಿ ಮಾಡಿದ್ದು ನೆಹರು ಅಂತ ಬಿಜೆಪಿಗೆ ತಿರುಗೇಟು ಕೊಟ್ರು. ಬಡವರ ಪರ ಕೆಲಸ ಮಾಡೋದು ಕಾಂಗ್ರೆಸ್ ಮಾತ್ರ. ಬಿಜೆಪಿಗೆ ಬಡವರ ಮೇಕೆ ಅನುಕಂಪ ಇಲ್ಲ ಅಂತ ಕಿಡಿಕಾರಿದರು.

ಈಗ ಗಣತಿ ಘೋಷಣೆ ಮಾಡಿರುವ ಕೇಂದ್ರ ಸರ್ಕಾರಕ್ಕೆ ನಾವು ಬೇಡಿಕೆ ಇಡುತ್ತಿದ್ದೇವೆ. ಖಾಸಗಿ ಕಂಪನಿಗಳಲ್ಲೂ ಎಸ್‌ಸಿ–ಎಸ್ಟಿ ಮೀಸಲಾತಿ ಜಾರಿ ಮಾಡಬೇಕು. 50% ಮೀಸಲಾತಿ ಪ್ರಮಾಣವನ್ನ ಹೆಚ್ಚಳ ಮಾಡಬೇಕು ಎಂದು ಕೇಂದ್ರ ಬಿಜೆಪಿಗೆ ಆಗ್ರಹಿಸಿದರು.

ಕೇಂದ್ರ ಸರ್ಕಾರ ಜನಗಣತಿ ಮಾಡಲು ಕಡಿಮೆ ಹಣ ಇಟ್ಟಿದೆ. ಇಷ್ಟು ಹಣದಿಂದ ಹೇಗೆ ಗಣತಿ ಮಾಡಲು ಸಾಧ್ಯ?ಕರ್ನಾಟಕದಲ್ಲಿ ಗಣತಿ ಮಾಡಲು 160 ಕೋಟಿ ಹಣ ಇಡಲಾಗಿತ್ತು. ಬಿಜೆಪಿ ಅವರಿಗೆ ಗಣತಿ ಮಾಡೋ ಮನಸು ಇರಲಿಲ್ಲ. ಈಗಲೂ ಇಲ್ಲ. ಆದರೆ ಈಗ ಒತ್ತಡಕ್ಕೆ ಘೋಷಣೆ ಮಾಡಿದ್ದಾರೆ ಅಷ್ಟೇ. ಮೋದಿ ಸರ್ಕಾರ ಕಾರ್ಮಿಕರಿಗೆ ಏನು ಮಾಡಿಲ್ಲ. ಮೋದಿ ಸರ್ಕಾರ ಕಾರ್ಮಿಕ ವಿರೋಧಿ ಸರ್ಕಾರ ಎಂದು ವಾಗ್ದಾಳಿ ನಡೆಸಿದರು.

## ಹೊಂದಲು ಪೌರಕಾರ್ಮಿಕರಿಗೆ ಸಿಎಂ ಕರೆ

ಎಂದು ಮಹಾತ್ಮಾ ಗಾಂಧೀಜಿಯವರು ನುಡಿದಿದ್ದರು. ಪರಿಸರದ ಸ್ವಚ್ಛತೆಯನ್ನು ಕಾಪಾಡುವುದು ಶ್ರೇಷ್ಠವಾದ ಕೆಲಸ. ಬಸವಣ್ಣನವರು ಕಾಯಕವೇ ಕೈಲಾಸ ಎಂದು ತಿಳಿಸಿದ್ದು, ಯಾವುದೇ ಕೆಲಸದಲ್ಲಿ ಮೇಲು ಕೀಳೆಂಬುದು ಇಲ್ಲ ಎಂದರು.1000 ಪೌರಕಾರ್ಮಿಕರನ್ನು ವಿದೇಶಕ್ಕೆ ಕಳಿಸುವ ಯೋಜನೆ ಸೇರಿದಂತೆ ಹಲವಾರು ಕಲ್ಯಾಣ ಯೋಜನೆಗಳನ್ನು ಪೌರಕಾರ್ಮಿಕರಿಗಾಗಿ ಹಮ್ಮಿಕೊಳ್ಳಲಾಗಿದೆ. ಪೌರಕಾರ್ಮಿಕರು, ಅವರ ಕುಟುಂಬದವರೂ ಮುಖ್ಯವಾಹಿನಿಗೆ ಬರಬೇಕು. ತನ್ಮೂಲಕ ಸಮಸಮಾಜವನ್ನು ನಿರ್ಮಿಸುವ ಉದ್ದೇಶ ಸರ್ಕಾರದ್ದಾಗಿದೆ. ರಾಜ್ಯದ ಎಲ್ಲ ವರ್ಗದ ಜನರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸಮಾನತೆ ದೊರೆಯುವಂತಾಗಬೇಕು. ಪೌರಕಾರ್ಮಿಕ ವರ್ಗದ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸರ್ಕಾರಕ್ಕೆ ಬೆಂಬಲವಾಗಿ ನಿಲ್ಲಬೇಕೆಂದು ಕೋರಿದರು. ಪೌರಕಾರ್ಮಿಕರ ಮಕ್ಕಳು ವಿದ್ಯಾವಂತರಾಗಿ ಸಮಾಜದ ಮುಖ್ಯವಾಹಿನಿಗೆ ಬರುವಂತಾಗಬೇಕು. ಸಾರ್ವಜನಿಕರೂ ತಮ್ಮ ಪರಿಸರದ ಸ್ವಚ್ಛತೆ ಬಗ್ಗೆ ಸ್ವಯಂಪ್ರೇರಣೆಯಿಂದ ಗಮನಹರಿಸಬೇಕು ಎಂದು ತಿಳಿಸಿದರು.

## ಗಮನ ಬೇರೆಡೆ ಸೆಳೆಯಲು ಜಾತಿ ಗಣತಿಗೆ ನಿರ್ಧಾರ

ಭಯೋತ್ಪಾದಕ ದಾಳಿ ನಡೆದು ಕೇವಲ ಒಂದು ವಾರದಲ್ಲಿಯೇ ಜಾತಿ ಗಣತಿ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದರು.ಏಪ್ರಿಲ್ 22 ರ ಹತ್ಯಾಕಾಂಡದ ಬಗ್ಗೆ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಸಾರ್ವಜನಿಕರಿಂದ ಹಲವು ಪ್ರಶ್ನೆಗಳನ್ನು ಎದುರಿಸುತ್ತಿರುವಾಗ, ಜನರ ಗಮನವನ್ನು ಬೇರೆಡೆ ಸೆಳೆಯಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ರಾವತ್ ಹೇಳಿದ್ದಾರೆ.

ಜಾತಿ ಗಣತಿಯು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ವಿಷಯವಾಗಿದೆ ಒತ್ತಿ ಹೇಳಿದ ರಾವತ್, ಕ್ಯಾಬಿನೆಟ್ ಈ ನಿರ್ಧಾರ ತೆಗೆದುಕೊಂಡಿದ್ದರೂ ಈ ವಿಚಾರದಲ್ಲಿ ದೇಶ ಜನ, ದಲಿತರು, ತುಳಿತಕ್ಕೊಳಗಾದ ಮತ್ತು ಹಿಂದುಳಿದ ಸಮಾಜವು ರಾಹುಲ್ ಗಾಂಧಿಯವರಿಗೆ ಮನ್ನಣೆ ನೀಡುತ್ತದೆ" ಎಂದು ಪ್ರತಿಪಾದಿಸಿದರು.

ರಾಹುಲ್ ಗಾಂಧಿಯವರು ಕಳೆದ ಹತ್ತು ವರ್ಷಗಳಿಂದ ಜಾತಿ ಆಧಾರಿತ ಜನಗಣತಿಯ ವಿಷಯವನ್ನು ನಿರಂತರವಾಗಿ ಪ್ರಸ್ತಾಪಿಸುತ್ತಿದ್ದಾರೆ. ಜಾತಿ ಗಣತಿ ನಿರ್ಧಾರದ ಶ್ರೇಯಸ್ಸು ಲೋಕಸಭೆ ಪ್ರತಿಪಕ್ಷ ನಾಯಕನಿಗೆ ಸಲ್ಲಬೇಕು ಎಂದು ಕಾಂಗ್ರೆಸ್‌ನ ಮಿತ್ರಪಕ್ಷವಾಗಿರುವ ಶಿವಸೇನೆ ಸಂಸದ ರಾವತ್ ಹೇಳಿದರು.

ಬಿಹಾರ(2025 ರ ಕೊನೆಯಲ್ಲಿ) ಮತ್ತು ಪಶ್ಚಿಮ ಬಂಗಾಳ(2026) ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ರಾವತ್ ತಿಳಿಸಿದರು.

## ವಿಫಲಗೊಳಿಸಿದ ಬಿಎಸ್‌ಎಫ್

ಬಿಎಸ್‌ಎಫ್ ಇಂಟಲಿಜೆನ್ಸ್ ವಿಂಗ್ ನೀಡಿದ ನಂಬಲಾರ್ಹ, ಗುಪ್ತಚರ ಮಾಹಿತಿ ಮೇರೆಗೆ ಭದ್ರತಾ ಪಡೆಗಳು ಬುಧವಾರ ಸಂಜೆ ಜಂಟಿ ಶೋಧ ಕಾರ್ಯಾಚರಣೆ ನಡೆಸಿದ್ದು, ಎರಡು ಹ್ಯಾಂಡ್ ಗ್ರೆನೇಡ್‌ಗಳು, ಮೂರು ಪಿಸ್ತೂಲ್‌ಗಳು, ಆರು ಮ್ಯಾಗಜೀನ್‌ಗಳು ಮತ್ತು 50 ಸುತ್ತಿನ ಮದ್ದುಗುಂಡುಗಳನ್ನು ವಶಪಡಿಸಿಕೊಂಡಿವೆ.

ವಶಕ್ಕೆ ಪಡೆದ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕಗಳನ್ನು ಹೆಚ್ಚಿನ ತನಿಖೆಗಾಗಿ ಸ್ಥಳೀಯ ಪೊಲೀಸರಿಗೆ ಹಸ್ತಾಂತರಿಸಲಾಗಿದೆ.

ಈ ಜಂಟಿ ಕಾರ್ಯಾಚರಣೆ :ಖಙ ನ ಉನ್ನತ ಮಟ್ಟದ ಸನ್ನದ್ಧತೆ ಮತ್ತು ಜಾಗರೂಕತೆಯನ್ನು ಪ್ರತಿಬಿಂಬಿಸುತ್ತದೆ. ಪಂಜಾಬ್ ಪೊಲೀಸರೊಂದಿಗೆ ತ್ವರಿತ ಮತ್ತು ಸಂಘಟಿತ ಕ್ರಮವು ಸಂಭವನೀಯ ದೊಡ್ಡ ಭಯೋತ್ಪಾದಕ ಸಂಚನ್ನು ವಿಫಲಗೊಳಿಸಿದೆ. ರಾಷ್ಟ್ರೀಯ ಭದ್ರತೆ ಮತ್ತು ನಾಗರಿಕರ ರಕ್ಷಣೆಗೆ ಅದರ ಬದ್ಧತೆಯನ್ನು ತೋರಿಸಿದೆ.

# ಮೇ 10 ರಂದು ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ

ಕಲಬುರಗಿ.ಮೇ.01:ಕಲಬುರಗಿ ಜಿಲ್ಲಾಡಳಿತ,ಕನ್ನಡಮತ್ತುಸಂಸ್ಕೃತಿ ಇಲಾಖೆ,ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ಮಹಾಸಾಧ್ವಿಶಿವಶರಣೆಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಕಾರ್ಯಕ್ರಮವನ್ನು ಮೇ 10 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿತಂತ್ರಜ್ಞಾನಮತ್ತುಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿ ವಹಿಸುವರು.ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ತಳವಾರ ಸಾಬಣ್ಣ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ ಹಾಗೂ ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಹಾಗೂ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಮಿತಿಯ ಜಿಲ್ಲಾಧ್ಯಕ್ಷ ಶರಣಬಸವ ಕಾಮರಡ್ಡಿ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು. ಈ ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಹೇಮರಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆಯ ರಾಜ್ಯ ಅಧ್ಯಕ್ಷರಾದ ವಿಶಾಲಾಕ್ಷ್ಮೀ ವಿ. ಕರಡ್ಡಿ ಅವರು ವಿಶೇಷ ಉಪನ್ಯಾಸ ನೀಡುವರು.

## ಸರ್ವ ಸಮಾಜದ ಅಭಿವೃದ್ಧಿಗೆ ಜಾತಿ ಜನಗಣತಿ ಪೂರಕ



ಬೀದರ್:ಮೇ.1:ದೇಶಸ್ವಾತಂತ್ರ್ಯದ ಬಳಿಕ ಮೊದಲ ಬಾರಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಎನ್ ಡಿಎ ಸರ್ಕಾರ ಜನಗಣತಿಯೊಂದಿಗೆ ಜಾತಿ ಗಣತಿ ಸಹ ಮಾಡುವ ದಿಟ್ಟ ನಿರ್ಧಾರ ಕೈಗೊಂಡಿರುವುದು ಐತಿಹಾಸಿಕವಾಗಿದೆ. ಇದು ಸರ್ವ ಸಮುದಾಯದವರಿಗೂ ಸಾಮಾಜಿಕ ನ್ಯಾಯ ಕಲ್ಪಿಸಲು ಪೂರಕವಾದ ಕ್ರಾಂತಿಕಾರಿ ಕ್ರಮ ಎನಿಸಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ, ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ.

1931ರ ಬಳಿಕ ಇದೇ ಮೊದಲ ಬಾರಿಗೆ ದೇಶದಲ್ಲಿ ಜಾತಿ ಗಣತಿ ನಡೆಯುತ್ತಿರುವುದು ಸ್ವಾಗತಾರ್ಹ. ಕೇಂದ್ರದ ಈ ನಿರ್ಧಾರದ ಹಿಂದೆ ಸಮಾಜದ ಎಲ್ಲ ಸಮುದಾಯಗಳ ಹಿತ ಅಡಗಿದೆ. ಒಟ್ಟಾರೆ ಜನಗಣತಿ ಜೊತೆಗೆ ಜಾತಿವಾರು ನಿಖರ ಮಾಹಿತಿ ಸಂಗ್ರಹಿಸುತ್ತಿರುವುದು

ಸಾಮಾಜಿಕ, ಆರ್ಥಿಕ ರಚನೆ ಜೊತೆಗೆ ನಮ್ಮ ಒಕ್ಕೂಟ ವ್ಯವಸ್ಥೆಯನ್ನು ಸಹ ಮತ್ತಷ್ಟು ಬಲಪಡಿಸಲಿದೆ ಎಂದು ಗುರುವಾರ ಇಲ್ಲಿ ಹೊರಡಿಸಿರುವ ಪ್ರಕಟಣೆಯಲ್ಲಿ

ಅಭಿಪ್ರಾಯಪಟ್ಟಿದ್ದಾರೆ.

ಸ್ವಾತಂತ್ರ್ಯನಂತರ ನಡೆದಿರುವ ಎಲ್ಲ ಜನಗಣತಿ ಸಂದರ್ಭದಲ್ಲಿ ಜಾತಿ ಸೇರಿಸಲಿಲ್ಲ. ಈ ಹಿಂದೆ ದೀರ್ಘ ಕಾಲ ಆಡಳಿತದಲ್ಲಿದ್ದ ಕಾಂಗ್ರೆಸ್ ಪಕ್ಷ ಸತತವಾಗಿ ಜಾತಿ ಗಣತಿಗೆ ವಿರೋಧಿಸಿದೆ. ಕಾಂಗ್ರೆಸ್ ಸದಾ ವೋಟ್ ಬ್ಯಾಂಕ್ ರಾಜಕೀಯ, ತುಷ್ಟೀಕರಣ ರಾಜಕೀಯ ಮಾಡುತ್ತಿದ್ದರಿಂದ ಈ ಕಾರ್ಯ ಕೈಗೊಂಡಿಲ್ಲ. ಆದರೆ ಎನ್ ಡಿಎ ಸರ್ಕಾರ ಎಲ್ಲ ಜನಾಂಗದವರ ಅಭಿವೃದ್ಧಿ ಧ್ಯೇಯದಿಂದ ಈಗ ಮಹತ್ವದ ನಿರ್ಧಾರ ಕೈಗೊಂಡಿದೆ. ಬಿಜೆಪಿ ಸದಾ ಎಲ್ಲ ಜಾತಿಗಳ ವಿಕಾಸ ಬಯಸುತ್ತದೆ ಎಂಬುದಕ್ಕೆ ಈ ನಿರ್ಧಾರ ಸಾಕ್ಷಿ ಎಂದು ಬಣ್ಣಿಸಿದ್ದಾರೆ.

ಜನಗಣತಿ ಮಾಡುವುದು ಸಂವಿಧಾನಬದ್ಧವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ.

ಆದರೆ ರಾಜ್ಯದಲ್ಲಿ ಆರ್ಥಿಕ, ಸಾಮಾಜಿಕ ಸಮೀಕ್ಷೆ ಹೆಸರಿನಲ್ಲಿ ಅವೈಜ್ಞಾನಿಕ ಜಾತಿಗಣತಿಯನ್ನು ನಡೆಸಿ ಸಮಾಜದಲ್ಲಿ ಜಗಳ ಹಚ್ಚುವ ಕೆಲಸ ಮಾಡಲಾಗಿದೆ. ಕೆಲವೇ ತಿಂಗಳಲ್ಲಿ ಕೇಂದ್ರ ಸರ್ಕಾರದ ಸಮಗ್ರ ಗಣತಿ ನಡೆಸಿ ವಾಸ್ತವ ಅಂಕಿ–ಅಂಶ ದೇಶದ ಮುಂದಿಡಲಿದೆ. ಆಗ ರಾಜ್ಯ ಸರ್ಕಾರ ತನ್ನ ಸ್ವಾರ್ಥದ ಬೇಳೆ ಬೇಯಿಸಿಕೊಳ್ಳಲು

ನಡೆಸಿದ ಸಮೀಕ್ಷಾ ವರದಿಯ ನಿಜ ಬಣ್ಣ ಸಹ ಬಯಲಾಗಲಿದೆ ಎಂದು ಬೆಲ್ದಾಳೆ ಹೇಳಿದ್ದಾರೆ.

ಸಮಾಜದ ಸರ್ವ ಸಮುದಾಯದ ಹಿತದಿಂದ ಕೇಂದ್ರ ಸರ್ಕಾರ ಜಾತಿ ಗಣತಿಗೆ ನಿರ್ಧರಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಕದ್ದುಮುಚ್ಚಿ ಅವೈಜ್ಞಾನಿಕವಾಗಿ ಜಾತಿ ಗಣತಿ ನಡೆಸಿ ಸಮಾಜದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಿದೆ. ಕೇಂದ್ರ ಸರ್ಕಾರ ಈಗ ವೈಜ್ಞಾನಿಕವಾಗಿ ಹಾಗೂ ನಿಖರವಾಗಿ ಸಮೀಕ್ಷೆ ಮಾಡಿ ವಾಸ್ತವ ಅಂಕಿ–ಅಂಶ ಜನರ ಮುಂದಿಡಲಿದೆ. ಇದು ಎಲ್ಲ ಸಮುದಾಯಗಳ ಆರ್ಥಿಕ ವಿಕಾಸಕ್ಕೆ ಪೂರಕವಾಗಲಿದೆ.

–ಡಾ.ಶೈಲೇಂದ್ರ ಬೆಲ್ದಾಳೆ
ಬೀದರ್ ದಕ್ಷಿಣ ಶಾಸಕರು
ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ

## ಜಿಎಸ್ ಟಿ ಸಾರ್ವಕಾಲಿಕ ದಾಖಲೆ: ಏಪ್ರಿಲ್ ತಿಂಗಳಲ್ಲಿ 2.36 ಲಕ್ಷ ಕೋಟಿ ರೂ. ಸಂಗ್ರಹ




ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಮೇ.1: ಕಳೆದ ಏಪ್ರಿಲ್ ತಿಂಗಳಲ್ಲಿ ಸರಕು ಮತ್ತು ಸೇವಾ ತೆರಿಗೆ(ಜಿಎಸ್ ಟಿ) ಸಂಗ್ರಹ ಸಾರ್ವಕಾಲಿಕ ದಾಖಲೆ ಬರೆದಿದ್ದು, 2.36 ಲಕ್ಷ ಕೋಟಿ ರೂ. ಸಂಗ್ರಹವಾಗಿದ್ದು, ಹಿಂದಿನ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ ಶೇ. 12.6 ರಷ್ಟು ಹೆಚ್ಚಾಗಿದೆ. ಏಪ್ರಿಲ್ ನಲ್ಲಿ ಒಟ್ಟು ಜಿಎಸ್ ಟಿ ಆದಾಯ 2.36 ಲಕ್ಷ ಕೋಟಿ ರೂಪಾಯಿ ಸಂಗ್ರವಾಗಿದ್ದು, ಇದು ಕಳೆದ ವರ್ಷದ ಏಪ್ರಿಲ್ ನಲ್ಲಿ ಸಂಗ್ರಹವಾಗಿದ್ದ 2.10 ಲಕ್ಷ ಕೋಟಿ ರೂ. ಗೆ ಹೋಲಿಸಿದರೆ ಜಿಎಸ್‌ಟಿ ಸಂಗ್ರಹದಲ್ಲಿ ಶೇ. 12.6 ರಷ್ಟು ಹೆಚ್ಚಳವಾಗಿದೆ.

ದೇಶೀಯ ವಹಿವಾಟುಗಳಿಂದ ಬರುವ ಒಟ್ಟು ಆದಾಯವು ಶೇ. 10.7 ರಷ್ಟು ಹೆಚ್ಚಾಗಿ 1.89 ಲಕ್ಷ ಕೋಟಿ ರೂ. ಗೆ ತಲುಪಿದ್ದರೆ, ಆಮದುಗಳಿಂದ ಬರುವ ಆದಾಯವು ಶೇ. 21 ರಷ್ಟು ಹೆಚ್ಚಾಗಿ 46,900 ಕೋಟಿ ರೂ. ಗಳಿಗೆ ತಲುಪಿದೆ. ಒಟ್ಟು ಮರುಪಾವತಿಗಳು ಶೇ. 48 ರಷ್ಟು ಹೆಚ್ಚಾಗಿ 27,341 ಕೋಟಿ ರೂ. ಗಳಿಗೆ ತಲುಪಿದೆ.

ಮರುಪಾವತಿಗಳನ್ನು ಸರಿ ಹೊಂದಿಸಿದ ನಂತರ ನಿವ್ವಳ ಜಿಎಸ್ ಟಿ ಸಂಗ್ರಹವು ಸರಾಸರಿ ಶೇ 9.5 ರಷ್ಟು ಹೆಚ್ಚಾಗಿ ಜಿಎಸ್ಟಿಯ ಬೆಳವಣಿಗೆಯ ಸಾಮರ್ಥ್ಯದ ಶುದ್ಧತ್ವವನ್ನು ತೋರಿಸುತ್ತದೆ. ಹೊಸ ಹಣಕಾಸು ವರ್ಷದಲ್ಲಿ ನಿವ್ವಳ ಆದಾಯವು ಸರಾಸರಿ ಶೇ. 8.6 ರಷ್ಟು ಬೆಳವಣಿಗೆಯಾಗಿದೆ.

ಪ್ರಸಕ್ತ ಹಣಕಾಸು ವರ್ಷದ ಮೊದಲ ತಿಂಗಳಲ್ಲಿ ನಿವ್ವಳ ಜಿಎಸ್‌ಟಿ ಸಂಗ್ರಹವು 2 ಲಕ್ಷ ಕೋಟಿ ರೂ. ದಾಟಿರುವುದು ಹಿಂದಿನ ಹಣಕಾಸು ವರ್ಷದ ಕೊನೆಯ ತಿಂಗಳಲ್ಲಿ ಬಲವಾದ ಆರ್ಥಿಕ ಕಾರ್ಯಕ್ಷಮತೆಯನ್ನು ಸೂಚಿಸುತ್ತದೆ. ಏಕೆಂದರೆ ಇದು ಮಾರ್ಚ್ 25ರಲ್ಲಿ ಸರಕು ಮತ್ತು ಸೇವೆಗಳಲ್ಲಿನ ವಹಿವಾಟುಗಳಿಗೆ ಸಂಬಂಧಿಸಿದೆ ಎಂದು ಡೆಲಾಯ್ಟ್ ಇಂಡಿಯಾದ ಪಾಲುದಾರ ಎಂ.ಎಸ್. ಮಣಿ ಅವರು ಹೇಳಿದ್ದಾರೆ.

## ಪಾಕಿಸ್ತಾನಕ್ಕೆ ಟೊಮ್ಯಾಟೊ ರಫ್ತು ಬಂದ್

ಮಲ್ಲಮ್ಮ ನುಡಿ ವಾರ್ತೆ
ಕೋಲಾರ:ಮೇ.1: ಪಹಲ್ಗಾಮ್ ದಾಳಿ ಬಳಿಕ ಭಾರತೀಯ ಸೇನಾ ದಾಳಿ ಭೀತಿಯಲ್ಲಿರುವ ಪಾಕಿಸ್ತಾನಕ್ಕೆ ನಮ್ಮ ಕೋಲಾರದ ರೈತರೂ ಕೂಡ ಶಾಕ್ ನೀಡಿದ್ದು, ಇಷ್ಟು ದಿನ ಪಾಕಿಸ್ತಾನಕ್ಕೆ ರವಾನೆಯಾಗುತ್ತಿದ್ದ ಅಪಾರ ಪ್ರಮಾಣದ ಟೊಮ್ಯಾಟೊ ಬಂದ್ ಆಗಿದೆ.ಹೌದು..ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಪಹಲ್ಗಾಮ್ ನ ಬೈಸರನ್ ಕಣಿವೆಯಲ್ಲಿ ನಡೆದ ಉಗ್ರದಾಳಿಯಲ್ಲಿ 26 ಮಂದಿ ಪ್ರವಾಸಿಗರು ಸಾವನ್ನಪ್ಪಿದ ಬೆನ್ನಲ್ಲೇ ಪಾಕಿಸ್ತಾನದ ಮೇಲೆ ಭಾರತ ಪ್ರತೀಕಾರ ತೀರಿಸಿಕೊಳ್ಳಲಿದೆ ಎಂದು ಹೇಳಲಾಗುತ್ತಿದೆ.ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ಹಲವು ಸರಣಿ ಸಭೆಗಳನ್ನು ನಡೆಸಿ ಮುಂದಿನ ಕ್ರಮಗಳ ಕುರಿತು ಚರ್ಚೆ ನಡೆಸಿದರು. ಈಗಾಗಲೇ ಪಾಕಿಸ್ತಾನದ ವಿರುದ್ಧ ಭಾರತ ಸಿಂಧೂನದಿ ನೀರು ಸ್ಥಗಿತ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಂಡಿದ್ದು, ಉಭಯ ದೇಶಗಳ ನಡುವಿನ ಬಹುತೇಕ ಎಲ್ಲ ರೀತಿಯ ವ್ಯಾಪಾರ ಸಂಬಂಧಗಳನ್ನು ಸ್ಥಗಿತಗೊಳಿಸಲಾಗಿದೆ.

## ದಲಿತರಿಗೆ ಸೂಕ್ತ ರಕ್ಷಣೆ ನೀಡಲು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ಸಚಿವ ಈಶ್ವರ ಖಂಡ್ರೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ
ಬೀದರ: ಮೇ.1: ಬೀದರ್ ಜಿಲ್ಲೆಯ ಕೆಲವು ಕಡೆ ದಲಿತರ ಮೇಲೆ ಹಲ್ಲೆ ನಡೆದಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ತ್ವರಿತ ಕ್ರಮಕ್ಕೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಗೆ ಸೂಚನೆ ನೀಡಿದ್ದಾರೆ.

ದೂರಿನಲ್ಲಿ ನೊಂದವರು ತಕ್ಷಣವೇ ರಕ್ಷಣೆ ಪಡೆಯಬೇಕು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಸಚಿವರು ಹೇಳಿದ್ದಾರೆ. ಬಸವಣ್ಣರು ನಿರ್ಮಿಸಿದ ಸಮತೆಯ ಸಮಾಜದ ತತ್ವಗಳಿಗೆ ಹಾಗೂ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಬೋಧಿಸಿದ ಸಂವಿಧಾನಾತ್ಮಕ ಮೌಲ್ಯಗಳಿಗೆ ಅಪಮಾನವಾಗುವಂತಹ ಇಂತಹ ಘಟನೆಗಳು ನಡೆದಿರುವುದರ ಬಗ್ಗೆ ಸಚಿವರು ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ.ಸಾರ್ವಜನಿಕ ಕಾರ್ಯಕ್ರಮಗಳು, ಜಯಂತಿ ಉತ್ಸವಗಳ ಸಂದರ್ಭದಲ್ಲಿ ಯಾವುದೇ ರೀತಿಯ ಜನಾಂಗೀಯ ಉದ್ವಿಗ್ನತೆ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ತಪ್ಪಿತಸ್ಥರು ಯಾರೇ ಆಗಿರಲಿ, ಅವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕು. ಮುಗ್ಧ ಜನರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.ಖುದಾವಂದಪೂರ ಘಟನೆಯ ಕುರಿತು ಸಚಿವರು ತೀವ್ರ ಖಂಡನೆ ವ್ಯಕ್ತಪಡಿಸಿ, "ಬೀದರ್ ಶಾಂತಿಯ ತೋಟ. ಇಲ್ಲಿನ ಸೌಹಾರ್ದತೆಯ ವಾತಾವರಣಕ್ಕೆ ಧಕ್ಕೆಯಾಗದಂತೆ ಪ್ರತಿಯೊಬ್ಬರೂ ಜವಾಬ್ದಾರಿ

ಹೊತ್ತು ನಡೆದುಕೊಳ್ಳಬೇಕು. ವೈಯಕ್ತಿಕ ವಿಚಾರಗಳನ್ನು ಸಾರ್ವತ್ರೀಕರಣ ಮಾಡುವ ಪ್ರಯತ್ನದಿಂದ ಶಾಂತಿ ಕದಡುವಂತಾಗಬಾರದು.ಒಂದು ಕಿಡಿಯನ್ನು ನಿರ್ಲಕ್ಷಿಸಿದರೆ ಅದು ಬೆಂಕಿಯ ಜ್ವಾಲೆಯಾಗುತ್ತದೆ," ಎಂದು ತಿಳಿಸಿದ್ದಾರೆ.

ಮುಂದೆ ಇಂತಹ ಘಟನೆಗಳು ಮರುಕಳಿಸಿದರೆ, ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಯನ್ನೇ ನೇರವಾಗಿ ಹೊಣೆ ಮಾಡಲಾಗುವುದು ಎಂಬ ಎಚ್ಚರಿಕೆಯನ್ನೂ ಅವರು ನೀಡಿದ್ದಾರೆ.

## ಬಸವ ಜಯಂತಿ ಯಶಸ್ವಿ: ಕೃತಜ್ಞತೆ




ಮಲ್ಲಮ್ಮ ನುಡಿ ವಾರ್ತೆ
ಬೀದರ.ಮೇ.01:ಸಮಾಜದವರ ಸಹಕಾರದಿಂದಾಗಿ ಈ ಬಾರಿಯ ಮೂರು ದಿನಗಳ ಬಸವ ಜಯಂತಿ ಉತ್ಸವ ಅತ್ಯಂತ ಯಶಸ್ವಿಯಾಗಿದೆ ಎಂದು ಬಸವ ಜಯಂತಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ ಹೇಳಿದ್ದಾರೆ.

ಸಾಮೂಹಿಕ ಇಷ್ಟಲಿಂಗ ಪೂಜೆ, ವಚನ ಪಾರಾಯಣ, ಉಪನ್ಯಾಸ, ವಚನ ಸಂಗೀತ, ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಭಾವಚಿತ್ರ ಹಾಗೂ ವಚನ ಸಾಹಿತ್ಯದ ಮೆರವಣಿಗೆ ಅದ್ಧೂರಿ ಹಾಗೂ ಅರ್ಥಪೂರ್ಣವಾಗಿ ನೆರವೇರಿವೆ ಎಂದು ತಿಳಿಸಿದ್ದಾರೆ.


ಜಯಂತಿ ಉತ್ಸವ ಯಶಸ್ವಿಯಾಗಿದ್ದರಿಂದ ಉತ್ಸವ ಸಮಿತಿಯ ಶ್ರಮ ಸಾರ್ಥಕವಾಗಿದೆ. ಉತ್ಸವದ ಯಶಸ್ವಿಗೆ ಕಾರಣಕರ್ತರಾದ ಜನಪ್ರತಿನಿಧಿಗಳು, ಮಠಾಧೀಶರು, ರಾಜಕೀಯ ಗಣ್ಯರು, ಲಿಂಗಾಯತ ಸಮಾಜದ ಮುಖಂಡರು, ಬಸವ ಪರ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಎಲ್ಲ ಸಮಾಜಗಳ ಬಸವ ಭಕ್ತರು, ಬಸವಾನುಯಾಯಿಗಳು ಹಾಗೂ ಸಾರ್ವಜನಿಕರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದ್ದಾರೆ.

## ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ವಿಶ್ವಗುರು ಬಸವಣ್ಣವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ
ಬೀದರ್:ಮೇ.1: ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಕರ್ನಾಟಕ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣವರ 892ನೇ ಜಯಂತಿ ಆಚರಿಸಲಾಯಿತು, ಇದೇ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್ ಅಧ್ಯಕ್ಷರಾದ ರಮೇಶ್ ಪಾಟೀಲ್ ಸೋಲಪುರೆ ಅವರು ವಿಶ್ವಗುರು ಬಸವಣ್ಣವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಅಶೋಕ್ ಕೊಡಗೆ, ಜಿಲ್ಲಾ ಜೆಡಿಎಸ್ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರಾದ ಸಜ್ಜತ್ ಸಾಹೇಬ್, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ ಡಿ ಅಸದ್, ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕರಂಜಿ, ಜೆಡಿಎಸ್ ಮುಖಂಡರಾದ ಜಾನ್ಸನ್ ಕಪ್ಲಾಪೂರ್, ಶ್ರೀಮತಿ ಶಾಂತಮ್ಮ, ನಗರಸಭೆ ಸದಸ್ಯರಾದ ಸಂಗು ಚಿದ್ರಿ, ಸೀರೋಮಣಿ ಬೂದೆರಾ, ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಗಾಂಧಿಗಂಜ್: ಇಂದು ಪ್ರಸಾದ ವಿತರಣೆ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಮೇ. 01:ಬಸವ ಜಯಂತಿ ಅಂಗವಾಗಿ ಇಲ್ಲಿಯ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಶುಕ್ರವಾರ (ಮೇ 2) ಪ್ರಸಾದ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಗಾಂಧಿಗಂಜನ ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ. ಬೆಳಿಗ್ಗೆ 11 ರಿಂದ ಸಂಜೆ 7 ರ ವರೆಗೆ ಪ್ರಸಾದ ವಿತರಣೆ ನಡೆಯಲಿದೆ. ಜಿಲ್ಲೆಯ ಮಠಾಧೀಶರು, ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದ್ದಾರೆ. ನಾಡಿನ ಜನರ ಸುಖ, ಶಾಂತಿ, ಸಮೃದ್ಧಿಗೆ ಪ್ರಾರ್ಥಿಸಿ ಜಾತಿ, ಮತ, ಪಂಥಗಳ ಭೇದವಿಲ್ಲದೆ ಗಾಂಧಿಗಂಜನ ಸಮಸ್ತ ವ್ಯಾಪಾರಿಗಳ ವತಿಯಿಂದ 35 ವರ್ಷಗಳಿಂದ ಪ್ರತಿ ವರ್ಷ ಪ್ರಸಾದ ವಿತರಣೆ ಸೇವೆ ನಡೆಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದ್ದಾರೆ. ರೈತರು, ವ್ಯಾಪಾರಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರಸಾದ ಸವಿಯಬೇಕು ಎಂದು ಮನವಿ ಮಾಡಿದ್ದಾರೆ.

**CITATION**

**IN THE COURT OF THE PRL. CIVIL JUDGE AND JMFC., HUMNABAD AT HUMNABAD**

**CRL. MISC. NO. 2400/2024**

Petitioners :-

1. Gudusab S/o Late Mohamed Husain Age 63 R/o Kappargaon Tq: Humnabad
2. Abdul Khadar S/o Late Mohamed Husain Age. 61 R/o Kappargaon Tq:Humnabad

Respondent:-

The Registrar of Birth and Death-through Tahasildar, Officer Humnabad.

Whereas the above named petitioner has filed the petition under section 13(3) of Birth and Death Registration Act 1969 praying this Hon'ble court to issue Death certificate of Their grand father Late Mohamed Husain S/o Mohammed Ghudusab, who died on dated 20-07-2002 at Kappargaon Humnabad. The petitioner claiming the death certificate of deceased Abeda Bee W/o Late Mohamed Husain, for transfer of property and other official purpose and home record.

Therefore, it is hereby proclaimed that if any person or persons have got any objection in this regard, may he/they May approach to this Honorable court on 26/05/2025 at 08.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22nd day of March-2025

//By order of the court//
Chief Ministerial Officer,
Prl.Civil Judge and JMFC
Humnabad.

**CITATION**

**IN THE COURT OF THE PRL. CIVIL JUDGE AND JMFC., HUMNABAD AT HUMNABAD**

**CRL. MISC. NO. 2399/2024**

Petitioners :-

1. Gudusab S/o Late Mohamed Husain Age 63 R/o Kappargaon Tq: Humnabad
2. Abdul Khadar S/o Late Mohamed Husain Age. 61 R/o Kappargaon Tq:Humnabad

Respondent:-

The Registrar of Birth and Death-through Tahasildar, Officer Humnabad.

Whereas the above named petitioner has filed the petition under section 13(3) of Birth and Death Registration Act 1969 praying this Hon'ble court to issue Death certificate of Their grand mother Late LATE Abeda Bee W/o Late Mohamed Husain, who died on dated 25-07-2009 at Kappargaon Humnabad. The petitioner claiming the death certificate of deceased Abeda Bee W/o Late Mohamed Husain, for transfer of property and other official purpose and home record.


Therefore, it is hereby proclaimed that if any person or persons have got any objection in this regard, may he/they May approach to this Honorable court on 26/05/2025 at 08.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22nd day of March-2025

**//By order of the court//**
**Chief Ministerial Officer,**
**Prl.Civil Judge and JMFC**
**Humnabad.**

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9632899236

# ಹಾರಕೂಡ ಪೂಜ್ಯರಿಂದ ನೂತನ ಬೆಳ್ಳಿ ಪಲ್ಲಕಿಗೆ ಪೂಜೆ.



(ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಮಾ1 ಇಲ್ಲಿನ ಶ್ರೀ ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ನಿಮಿತ್ತವಾಗಿ ಗುರುವಾರ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ವಿಶ್ವಗುರು ಬಸವಣ್ಣನವರ ಬೆಳ್ಳಿ ಪಲ್ಲಕ್ಕಿಗೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೋರಕೆ, ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ, ಮುಖಂಡರಾದ ಧನರಾಜ ತಾಡಂಪಳ್ಳಿ, ಪ್ರದೀಪ ವಾತಡೆ, ಶ್ರೀಮತಿ ಸಾವಿತ್ರಿಶರಣು ಸಲಗರ. ಶ್ರೀಕಾಂತಬಡದಾಳೆ,ವಿವೇಕಾನಂದ ಹೂದಲೂರೆ.ಮನೋಹರಮೈಸೆ. ಆಕಾಶ ಖಂಡಾಳೆ. ಬಂಡೆಪ್ಪ ಮೇತ್ರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



(ಡಿ. ಕೆ. ಪ್ರಹ್ಲಾದ)

ಬಸವಕಲ್ಯಾಣ :- ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ನಿಮಿತ್ತವಾಗಿ ಬುಧವಾರದಂದು ಬಸವಣ್ಣನವರ ಬೆಳ್ಳಿ ತೊಟ್ಟಿಲು ಮೆರವಣಿಗೆ ಯಾಗುವ ಮುಂಚೆ ಬಸವೇಶ್ವರ ದೇವಸ್ಥಾನದಲ್ಲಿ ಷಟಸ್ಥಲ ಧ್ವಜಾರೋಹಣ ವನ್ನು ವಿಜಾಪುರದ ಬಾಲಗಾಂವದ ಪೂಜ್ಯಶ್ರೀ ಅಮೃತಾನಂದ ಸ್ವಾಮೀಜಿಯವರು ನೆರವೇರಿಸಿದರು. ಶಾಸಕರಾದ ಶರಣು ಸಲಗರ್. ದೇವಸ್ಥಾನದ ಅಧ್ಯಕ್ಷರಾದ ಬಸವರಾಜ ಕೊರಕೆ. ವಿಶ್ವಸ್ಥ ಸಮಿತಿಯ ಅಧ್ಯಕ್ಷರಾದ ಶಶಿಕಾಂತ ದುರ್ಗೆ. ಪ್ರಮುಖರಾದ ಡಾ. ಜಿ. ಎಸ್. ಭುರಳೆ. ವೀರಣ್ಣ ಹಲಶೇಟ್ಟೆ. ವಿವೇಕಾನಂದ ಹೊದಲೂರೆ . ಕಾಶಪ ಸಕ್ಕರಬಾವಿ. ಭದ್ರಿನಾಥ ಪಾಟೀಲ. ಜಗನ್ನಾಥ ಖೂಬಾ. ನಾಗಯ್ಯಾ ಸ್ವಾಮಿ. ಶಾಮರಾವ್ ಸಿಂಗ್. ವೀರಣ್ಣ ದಳಪತಿ. ಡಾ. ವಿ. ಎಸ್. ಮಠಪತಿ. ಶಿವು ಆಗ್ರೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ:- ಇಲ್ಲಿನ ಶ್ರೀ ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ನಿಮಿತ್ತವಾಗಿ ಬಸವೇಶ್ವರ ದೇವಸ್ಥಾನದಲ್ಲಿ ನಂದಿಧ್ವಜ ಗಳಿಗೆ ಪೂಜೆ ಮಾಡುವುದರೊಂದಿಗೆ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಚಾಲನೆ ನೀಡಿದರು. ಕಲಬುರ್ಗಿಯ ಮಹಾನಗರ ಪಾಲಿಕೆ ಅಧಿಕಾರಿ ಸಾವಿತ್ರಿ ಸಲಗರ. ಹಾಗೂ ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೊರಕೆ. ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಚಿರಡೆ. ಸಹ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ . ನಿರ್ದೇಶಕರಾದ ಮಲ್ಲಯ್ಯಾ ಸ್ವಾಮಿ ಹಿರೇಮಠ. ವಿಶ್ವಸ್ಥ ಸಮಿತಿಯ ಅಧ್ಯಕ್ಷರಾದ ಶಶಿಕಾಂತ ದುರ್ಗೆ. ಕಾರ್ಯದರ್ಶಿ ನಾಗಯ್ಯಾ ಸ್ವಾಮಿ. ಹಾಗೂ ಮಾಜಿ ಶಾಸಕರಾದ ಮಲ್ಲಿಕಾರ್ಜುನ ಎಸ್ ಖೂಬಾ. ಮುಖಂಡರಾದ ಪ್ರದೀಪ ವಾತಡೆ. ಧನರಾಜ ತಾಡಂಪ್ಪಳ್ಳಿ. ಮನೋಹರ ಮೈಸೆ. ಅರ್ಜುನ ಕನಕ. ರಾಜಕುಮಾರ ಫಾಳೆ. ಬಂಡೆಪ್ಪ ಮೇತ್ರೆ. ಸುರೇಶ್ ಸ್ವಾಮಿ. ಆಕಾಶ ಖಂಡಾಳೆ. ಸುನೀಲ ಮೆಟಗೆ. ಅಮರ್ ಬಡದಾಳೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ:- ಇಲ್ಲಿನ ಶ್ರೀ ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ನಿಮಿತ್ತವಾಗಿ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಬಿಡಿಪಿಸಿ ನಿರ್ದೇಶಕಿ ವಿಜಯಲಕ್ಷ್ಮಿ ಗಡ್ಡೆ ಅಧ್ಯಕ್ಷತೆಯಲ್ಲಿ ತೊಟ್ಟಿಲು ಕಾರ್ಯಕ್ರಮ ಜರುಗಿತು. ಕಲಬುರ್ಗಿಯ ಮಹಾನಗರ ಪಾಲಿಕೆ ಅಧಿಕಾರಿ ಸಾವಿತ್ರಿ ಸಲಗರ. ಪ್ರಮುಖರಾದ ಸ್ನೇಹ ಕೊರಕೆ. ರಂಜನಾ ದುರ್ಗೆ. ರಾಜೇಶ್ವರಿ ಖೂಬಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.(ಮಲ್ಲಮ್ಮ ನುಡಿ ಚಿತ್ರ)

# ಸರ್ವ ಸಮಾಜದ ಅಭಿವೃದ್ಧಿಗೆ ಜಾತಿ ಜನಗಣತಿ ಪೂರಕ: ಬೆಲ್ದಾಳೆ



ಸಮಾಜದ ಸರ್ವ ಸಮುದಾಯದ ಹಿತದಿಂದ ಕೇಂದ್ರ ಸರ್ಕಾರ ಜಾತಿ ಗಣತಿಗೆ ನಿರ್ಧರಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಕದ್ದುಮುಚ್ಚಿ ಅವೈಜ್ಞಾನಿಕವಾಗಿ ಜಾತಿ ಗಣತಿ ನಡೆಸಿ ಸಮಾಜದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಿದೆ. ಕೇಂದ್ರ ಸರ್ಕಾರ ಈಗ ವೈಜ್ಞಾನಿಕವಾಗಿ ಹಾಗೂ ನಿಖರವಾಗಿ ಸಮೀಕ್ಷೆ ಮಾಡಿ ವಾಸ್ತವ ಅಂಕಿ-ಅಂಶ ಜನರ ಮುಂದಿಡಲಿದೆ. ಇದು ಎಲ್ಲ ಸಮುದಾಯಗಳ ಆರ್ಥಿಕ ವಿಕಾಸಕ್ಕೆ ಪೂರಕವಾಗಲಿದೆ.

**-ಡಾ.ಶೈಲೇಂದ್ರ ಬೆಲ್ದಾಳೆ**
**ಬೀದರ್ ದಕ್ಷಿಣ ಶಾಸಕರು ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ**

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ದೇಶ ಸ್ವಾತಂತ್ರ್ಯದ ಬಳಿಕ ಮೊದಲ ಬಾರಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಎನ್ ಡಿಎ ಸರ್ಕಾರ ಜನಗಣತಿಯೊಂದಿಗೆ ಜಾತಿ ಗಣತಿ ಸಹ ಮಾಡುವ ದಿಟ್ಟ ನಿರ್ಧಾರ ಕೈಗೊಂಡಿರುವುದು ಐತಿಹಾಸಿಕವಾಗಿದೆ. ಇದು ಸರ್ವ ಸಮುದಾಯದವರಿಗೂ ಸಾಮಾಜಿಕ ನ್ಯಾಯ ಕಲ್ಪಿಸಲು ಪೂರಕವಾದ ಕ್ರಾಂತಿಕಾರಿ ಕ್ರಮ ಎನಿಸಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ,ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದ್ದಾರೆ. 1931ರ ಬಳಿಕ ಇದೇ ಮೊದಲ ಬಾರಿಗೆ ದೇಶದಲ್ಲಿ ಜಾತಿ ಗಣತಿ ನಡೆಯುತ್ತಿರುವುದು ಸ್ವಾಗತಾರ್ಹ. ಕೇಂದ್ರದ ಈ ನಿರ್ಧಾರದ ಹಿಂದೆ ಸಮಾಜದ ಎಲ್ಲ ಸಮುದಾಯಗಳ ಹಿತ ಅಡಗಿದೆ. ಒಟ್ಟಾರೆ ಜನಗಣತಿ ಜೊತೆಗೆ ಜಾತಿವಾರು ನಿಖರ ಮಾಹಿತಿ ಸಂಗ್ರಹಿಸುತ್ತಿರುವುದು

ಸಾಮಾಜಿಕ, ಆರ್ಥಿಕ ರಚನೆ ಜೊತೆಗೆ ನಮ್ಮ ಒಕ್ಕೂಟ ವ್ಯವಸ್ಥೆಯನ್ನು ಸಹ ಮತ್ತಷ್ಟು ಬಲಪಡಿಸಲಿದೆ ಎಂದು ಗುರುವಾರ ಇಲ್ಲಿ ಹೊರಡಿಸಿರುವ ಪ್ರಕಟಣೆಯಲ್ಲಿ ಅಭಿಪ್ರಾಯಪಟ್ಟಿದ್ದಾರೆ. ಸ್ವಾತಂತ್ರ್ಯ ನಂತರ ನಡೆದಿರುವ ಎಲ್ಲ ಜನಗಣತಿ ಸಂದರ್ಭದಲ್ಲಿ ಜಾತಿ ಸೇರಿಸಲಿಲ್ಲ. ಈ ಹಿಂದೆ ದೀರ್ಘ ಕಾಲ ಆಡಳಿತದಲ್ಲಿದ್ದ ಕಾಂಗ್ರೆಸ್ ಪಕ್ಷ ಸತತವಾಗಿ ಜಾತಿ ಗಣತಿಗೆ ವಿರೋಧಿಸಿದೆ. ಕಾಂಗ್ರೆಸ್ ಸದಾ ವೋಟ್ ಬ್ಯಾಂಕ್ ರಾಜಕೀಯ, ತುಷ್ಟೀಕರಣ ರಾಜಕೀಯ ಮಾಡುತ್ತಿದ್ದರಿಂದ ಈ ಕಾರ್ಯ ಕೈಗೊಂಡಿಲ್ಲ. ಆದರೆ ಎನ್ ಡಿಎ ಸರ್ಕಾರ ಎಲ್ಲ ಜನಾಂಗದವರ ಅಭಿವೃದ್ಧಿ ಧ್ಯೇಯದಿಂದ ಈಗ ಮಹತ್ವದ ನಿರ್ಧಾರ ಕೈಗೊಂಡಿದೆ. ಬಿಜೆಪಿ ಸದಾ ಎಲ್ಲ ಜಾತಿಗಳ ವಿಕಾಸ ಬಯಸುತ್ತದೆ ಎಂಬುದಕ್ಕೆ ಈ ನಿರ್ಧಾರ ಸಾಕ್ಷಿ ಎಂದು ಬಣ್ಣಿಸಿದ್ದಾರೆ. ಜನಗಣತಿ ಮಾಡುವುದು ಸಂವಿಧಾನಬದ್ಧವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ.

ಆದರೆ ರಾಜ್ಯದಲ್ಲಿ ಆರ್ಥಿಕ, ಸಾಮಾಜಿಕ ಸಮೀಕ್ಷೆ ಹೆಸರಿನಲ್ಲಿ ಅವೈಜ್ಞಾನಿಕ ಜಾತಿ ಗಣತಿಯನ್ನು ನಡೆಸಿ ಸಮಾಜದಲ್ಲಿ ಜಗಳ ಹಚ್ಚುವ ಕೆಲಸ ಮಾಡಲಾಗಿದೆ. ಕೆಲವೇ ತಿಂಗಳಲ್ಲಿ ಕೇಂದ್ರ ಸರ್ಕಾರದ ಸಮಗ್ರ ಗಣತಿ ನಡೆಸಿ ವಾಸ್ತವ ಅಂಕಿ-ಅಂಶ ದೇಶದ ಮುಂದಿಡಲಿದೆ. ಆಗ ರಾಜ್ಯ ಸರ್ಕಾರ ತನ್ನ ಸ್ವಾರ್ಥದ ಬೇಳೆ ಬೇಯಿಸಿಕೊಳ್ಳಲು

ನಡೆಸಿದ ಸಮೀಕ್ಷಾ ವರದಿಯ ನಿಜ ಬಣ್ಣ ಸಹ ಬಯಲಾಗಲಿದೆ ಎಂದು ಬೆಲ್ದಾಳೆ ಹೇಳಿದ್ದಾರೆ.

(ಕೋಟ್)

ಸಮಾಜದ ಸರ್ವ ಸಮುದಾಯದ ಹಿತದಿಂದ ಕೇಂದ್ರ ಸರ್ಕಾರ ಜಾತಿ ಗಣತಿಗೆ ನಿರ್ಧರಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಕದ್ದುಮುಚ್ಚಿ ಅವೈಜ್ಞಾನಿಕವಾಗಿ ಜಾತಿ ಗಣತಿ ನಡೆಸಿ ಸಮಾಜದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಿದೆ. ಕೇಂದ್ರ ಸರ್ಕಾರ ಈಗ ವೈಜ್ಞಾನಿಕವಾಗಿ ಹಾಗೂ ನಿಖರವಾಗಿ ಸಮೀಕ್ಷೆ ಮಾಡಿ ವಾಸ್ತವ ಅಂಕಿ-ಅಂಶ ಜನರ ಮುಂದಿಡಲಿದೆ. ಇದು ಎಲ್ಲ ಸಮುದಾಯಗಳ ಆರ್ಥಿಕ ವಿಕಾಸಕ್ಕೆ ಪೂರಕವಾಗಲಿದೆ ಎಂದರು.

# ಗ್ಲೋಬಲ್ ಐಕಾನಿಕ್ ಎಕ್ಸಲೆನ್ಸ್ ಪ್ರಶಸ್ತಿಗೆ ಭಾಜನರಾದ ಯುವ ಪತ್ರಕರ್ತ ರಾಜಕುಮಾರ ಆರ್. ಹಡಪದ






ನನ್ನ ಪತ್ರಿಕೋದ್ಯಮದ ಸಾಮಾಜಿಕ ಸೇವೆ ಗುರುತಿಸಿ ಬೆಂಗಳೂರಿನ ಪ್ರಗತಿ ಮೀಡಿಯಾ ಸಂಸ್ಥೆಯ ಅವರು ನನಗೆ ನೀಡಿರುವ ಪ್ರಶಸ್ತಿಯನ್ನು ದೊರಕಿದಕ್ಕೆ

ಮಲ್ಲಮ್ಮ ನುಡಿ ದಿನ ಪತ್ರಿಕೆಯ ಸಂಪಾದಕರಿಗೆ, ಪತ್ರಿಕೆ ಓದುಗಾರರಿಗೆ ಹಿತೈಷಿಗಳಿಗೆ ಜಾಹೀರಾತುದಾರರಿಗೆ, ನಾಡಿನ ಜನತೆಗೆ ಕೃತಜ್ಞತೆಗಳು ಸಲ್ಲಿಸುತ್ತೇನೆ.

**ರಾಜಕುಮಾರ ಆರ್. ಹಡಪದ**
**ಪ್ರಶಸ್ತಿ ಪುರಸ್ಕೃತರು ಚಿಟಗುಪ್ಪ**

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:-ಬೀದರ್ ಜಿಲ್ಲೆಯ ಚಿಟಗುಪ್ಪ ಪಟ್ಟಣದ ಯುವ ಪತ್ರಕರ್ತ ರಾಜಕುಮಾರ ಆರ್. ಹಡಪದ ಅವರು ಬೆಂಗಳೂರು ನಗರದ ಪ್ರಗತಿ ಮೀಡಿಯಾ ಸಂಸ್ಥೆ ವತಿಯಿಂದ ಗ್ಲೋಬಲ್ ಐಕಾನಿಕ್ ಎಕ್ಸಲೆನ್ಸ್ ಪ್ರಶಸ್ತಿಯನ್ನ ಪಡೆದುಕೊಂಡಿದ್ದಾರೆ.

ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ ಬೀದರ್ ಜಿಲ್ಲೆಯ ಚಿಟಗುಪ್ಪ ತಾಲೂಕು ವರದಿಗಾರರಾಗಿ ಸುಮಾರು 5 ವರ್ಷಗಳಿಂದ ಸುಧಿರ್ಘವಾಗಿ ಸೇವೆ ಸಲ್ಲಿಸುತ್ತಾ ಸಮಾಜದಲ್ಲಿ ನಡೆಯುವ ಸಿಹಿ ಕಹಿ ಘಟನೆಗಳನ್ನು ಸುದ್ದಿ ಮೂಲಕ ಬೆಳಕಿಗೆ ತರುತ್ತಿರುವುದನ್ನು ಪರಿಗಣಿಸಿ ಹಾಗೂ ಅವರ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಗುರುವಾರ ಸಾಯಂಕಾಲ ರಾಜ್ಯದ ರಾಜಧಾನಿ ಬೆಂಗಳೂರಿನ ಪ್ರಸಿದ್ಧವಾದ ಹೈಡೆನ್ ಪಾರ್ಕ್ ಹೋಟೆಲನಲ್ಲಿ ಪ್ರಗತಿ ಮೀಡಿಯಾ ಸಂಸ್ಥೆ ಆಯೋಜಿಸಿದ್ದ ಕಾರ್ಯಕ್ರಮದ ಉದ್ಘಾಟಕರಾಗಿ ಭಾಗವಹಿಸಿದ್ದ ಬೆಂಗಳೂರಿನ ವಿಕ್ಟೋರಿಯಾ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ವೈದ್ಯಧಿಕಾರಿ ಡಾ. ಟಿ.ಎಚ್. ಅಂಜನಪ್ಪ ಅವರು ರಾಜಕುಮಾರ ಆರ್. ಹಡಪದ ಅವರಿಗೆ ಗ್ಲೋಬಲ್ ಐಕಾನಿಕ್ ಎಕ್ಸಲೆನ್ಸ್ ಪ್ರಶಸ್ತಿ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಡಾ. ಗೋಪಿನಾಥ್, ಪ್ರಗತಿ ಮೀಡಿಯಾ ಸಂಸ್ಥೆ ಅಧ್ಯಕ್ಷ ಆದರ್ಶ್ ಜೈನ್, ಸಾರಥಿ, ರೇಷ್ಮಾ, ಕರ್ನಾಟಕ ಯುವ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಸುನೀಲಕುಮಾರ್, ಕಲ್ಬುರ್ಗಿ ಜಿಲ್ಲೆಯ ಹಡಪದ ಸಮಾಜದ ಸಂಘಟನಾ ಕಾರ್ಯದರ್ಶಿ ಡಾ. ಮಲ್ಲಿಕಾರ್ಜುನ ಬಿ. ಸುಗೂರ್ ಎನ್, ಸೇರಿದಂತೆ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಧನಂಜಯ ನಿರೋಪಿಸಿ ವಂದಿಸಿದರು.

# ಕಿಟ್ಟಾ ಗ್ರಾಮದಲ್ಲಿ ವಿಜೃಂಭಣೆಯಿಂದ ಜರುಗಿದ ಡಾ. ಬಿ. ಆರ್. ಅಂಬೇಡ್ಕರ್ ಅವರ ಜಯಂತಿ ಆಚರಣೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 1 ತಾಲೂಕಿನ ಕಿಟ್ಟಾ ಗ್ರಾಮದಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ರವರ ಜಯಂತಿ ಉತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಪ್ರಸಾದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಹುಲಸೂರಿನ ತಾಲೂಕ ಪಂಚಾಯತ ಸಹಾಯಕ ನಿರ್ದೇಶಕರಾದ ಮಹಾದೇವ ಜಮ್ಮು ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು. ಈ

ಮೆರವಣಿಗೆಯಲ್ಲಿ ಗ್ರಾಮದ ಸಹಸ್ರಾರು ಜನರು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು. ಚಿಕ್ಕ ಮಕ್ಕಳ ಲೇಜಿಮ್ ನೃತ್ಯ ಅತ್ಯಂತ ಆಕರ್ಷಕವಾಗಿತ್ತು. ಡಿಜೆ ಸೌಂಡಿಗೆ ಯುವಕರು ಹೆಜ್ಜೆ ಹಾಕಿದರು. ಗ್ರಾಮದ ಪ್ರಮುಖ ಓಣಿಗಳಲ್ಲಿ ಸಂಚರಿಸಿದ ಮೆರವಣಿಗೆಗೆ ಗಮನ ಸೆಳೆಯಿತು.

ಈ ಸಂದರ್ಭದಲ್ಲಿ ಬಿಎಸ್ಪಿ ಪಕ್ಷದ ತಾಲೂಕ ಅಧ್ಯಕ್ಷರಾದ ಶಂಕರ್ ಫುಲೆ, ಶ್ರಾವಣ ವಾಗಮಾರೆ.ರಾಮಲಿಂಗ ಪಟವಾಡೆ, ಜಗನ್ಮೋಹನ ಮೇತ್ರೆ.ಶ್ರೀನಿವಾಸ ಫುಲೆ, ದುಳಪಾ ಫುಲೆ. ಮುಕುಂದ ಗಾಯಕವಾಡ. ಮಾರುತಿ ಫುಲೆ. ಮಹಾದೇವ ಸಾದು. ಅಂಕುಶ್ ಫುಲೆ. ರಾಹುಲ್. ಯಲ್ಲಾಲಿಂಗ ಫುಲೆ. ವಿವೇಕ ಪಠವಾಡೆ. ನಾಗೇಶ್. ಅಭಿಷೇಕ. ಕವಿರಾಜ್. ಸೇರಿದಂತೆ ಅನೇಕರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

# ಶ್ರೀ ಲಕ್ಷ್ಮೀ ಮೂರ್ತಿ ಪ್ರಾಣ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 01 : ಭಾಲ್ಕಿ ತಾಲೂಕಿನ ಕಣಜಿ ಗ್ರಾಮದ ಸೂಗಾ ಪರಿವಾರದವರ ತೋಟದಲ್ಲಿ ಹಾರಕೂಡದ ಪೂಜ್ಯ ಶ್ರೀ ಷ ಬ್ರ ಡಾ. ಚನ್ನವೀರ ಶಿವಾಚಾರ್ಯರು ತಮ್ಮ ಅಮೃತ ಹಸ್ತದಿಂದ ಶ್ರೀ ಲಕ್ಷ್ಮೀ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸರೋಹಣ ಮಾಡಿದರು.

ನಂತರ ಜರುಗಿದ ಸಮಾರಂಭದಲ್ಲಿ ವಿಜಯಕುಮಾರ ಸೂಗಾ ದಂಪತಿಗಳು ಹಾರಕೂಡ ಶ್ರೀಗಳ 805ನೇ ತುಲಾಭಾರ ಮಾಡಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಸುಖ ಪರಿವಾರದಿಂದ ಖ್ಯಾತ ವೈದ್ಯರಾದಂತ ಡಾ॥ವಿ ವಿ ಮಂಡಿ, ಎಂಜಿಎಸ್‌ಕೆ ಅಧ್ಯಕ್ಷರಾದಂತ ಶ್ರೀ ವೈಜಿನಾಥ್ ಪಾಟೀಲ್ ಜ್ಯಾಂತಿ, ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷರಾದಂತ ಮಡಿವಾಳಪ್ಪ ಮಂಗಲಗಿ, ಗ್ರಾಮದ ಮುಖಂಡರಾದಂತಹ ಶರಣಪ್ಪ ಸಂಗನಬಶೆಟ್ಟಿ, ಶರಣಪ್ಪ ಕಲ್ಲಪ್ಪನೋರ್,

ಖ್ಯಾತ ಚರ್ಮರೋಗ ತಜ್ಞರಾದ ಡಾಕ್ಟರ ಅಶೋಕ ನಾಗುರೆ, ದಂತ ವೈದ್ಯರಾದ ನಾಗೇಶ ಪಾಟೀಲ, ನಿವೃತ ಪ್ರಾಧ್ಯಾಪಕರು ಗುಂಡೆರಾವ್ ಪಾಟೀಲ್ , ಗ್ರಾಮದ ಪ್ರಗತಿಪರ ರೈತರು ಶೇಷೇರಾವ್ ಭದ್ರೋಜಿಯವರನ್ನು ಸೇರಿ,

ಗ್ರಾಮ ಪಂಚಾಯತ್ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರಿಗೆ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಬ್ಯಾಂಕ್ ಅಧ್ಯಕ್ಷರು ಹಾಗೂ ಸರ್ವ ಸದಸ್ಯರಿಗೂ ಕಣಜಿ ಗ್ರಾಮದಿಂದ ಸರ್ಕಾರಿ ಸೇವೆಯಲ್ಲಿ ವಿವಿಧ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದಂತಹ ಡಿ ರಾಜಕುಮಾರ್ ,ರಾಚಪ್ಪ ನಡುಮನಿ, ರಾಜಕುಮಾರ್ ಹುಲ್ಸೂರೆ ಸಿದ್ದಪ್ಪ ತಂಬೋಳಿ , ನಾಗನಾಥ ತಿಪ್ಪಿಮ್ಮನಿ ಸೇರಿ ಅನೇಕರಿಗೆ ಶ್ರೀಗಳಿಂದ ಆಶೀರ್ವದಿಸಿ ಸನ್ಮಾನಿಸಲಾಯಿತು.

ಕಣಜಿ ಹಾಗೂ ಸುತ್ತಮುತ್ತಲಿನ ಗ್ರಾಮದ ಭಕ್ತರು ಸೇರಿ ಕಾರ್ಯಕ್ರಮವನ್ನು ಅತ್ಯಂತ ವಿಜ್ರಂಭಣೆಯಿಂದ ನೆರವೇರಿಸಿದರು.

# ಬಸವಣ್ಣನವರ ನೂತನ ಕಟ್ಟೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 01 : ಇಲ್ಲಿಯ ನೌಬಾದನ ಚೌಳಿ ರಸ್ತೆಯಲ್ಲಿನ ಸಹ್ಯಾದ್ರಿ ಲೇಔಟ್‌ನಲ್ಲಿ ಬಸವಣ್ಣನವರ ನೂತನ ಕಟ್ಟೆ ಹಾಗೂ ಬಸವ ಭವನದ ನಾಮಫಲಕವನ್ನು ಬುಧವಾರ ಉದ್ಘಾಟಿಸಲಾಯಿತು.

ಬಸವಣ್ಣನವರ ತತ್ವಗಳ ಅನುಕರಣೆಯಿಂದ ವಿಶ್ವವೇ ಶಾಂತಿಯ ತೋಟವಾಗಲಿದೆ ಎಂದು ಉದ್ಘಾಟನೆ ನೆರವೇರಿಸಿದ ನಗರಸಭೆ ಮಾಜಿ ಸದಸ್ಯ ಧನರಾಜ ಹಂಗರಗಿ ಹೇಳಿದರು.

ನೂತನ ಬಡಾವಣೆಯ ಅಭಿವೃದ್ಧಿಗೆ ಎಲ್ಲ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಬಡಾವಣೆ ನಿವಾಸಿಗಳು ಉದ್ಯಾನಕ್ಕೆ ಜಗಜ್ಯೋತಿ ಬಸವಣ್ಣನವರ ಹೆಸರು ಇಟ್ಟಿರುವುದು ಹಾಗೂ ಬಸವ ಭವನ ನಿರ್ಮಿಸಲು ಮುಂದಾಗಿರುವುದು ಶ್ಲಾಘನೀಯ ಎಂದು ಮುಖಂಡ ಸಂಗಮೇಶ ಹುಮನಾಬಾದೆ ಹೇಳಿದರು.

ಪ್ರಮುಖರಾದ ಸಂತೋಷ್ ಭಂಗೂರೆ, ಸಂಜೀವ್ ಸೋನಾರೆ, ಬಾಬುರಾವ್ ಗುದಗೆ, ಶಿವರಾಯ ಮುದಾಳೆ, ಹಾವಗಿ ಮುದಾಳೆ, ವೀರಶೆಟ್ಟಿ ಚನಶೆಟ್ಟಿ, ಶಿವರಾಜ ರಟಕಲೆ, ವೈಜಿನಾಥ ಬಾವಗೆ, ಮಲ್ಲಿಕಾರ್ಜುನ ಗಂಗೂ, ಜ್ಞಾನೇಶ್ವರ ವಗ್ಗೆ,

ಧನರಾಜ ಮಿರಕಲೆ, ಕೃಷಿಕ ಸಮಾಜದ ಅಧ್ಯಕ್ಷ ಗುಣವಂತರಾವ್ ಸಿಂಧೆ, ಶಿವಶರಣಪ್ಪ ಪಾಟೀಲ ಕೊಳಾರ, ಕರಬಸಯ್ಯ ಸ್ವಾಮಿ, ಬಸವರಾಜ ಬಿರಾದಾರ ಇದ್ದರು.

ಬಡಾವಣೆಯ ಪ್ರಮುಖ ರಮೇಶ ಚಿದ್ರಿ ನಿರೂಪಿಸಿದರು.

# ಜಾತಿ ಜನಗಣತಿಯಲ್ಲಿ ಮಾದಿಗ ಎಂದು ಬರೆಯಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 01 : ಜಾತಿ ಜನಗಣತಿ ನಡೆಯಲಿದ್ದು, ಜಿಲ್ಲೆಯ ಸಮಾಜ ಬಾಂಧವರು ಮಾದಿಗ ಎಂದು ಬರೆಯಿಸಬೇಕು ಎಂದು ಆದಿ ಜಾಂಬವ ಸಂಘದ ರಾಜ್ಯಜ ಹಿರಿಯ ಉಪಾಧ್ಯಕ್ಷ ರಾಜು ಕಡ್ಯಾಳ್ ಹೇಳಿದರು. ಜಾತಿ ಜನಗಣತಿ ಹಿನ್ನೆಲೆಯಲ್ಲಿ ನಗರದಲ್ಲಿ ಬುಧವಾರ ಆಯೋಜಿಸಿದ ಸಂಘದ ಪದಾಧಿಕಾರಿಗಳ ಜನಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲಾದ್ಯಂತ ಮೂರು ಹಂತಗಳಲ್ಲಿ ಜಾತಿ ಜನಗಣತಿ ನಡೆಯಲಿದೆ. ಅಧಿಕಾರಿಗಳು ಮನೆಗೆ ಬಂದಾಗ ಸಮಾಜದವರು ಕಡ್ಡಾಯವಾಗಿ ಜಾತಿ ಕಾಲಂನಲ್ಲಿ ಮಾದಿಗ ಎಂದು ನಮೂದಿಸಬೇಕು ಎಂದರು. ಮೀಸಲಾತಿ ಸೇರಿದಂತೆ ವಿವಿಧ ಬೇಡಿಕೆ ಸಂಬಂಧ ಕಳೆದ ಮೂರು ದಶಕಗಳಿಂದ ಹೋರಾಟ ಮಾಡಿಕೊಂಡು ಬರಲಾಗಿದೆ. ಇದೀಗ ಕಾಲಕೂಡಿ ಬಂದಿದೆ. ಮಾದಿಗ ಬದಲು ಬೇರೆಯದ್ದನ್ನು ನಮೂದಿಸಿದರೆ ಮೀಸಲಾತಿ ಸೌಲಭ್ಯ ಕಡಿತಗೊಳ್ಳುವ ಸಾಧ್ಯತೆ ಇದೆ. ಹೀಗಾಗಿ ಗ್ರಾಮೀಣ ಭಾಗದ ಜನರಿಗೆ ಜಾಗೃತಿ ಮೂಡಿಸಿ, ಸಮೀಕ್ಷೆಗೆ ಅಧಿಕಾರಿಗಳು ಮನೆಗೆ ಬಂದ ವೇಳೆ ಮಾದಿಗ ಎಂದು ಬರೆಸಬೇಕು ಎಂದು ತಿಳಿಸಿದರು. ಬಹಳಷ್ಟು ಜನರು ವಲಸೆ ಹೋಗಿದ್ದಾರೆ. ಅವರನ್ನು ಈ ಬಗ್ಗೆ ತಿಳಿಸಬೇಕಾಗಿದೆ. ಶಿಕ್ಷಣ, ಉದ್ಯೋಗ, ಸಾಮಾಜಿಕ ಕ್ಷೇತ್ರದಲ್ಲಿ ಅಭಿವೃದ್ಧಿ ಹೊಂದಲು ಈ ಸಮೀಕ್ಷೆ ಬಹಳ ಮಹತ್ವದ್ದಾಗಿದೆ ಎಂದು ಹೇಳಿದರು. ಮಾದಿಗ ಸಮಾಜಕ್ಕೆ ಅನ್ಯಾಯವಾಗಿದ್ದು, ಅವರಿಗೆ ಒಳಮೀಸಲಾತಿ ಕಲ್ಪಿಸಬೇಕು ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಮೀಸಲಾತಿ ಕಲ್ಪಿಸಲು ರಾಜ್ಯ ಸರ್ಕಾರ-ಕ್ಕೆ ಅಧಿಕಾರ ನೀಡಲಾಗಿದೆ. ಸಮೀಕ್ಷೆ ನೆಪ ಹೇಳಿ ಮೀಸಲು ಕಲ್ಪಿಸಲು ಕಾಂಗ್ರೆಸ್ ಸರ್ಕಾರ ಬಹಳ ವಿಳಂಬ ಮಾಡಿದೆ. ಒಳಮೀಸಲಾತಿ ಕಲ್ಪಿಸುವವರೆಗೆ ಬಡ್ತಿ, ನೇಮಕಾತಿ ಮಾಡಬಾರದು. ಸಮೀಕ್ಷೆ ಕಾರ್ಯ ಬೇಗ ಪೂರ್ಣಗೊಳಿಸಿ ಒಳಮೀಸಲಾತಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದಲ್ಲಿ ಬಸವ ಜಯಂತಿ ಉತ್ಸವ ಆಚರಿಸಲಾಯಿತು. ಪ್ರಮುಖರಾದ ದೇವಿದಾಸ ತುಮಕುಂಟೆ, ಜೈರಾಜ ವೈದ್ಯೆ, ಯುವರಾಜ ಭೆಂಡೆ, ಹಣಮಂತರಾವ ಸೂರ್ಯವಂಶಿ, ಜಾಫಟ್ ಕಡ್ಯಾಳ, ರಾಜು ಸೋನಿ, ಪ್ರಸಾದ್ ಕೋಟೆ, ಅಭಿ ಕಾಳೆ, ಶೈಲೇಶ್ ಮೇತ್ರೆ, ಸಂಜು ಮೇತ್ರೆ, ದಯಾ ಕಡ್ಯಾಳ, ಸಿ.ಎಂ. ದಾಸ್, ಜೀವನ ರಿಕ್ಕೆ, ರೋಷನ್ ಮಲ್ಕಾಪುರೆ, ಸ್ವಾಮಿದಾಸ್ ಮೊದಲಾದವರು ಇದ್ದರು.

# ಮೇ.4 ರಂದು ಮಹರ್ಷಿ ಭಗೀರಥ ಜಯಂತಿ ಅದ್ದೂರಿಯಾಗಿ ಆಚರಿಸಲು ಸಿದ್ಧತೆ : ಜಗನ್ನಾಥ ತಡಪಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 01: ಮಹರ್ಷಿ ಭಗೀರಥ ಜಯಂತಿಯನ್ನು ಅದ್ದೂರಿಯಾಗಿ ಆಚರಣೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಉಪ್ಪಾರ ಸಮಾಜ ಸಂಘದ ಪ್ರಧಾನ ಕಾರ್ಯದರ್ಶಿ ಜಗನ್ನಾಥ ತಡಪಳ್ಳಿ ಅವರು ಹೇಳಿದರು.



ಇಂದು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಜಿಲ್ಲಾಡಳಿತ ಹಾಗೂ ಜಿಲ್ಲಾ ಉಪ್ಪಾರ ಸಮಾಜ ಸಂಘದ ಸಹಯೋಗದಲ್ಲಿ ಮೇ.4 ರಂದು ಬೆಳಿಗ್ಗೆ 11:30 ಕ್ಕೆ ರಂಗಮಂದಿರದಲ್ಲಿ ಮಹರ್ಷಿ ಭಗೀರಥ ಜಯಂತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಅದ್ದೂ-ರಿಯಾಗಿ ಆಚರಿಸಲು ವ್ಯಾಪಕ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು. ಅಂದು ಬೆಳಿಗ್ಗೆ 9:30 ಗಂಟೆಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪೂಜೆ ಸಲ್ಲಿಸಿ ನಂತರ ಮಹರ್ಷಿ ಭಗೀರಥ ಅವರ ಭಾವಚಿತ್ರದ ಮೆರವಣಿಗೆ ಮಾಡಲಾಗುವುದು. ಮೆರವಣಿಗೆಯು ಶಿವಾಜಿ ವೃತ್ತ, ಭಗತಸಿಂಗ್ ವೃತ್ತ, ಬಸವೇಶ್ವರ್ ವೃತ್ತ, ಅಂಬೇಡ್ಕರ್ ವೃತ್ತ ಹಾಗೂ ಜನರಲ್ ಕರಿಯಪ್ಪ ವೃತ್ತದಿಂದ ನೇರವಾಗಿ ಚನ್ನಬಸವಪಟ್ಟದೇವರ ರಂಗಮಂದಿರಕ್ಕೆ ತಲುಪುವುದು ಎಂದು ಮಾಹಿತಿ ನೀಡಿದರು.

ಹೋದ ವರ್ಷ ಮಹರ್ಷಿ ಭಗೀರಥ ಅವರ ಜಯಂತಿಯನ್ನು ಕೆಲ ಸರ್ಕಾರಿ ಕಚೇರಿಯಲ್ಲಿ ಆಚರಣೆ ಮಾಡಲಿಲ್ಲ. ಈ ವರ್ಷ ಕಡ್ಡಾಯವಾಗಿ ಎಲ್ಲ ಸರಕಾರಿ ಕಚೇರಿಗಳಲ್ಲಿ ಆಚರಣೆ ಮಾಡಬೇಕು. ಇಲ್ಲವಾದರೆ ಜಿಲ್ಲಾಡಳಿತದಿಂದ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಸಮಾಜದ ಬಾಂಧವರು ಹಾಗೂ ಉಪ್ಪಾರ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಉಪ್ಪಾರ ಸಮಾಜ ಸಂಘದ ಜಿಲ್ಲಾಧ್ಯಕ್ಷ ತಾನಾಜಿ ಸಗರ್, ವಿಜಯಕುಮಾರ್ ಉಪ್ಪಾರ, ಶಾಂತಕುಮಾರ್, ಬಸವರಾಜ್ ಮಾಳಗೆ, ರಾಜಶೇಖರ್ ಸೇಡಂಕರ್, ಮಹೇಶ್ ಪಾಂಚಾಳ್ ಹಾಗೂ ರಮೇಶ್ ಭಾಗವಹಿಸಿದ್ದರು.

# ಬಸವ ತತ್ವ ಕಾರ್ಯ ರೂಪಕ್ಕೆ ತಂದಿದ್ದ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 01 : ಭಾಲ್ಕಿ ಹಿರೇಮಠ ಸಂಸ್ಥಾನದ ಡಾ. ಚನ್ನಬಸವ ಪಟ್ಟದ್ದೇವರು ಬಸವಣ್ಣನವರ ತತ್ವ, ಸಿದ್ಧಾಂತಗಳನ್ನು ಕಾರ್ಯ ರೂಪಕ್ಕೆ ತಂದಿದ್ದರು ಎಂದು ಬಸವಕಲ್ಯಾಣದ ಅನುಭವ ಮಂಟಪದ ಸಂಚಾಲಕ ಶಿವಾನಂದ ಸ್ವಾಮೀಜಿ ಹೇಳಿದರು. ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಈಚೆಗೆ ನಡೆದ ಎರಡನೇ ವಚನ ಮಂಟಪ ಹಾಗೂ ಡಾ. ಚನ್ನಬಸವ ಪಟ್ಟದ್ದೇವರ ಸ್ಮರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.



ಸಮಾಜದಲ್ಲಿನ ಅಸ್ಪೃಶ್ಯತೆ ಹೋಗಲಾಡಿಸಲು ಶ್ರಮಿಸಿದ್ದರು. ಶೂದ್ರರಿಗೆ ಲಿಂಗ ದೀಕ್ಷೆ ಕೊಟ್ಟಿದ್ದರು. ಕುಡಿಯುವ ನೀರಿನ ಬಾವಿ ದಲಿತರ ಬಳಕೆಗೂ ಮುಕ್ತಗೊಳಿಸಿದ್ದರು. ಕೆಳ ವರ್ಗದವರು, ತುಳಿತಕ್ಕೆ ಒಳಗಾದವರನ್ನು ಮೇಲಕ್ಕೆ ಎತ್ತಲು ಪ್ರಯತ್ನಿಸಿದ್ದರು ಎಂದು ಸ್ಮರಿಸಿದರು. ಉಚಿತ ಅನ್ನ, ಆಶ್ರಯ, ಶಿಕ್ಷಣ ಕೊಟ್ಟು ಅಸಂಖ್ಯಾತ ಬಡ ಮಕ್ಕಳ ಬದುಕು ಉಜ್ವಲಗೊಳಿಸಿದ್ದರು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ವಚನ ಮಂಟಪ ಕಾರ್ಯಕ್ರಮ ವಚನಗಳ ಚಿಂತನೆಗೆ ಆದ್ಯತೆ ಕೊಡುವ ಕಾರ್ಯಕ್ರಮವಾಗಿದೆ. ಪ್ರತಿ ತಿಂಗಳು ವಿವಿಧ ಮಠಾಧೀಶರು, ವಿದ್ವಾಂಸರನ್ನು ಆಹ್ವಾನಿಸುವ ಮೂಲಕ ಚಿಂತನೆಗೆ ವೇದಿಕೆಯಾಗಲಿದೆ ಎಂದು ಹೇಳಿದರು. ಅನುಭವ ಮಂಟಪದ ಶಿವಾನಂದ ಸ್ವಾಮೀಜಿ ಅವರು ಭಕ್ತರು ತಮಗೆ ಕಾಣಿಕೆಯಾಗಿ ನೀಡಿದ್ದ 2,32,770 ರೂ. ಗಳನ್ನು ಲಿಂಗಾಯತ ಹೋರಾಟಕ್ಕೆ ದೇಣಿಗೆಯಾಗಿ ಕೊಟ್ಟು ಉದಾರತೆ ಮೆರೆದಿದ್ದಾರೆ. ಅವರ ಧರ್ಮ ನಿಷ್ಠೆ ಎಲ್ಲರಿಗೂ ಮಾದರಿಯಾಗಬೇಕು ಎಂದು ತಿಳಿಸಿದರು. ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಮಾತನಾಡಿ, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷನ್ನಾಗಿ ಆಯ್ಕೆ ಮಾಡಿ, ಬಸವ ಸೇವೆಗೆ ಅವಕಾಶ ಕಲ್ಪಿಸಿದ್ದಕ್ಕೆ ಸಮಾಜದವರಿಗೆ ಕೃತಜ್ಞತೆ ಸಲ್ಲಿಸುವೆ ಎಂದರು.

ಡಾ. ಚನ್ನಬಸವ ಪಟ್ಟದ್ದೇವರ ಜೀವನ ಕುರಿತು ಸಾಹಿತಿ ಡಾ. ಸೋಮನಾಥ ಯಾಳವಾರ ಉಪನ್ಯಾಸ ನೀಡಿದರು. 'ನೆಲಗೊಂದೆ ಹೊಲಗೇರಿ ಶಿವಾಲಯಕ್ಕೆ ಜಲವೊಂದೆ ಶೌಚಚಮನಕ್ಕೆ' ಕುರಿತು ಚಿಂತಕ ಶಿವಲಿಂಗ ಹೇಡೆ ಅನುಭಾವ ಮಂಡಿಸಿದರು. ವಚನಶ್ರೀ ಚನ್ನಬಸಪ್ಪ ನೌಬಾದೆ ಸುಶ್ರಾವ್ಯವಾಗಿ ವಚನ ಸಂಗೀತ ನಡೆಸಿಕೊಟ್ಟರು. ಬಸವ ಜಯಂತಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ, ಸಮಿತಿಯ ಮಹಿಳಾ ಘಟಕದ ಅಧ್ಯಕ್ಷೆ ಡಾ. ವಿಜಯಶ್ರೀ ಬಶೆಟ್ಟಿ, ಮಲ್ಲಿಕಾರ್ಜುನ ಹತ್ತಿ, ಭಕ್ತಿ ದಾಸೋಹಿ, ಉದ್ಯಮಿ ಅಶೋಕ ಫತೇಪುರ, ಡಾ. ಸುಭಾಷ್ ಬಶೆಟ್ಟಿ, ಜಯದೇವಿ ಯದಲಾಪುರೆ, ಸುವರ್ಣಾ ಧನ್ನೂರ, ರಾಜೇಂದ್ರಕುಮಾರ ಗಂದಗೆ, ಅಣ್ಣಾರಾವ್ ಮೊಗಶೆಟ್ಟಿ, ನಾಗಶೆಟ್ಟೆಪ್ಪ ದಾಡಗಿ ಮತ್ತಿತರರು ಇದ್ದರು. ವೀರಭದ್ರಪ್ಪ ಬುಯ್ಯಾ ಸ್ವಾಗತಿಸಿದರು. ಲಕ್ಷ್ಮಿ ಜಿ. ಬಿರಾದಾರ ನಿರೂಪಿಸಿದರು. ಮಲ್ಲಿಕಾರ್ಜುನ ಪಂಚಾಕ್ಷರಿ ವಂದಿಸಿದರು.

# ಡೋಣಗಾಂವ: ಕಾಯಕ ಮಾಸಾಚರಣೆ ಅಭಿಯಾನಕ್ಕೆ ಚಾಲನೆ : ಎಡಿ ಹಣಮಂತರಾಯ ಕೌಟಗೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.1:ಕಾಯಕವೇ ಕೈಲಾಸ ಕೆಲಸ ಮಾಡಿ ಕೈಲಾಸ ಕಾಣಬೇಕು ಎಂದು ಬಸವಣ್ಣ ಹೇಳಿದ್ದಾರೆ. ಅವರ ಆಶಯದಂತೆ ನರೇಗಾ ಯೋಜನೆಯಡಿ ಕೆಲಸ ಮಾಡುವ ಅಕುಶಲ ಕೂಲಿಕಾರರು ಬಸವಣ್ಣನವರ ತತ್ವಗಳನ್ನು ಪಾಲನೆ ಮಾಡಿಕೊಂಡು ಹೋಗಬೇಕು ಎಂದು ಎಲ್ಲರಿಗೂ ಬಸವೇಶ್ವರ ಜಯಂತಿಯ ಶುಭಾಶಯಗಳನ್ನು ತಿಳಿಸಿದರು.



ಅರ್ಹ ಫಲಾನುಭವಿಗಳು ನರೇಗಾ ಯೋಜನೆಯಡಿ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳ ಸದ್ಬಳಕೆ ಮಾಡಿಕೊಳ್ಳಿ ಪ್ರತಿಯೊಬ್ಬರೂ ಕಡ್ಡಾಯವಾಗಿ ನೂರು ದಿವಸ ಕೆಲಸ ಮಾಡಬೇಕು. ನೀವು ಇದ್ದ ಊರಲ್ಲಿ ನಿಮಗೆ ನೂರು ದಿನ ಕೆಲಸ ಖಾತ್ರಿ ಇದೆ ಎಂದು ಸಹಾಯಕ ನಿರ್ದೇಶಕರಾದ ಹಣಮಂತರಾಯ ಕೌಟಗೆ ಹೇಳಿದರು.

ಕಮಲನಗರ ತಾಲೂಕಿನ ಡೋಣಗಾಂವ (ಎಂ) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ರಂಡ್ಯಾಳ ಗ್ರಾಮದಲ್ಲಿ ನರೇಗಾ ಕಾಮಗಾರಿ ಸ್ಥಳದಲ್ಲಿ ಆಯೋಜನೆ ಮಾಡಿರುವ " ಕಾಯಕ ಮಾಸಾಚರಣೆ " ಅಭಿಯಾನಕ್ಕೆ ವಿಶ್ವಗುರು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಏಪ್ರಿಲ್ 30 ರಿಂದ ಮೇ 31 ರ ವರೆಗೆ ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ ಕಾಯಕ ಮಾಸಾಚರಣೆ ಅಭಿಯಾನ ಹಮ್ಮಿಕೊಳ್ಳುವುದರ ಮೂಲಕ ಕೂಲಿಕಾರಾರಿಗೆ ಕೆಲಸ ನೀಡಬೇಕು. ಎಲ್ಲರೂ ಇದರ ಲಾಭ ಪಡೆಯಿರಿ ಎಂದು ಹೇಳಿದರು.

ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಖಾತ್ರಿ ಯೋಜನೆ ಸದುಪಯೋಗ ಪಡೆದುಕೊಳ್ಳಬೇಕು. ಏಪ್ರೀಲ್ ತಿಂಗಳಿಂದ 349 ರೂ. ಇದ್ದ ಕೂಲಿ ಮೊತ್ತ 370 ರೂ. ಹೆಚ್ಚಿಸಲಾಗಿದೆ. ಕೂಲಿ ಕಾರ್ಮಿಕರು ನಿರಂತರವಾಗಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೆಲಸ ಮಾಡಿ ಉತ್ತಮ ಬದುಕು ಕಟ್ಟಿಕೊಳ್ಳಬೇಕು. ಕೂಲಿಕಾರ್ಮಿಕರ ಮಕ್ಕಳ ಲಾಲನೆ ಪೋಷಣೆಗೆ ಇರುವ ಕೂಸಿನ ಮನೆ ಸದ್ಬಳಕೆ ಮಾಡಿಕೊಳ್ಳಿರಿ ಹಾಗೂ ಉಚಿತ ಸಹಾಯವಾಣಿ ಸಂಖ್ಯೆ 8277506000 ಬಗ್ಗೆ ಕೂಲಿ ಕಾರ್ಮಿಕರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪಿಡಿಓ ವಿಜಯಕುಮಾರ, ಸದಸ್ಯರಾದ ರಾಜಕುಮಾರ, ತಾಂತ್ರಿಕ ಸಂಯೋಜಕರಾದ ಅಮರ ಬಿರಾದಾರ, ತಾಂತ್ರಿಕ ಸಹಾಯಕರಾದ ವಿನೋದ, ತಾಲೂಕು ಐ ಇ ಸಿ ಸಂಯೋಜಕರಾದ ಸವಿತಾ ನಾಗೇಶ, ಗ್ರಾಮ ಕಾಯಕ ಮಿತ್ರರಾದ ರೇಶ್ಮಾ, ಕಾರ್ಯದರ್ಶಿ ಆದಿತ್ಯ, ಡಿಇಓ ಮಖಬೂಲ್ ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು, ಕೂಲಿಕಾರರು ಮತ್ತು ಇತರರು ಇದ್ದರು.

# ಹೇಮರಡ್ಡಿ ಮಲ್ಲಮ್ಮ, ಸಿದ್ಧಲಿಂಗ ಶ್ರೀಗಳ ಮೂರ್ತಿ ಮೆರವಣಿಗೆ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.1–ತಾಲೂಕಿನ ಶಿರೂರ ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಳ್ಳಲಿರುವ ಹೇಮರಡ್ಡಿ ಮಲ್ಲಮ್ಮ ಹಾಗೂ ಲಿಂ.ಸಿದ್ಧಲಿಂಗ ಶ್ರೀಗಳ ಮೂರ್ತಿಗಳ ಮೆರವಣಿಗೆ ಮೇ.3 ರಂದು ಜರುಗಲಿದೆ.

ಶನಿವಾರ ಮುಂಜಾನೆ 8 ಗಂಟೆಗೆ ಸ್ಥಳೀಯ ಸಿದ್ದೇಶ್ವರ ಪ್ರೌಢಶಾಲೆಯ ಆವರಣದಲ್ಲಿ ವೇಮನಾನಂದ ಶ್ರೀಗಳ ಸಾನಿಧ್ಯದಲ್ಲಿ ಮೂರ್ತಿಗಳ ಮೆರವಣಿಗೆಗೆ ಮಾಜಿ ಶಾಸಕ ವೀರಣ್ಣ ಚರಂತಿಮಠ ಚಾಲನೆ ನೀಡುವರು.

ಮಹಿಳೆಯರ ಪೂರ್ಣಕುಂಭ, ಸಕಲವಾದ್ಯವೈಭವ, ಗೊಂಬೆಗಳ ಕುಣಿತದೊಂದಿಗೆ ಭವ್ಯ ಮೆರವಣಿಗೆ ನಡೆಯಲಿದ್ದು, ಮಧ್ಯಾಹ್ನ ಸೂಳಿಭಾವಿಯ ವೆಂಕಮ್ಮ ನರಸಣ್ಣವರ ಅವರಿಂದ ಅನ್ನ ಪ್ರಸಾದ ಸೇವೆ ಜರುಗಲಿದೆ.


ಮಧ್ಯಾಹ್ನ 3 ಗಂ-ಟೆಗೆ ನೂತನ ದೇವಸ್ಥಾನದ ಆವರಣದಲ್ಲಿ ಸಭಾ ಕಾರ್ಯಕ್ರಮ ವೇಮನಾನಂದ ಶ್ರೀಗಳ ಸಾನಿಧ್ಯದಲ್ಲಿ ನಡೆಯಲಿದ್ದು, ಶಿವಯೋಗಾಶ್ರಮದ ಸಿದ್ಧಲಿಂಗ ಶ್ರೀಗಳು, ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಮರಿಮಹಾಂತ ಚನ್ನವೀರ ದೇವರು, ಅಮೀನಗಡದ ಪ್ರಭುಶಂಕರರಾಜೇಂದ್ರಶ್ರೀಗಳು, ಗುಳೇದಗುಡ್ಡದ ಕಾಡಸಿದ್ದೇಶ್ವರ ಶ್ರೀಗಳು, ಒಪ್ಪತ್ತೇಶ್ವರ ಸ್ವಾಮೀಜಿ ಉಪಸ್ಥಿತರಿರುವರು.

ಅಧ್ಯಕ್ಷತೆಯನ್ನು ಹೇಮರಡ್ಡಿ ಮಲ್ಲಮ್ಮ ವಿಕಾಸ ಸಂಸ್ಥೆಯ ಕಾರ್ಯಾಧ್ಯಕ್ಷ ನೀಲಪ್ಪ ಕೋಟಿಕಲ್ಲ ವಹಿಸಲಿದ್ದು, ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತ ಜಿ.ಬಿ.ಗೌಡಪ್ಪಗೋಳ ಉಪನ್ಯಾಸ ನೀಡುವರು. ಬೆಂಗಳೂರಿನ ರಡ್ಡಿ ಜನಸಂಘದ ನಿರ್ದೇಶಕರುಗಳಾದ ಕೃಷ್ಣಾರಡ್ಡಿ, ಭೈರತಿ ಬಾಬುರೆಡ್ಡಿ, ನಾಗರಾಜರೆಡ್ಡಿ, ಆರ್.ಕೆ.ರಡ್ಡಿ, ವಿ.ಮುನಿರೆಡ್ಡಿ, ದೇವಸ್ಥಾನದ ಭೂದಾನಿಗಳು, ಊರಿನಗಣ್ಯರು, ಜನಪ್ರತಿನಿಧಿಗಳು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

# ಸಾರಿಗೆ ಬಸ್ಸಿನಲ್ಲೇ 'ನಮಾಜ್' ಮಾಡಿದ ಚಾಲಕ' ಚಾಲಕ ಕಂ ಕಂಡಕ್ಟರ್ ಸಸ್ಪೆಂಡ್

ಮಲ್ಲಮ್ಮ ನುಡಿ ವಾರ್ತೆ

ಹಾವೇರಿ:ಕರ್ತವ್ಯದಅವಧಿಯಲ್ಲೇ ಬಸ್ ನಿಲ್ಲಿಸಿ ಸಾರಿಗೆ ಬಸ್ಸಿನಲ್ಲಿಯೇ ನಮಾಜ್ ಮಾಡಿದಂತ ಘಟನೆ ವೀಡಿಯೋ ವೈರಲ್ ಆಗಿತ್ತು. ಈ ನಡೆಯನ್ನು ತೋರಿದಂತ ಚಾಲಕ ಕಂ ಕಂಡಕ್ಟರ್ ಅಮಾನತುಗೊಳಿಸಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಆದೇಶಿಸಿದೆ.



ಈ ಸಂಬಂಧ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಆದೇಶ ಹೊರಡಿಸಿದ್ದು, ದಿನಾಂಕ:28/04/2025 ರಂದು ಹಾನಗಲ್ ಘಟಕದ ಅನುಸೂಚಿ ಸಂಖ್ಯೆ: 7/8, ಹಾನಗಲ್ ದಿಂದ ವಿಶಾಲಗಡ ಮಾರ್ಗದ ಮೇಲೆ ವಾಹನ ಸಂಖ್ಯೆ, ಕೆಎ-27, ಎಫ್-0914, ರಲ್ಲಿ ಚಾಲಕರಾಗಿ ಕರ್ತವ್ಯಕ್ಕೆ ನಿಯೋಜಿಸಿದ್ದು, ದಿನಾಂಕ:29/04/2025 ರಂದು ವಿಶಾಲಗಡ ದಿಂದ ಹಾನಗಲ್ ಮಾರ್ಗವಾಗಿ ವಾಹನವನ್ನು ಕಾರ್ಯಾಚರಣೆ ಮಾಡುತ್ತಿರುವ ಸಮಯದಲ್ಲಿ ನೀವು ಸಮಯ 17:30 ಘಂಟೆಗೆ ಸುಮಾರಿಗೆ ವಾಹನವನ್ನು ಹುಬ್ಬಳ್ಳಿಯ ಹೊರ ಭಾಗದಲ್ಲಿನ ಗಟ್ಟೂರು ಕ್ರಾಸ್‌ನಿಂದ ಸ್ವಲ್ಪ ಮುಂದೆ ವಾಹನವನ್ನು ರಸ್ತೆಯ ಎಡಬದಿಗೆ ಹಾಕಿ, ವಾಹನವನ್ನು ಬಂದ್ ಮಾಡಿ, ಹ್ಯಾಂಡ್ ಬ್ರೇಕ್ ಹಾಕಿ, ಚಾಲಕರ ಸೀಟಿನಿಂದ ಎದ್ದು, ಚಾಲಕರ ಸೀಟಿನ್ ಹಿಂದೆ ಇರುವ ಮೂರರ (1,2,3) ಆಸನದಲ್ಲಿ 'ನಮಾಜ'(ಪ್ರಾರ್ಥನೆ) ಮಾಡಿರುತ್ತೀರಿ ಎಂದಿದೆ.

ನೀವು ಈ ರೀತಿ ಸಂಸ್ಥೆಯ ಸಾರ್ವಜನಿಕ ಸೇವೆಯಲ್ಲಿರುವಾಗ ಮಾರ್ಗ ಮದ್ಯದಲ್ಲಿ ಬಸ್ ವಿಲ್ಲಿಸಿ, ಬಸ್ಸಿನಲ್ಲಿ ಪ್ರಯಾಣಿಕರು ಇದ್ದಾಗಲೂ ಸಹ ಧಾರ್ಮಿಕ ಆಚರಣೆ ಮಾಡಿ ಕರ್ತವ್ಯಲೋಪ ಎಸಗಿರುತ್ತೀರಿ. ಈ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಸುದ್ದಿ ಮತ್ತು ದೃಶ್ಯ ಮಾದ್ಯಮಗಳಲ್ಲಿ ವಿಷಯಭಿತ್ತರವಾಗಿ ಸಾರ್ವಜನಿಕರ ವಯಲದಲ್ಲಿ ಚರ್ಚೆಗೆ ಗ್ರಾಸವಾಗಲು ಮತ್ತು ಸಂಸ್ಥೆಯ ಬಗ್ಗೆ ಕೆಟ್ಟ ಅಭಿಪ್ರಾಯ ಮೂಡಲು ಕಾರಣರಾಗಿರುತ್ತೀರಿ ಎಂದು ತಿಳಿಸಿದೆ.

ಎ.ಆರ್.ಮುಲ್ಲಾ, ಚಾಲಕ ಬಿಲ್ಲೆ ಸಂಖ್ಯೆ:300, ಹಾನಗಲ್ ಘಟಕ ಇವರು ಕ.ರಾ.ರ.ಸಾ.ಸಂಸ್ಥೆಯ ಶಿಸ್ತು ಮತ್ತು ನಡತೆಗಳ ನಿಯಮಾವಳಿ 1971ರ ಭಾಗ-2 ಖಂಡಿಕೆ 3 ರಲ್ಲಿನ ಉಪ ಕಂಡಿಕೆ 1 ರಲ್ಲಿನ (ಎ) (ಬಿ) ಮತ್ತು (ಸಿ) ರಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿರುವುದು ಮೇಲೆ ನಮೂದಿಸಿದ ವರದಿಯಿಂದ ತಿಳಿಯುತ್ತದೆ. ಸದರಿಯವರು ಕೆಲಸದ ಮೇಲೆ ಇರುವುದರಿಂದ ಈ ಪ್ರಕರಣದ ತನಿಖೆಗೆ ಭಾದಕವಾಗಬಹುದೆಂದು ಎ. ಆರ್. ಮುಲ್ಲಾ ಚಾಲಕ ಬಿಲ್ಲೆ ಸಂಖ್ಯೆ-300, ಹಾನಗಲ್ ಘಟಕ ಇವರನ್ನು ಅಮಾನತ್ತಗೊಳಿಸಬೇಕೆಂದು ಅಭಿಪ್ರಾಯಪಟ್ಟು ಈ ಕೆಳಗಿನಂತೆ ಆದೇಶಿಸಿದ್ದಾರೆ. ಕ.ರಾ.ರ.ಸಾ.ಸಂಸ್ಥೆ ನೌಕರರ ನಡತೆ ಮತ್ತು ಶಿಸ್ತು ನಿಯಮಾವಳಿ-1971 ರ ನಿಯಮ 21(1) ಮತ್ತು ಕ.ರಾ.ರ.ಸಾ.ಸಂಸ್ಥೆಯ ಸುತ್ತೋಲೆ ಸಂ:ಕರಾಸಾ/ಕೇಕ/ಶಿಸ್ತು/959 ದಿನಾಂಕ:22/10/1999 ರ ಮೇರೆಗೆ ಪ್ರದತ್ತವಾದ ಅಧಿಕಾರದನ್ವಯ ನಡತೆ ಮತ್ತು ಶಿಸ್ತು ನಿಯಮ 21(1) ರಡಿಯಲ್ಲಿ ಎ. ಆರ್. ಮುಲ್ಲಾ, ಚಾಲಕ ಬಿಲ್ಲೆ ಸಂಖ್ಯೆ : 300, ಹಾನಗಲ್ ಘಟಕ ರವರನ್ನು ಈ ಕೂಡಲೇ ಜಾರಿಗೆ ಬರುವಂತೆ ವಿಚಾರಣೆ ಬಾಕಿ ಇಟ್ಟು ಅಮಾನತ್ತಿನಲ್ಲಿ ಇಡಲಾಗಿದೆ ಎಂದು ತಿಳಿಸಿದ್ದಾರೆ.

ಸದರಿಯವರಿಗೆ ಅಮಾನತ್ತಿನ ಅವಧಿಯಲ್ಲಿ ಜೀವನಾಧಾರ ಭತ್ಯೆಯನ್ನು ವಹಿಸಿದ ಕೆಲಸ ಮಾಡಿದ ಪೂರ್ಣಾವಧಿಗೆ (ದಿನದ ಭತ್ಯೆ ಹಾಗೂ ಇತರ ಭತ್ಯೆ ಬಿಟ್ಟು ಪಡೆಯಬಹುದಾದ ಒಟ್ಟು ವೇತನದ ಶೇಕಡ 50 ಕ್ಕೆ ಸರಿಯಾಗುವಷ್ಟು ಮೊತ್ತವನ್ನು ನೀಡಲಾಗುವುದು. ಸದರಿಯವರು ತಮ್ಮ ಅಮಾನತ್ತಿನ ಅವಧಿಯಲ್ಲಿ ಯಾವುದೇ ತರಹದ ನೌಕರಿ, ವ್ಯಾಪಾರ, ಉದ್ಯೋಗ ಹಾಗೂ ವಿರಾಮ ಕಾಲದ ಚಟುವಟಿಕೆಗಳಲ್ಲಿ ತೊಡಗಿಲ್ಲವೆಂದು ಘೋಷಣೆ ಪತ್ರ ಸಹಿ ಮಾಡಿ ಕೊಟ್ಟಾಗ ಮಾತ್ರ ಜೀವನಾಧಾರ ಭತ್ಯೆ ಪಡೆಯಲು ಅರ್ಹರಾಗುತ್ತಾರೆ.

ಸದರಿಯವರು ಶಿಸ್ತುಪಾಲನಾಧಿಕಾರಿಯಿಂದ ಲಿಖಿತ ಅನುಮತಿ ಪಡೆಯದೇ ಕಾರ್ಯಕ್ಷೇತ್ರವನ್ನು ತೊರೆದು ಹೊರಗೆ ಹೋಗಬಾರದು. ಸದರಿಯವರು ತಮ್ಮ ಸರಿಯಾದ ಅಂಚೆ ವಿಳಾಸವನ್ನು ತಿಳಿಸಬೇಕು. ಇಲ್ಲದೇ ಹೋದಲ್ಲಿ ಈ ಕಛೇರಿಯ ದಾಖಲಾತಿಯಲ್ಲಿ ಇರುವ ವಿಳಾಸಕ್ಕೆ ತಿಳುವಳಿಕೆ ಪತ್ರ ಹಾಗೂ ಇತರ ಕಾಗದ ಪತ್ರವನ್ನು ಕಳಿಸಲಾಗುವುದು. ಅಂತಹ ಅಂಚೆಗಳು ಬಟವಡೆಯಾಗದಿದ್ದಲ್ಲಿ ಅಂತಹ ವಿಳಾಸದಾರರು ಇಲ್ಲ ಅಥವಾ ಬಟವಾಡೆ ವೇಳೆಯಲ್ಲಿ ಸಿಗುವುದಿಲ್ಲ ಎಂಬ ಅಂಚೆ ಶರಾಗಳೊಂದಿಗೆ ಪರತ್ ಬಂದರೂ ಸಹ ಸದರಿಯವರಿಗೆ ಸಕಲ ಉದ್ದೇಶಗಳಿಗಾಗಿ ಆ ಪತ್ರಗಳು ಮುಟ್ಟಿರುತ್ತವೆ ಎಂದು ಪರಿಗಣಿಸಲಾಗುವುದು. ಈ ರೀತಿ ಜಾರಿಯಾಗದೇ ಇರುವ ಪತ್ರಗಳು ಜಾರಿಯಾದ ಪತ್ರಗಳೆಂದೇ ಪರಿಗಣಿಸಲ್ಪಡುವುದರಿಂದ ವಿಚಾರಣೆಯನ್ನು ಮುಂದುವರೆಸಲು ಹಾಗೂ ಶಿಸ್ತಿನ ಕ್ರಮವನ್ನು ಜರುಗಿಸಲು ಅವು ಪ್ರತಿಬಂಧಕವಾಗಲಾರವು ಎಂದು ತಿಳಿಸಿದ್ದಾರೆ.

# ಬಸವೇಶ್ವರ ಜಯತ್ಯೋತ್ಸವದ ನಿಮಿತ್ತ ಕುಣಿದು ಕುಪ್ಪಳಿಸಿದ ಬಸ್ ಚಾಲಕರು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ ಪಟ್ಟಣದ ಬಸ್ ಡಿಪೋ ಘಟಕದ ಪ್ರಭಾರಿ ವ್ಯವಸ್ಥಾಪಕರಾದ ಹಣಮಪ್ಪ ಛಲವಾದಿಯವರ ನೇತೃತ್ವದಲ್ಲಿ ನಡೆದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತ್ಯೋತ್ಸವದ ನಿಮಿತ್ತ ಬಸ್ಸಿಗೆ ಬಲೂನ್‌ದಿಂದ ಅಂಲಕರಿಸಿ ಬಸವಣ್ಣನವರ ಭಾವಚಿತ್ರಕ್ಕೆ ವಿಶೇಷ ಪೂಜೆ ಜರುಗಿತ್ತು ಹಾಗೂ ಬಸವಣ್ಣನವರ ಮೆರವಣಿಗೆಯನ್ನು ಬಸ್ ಡೀಪೋದಿಂದ ವಿವಿಧ ವೃತ್ತದಿಂದ ಬಸವೇಶ್ವರ ವೃತ್ತಕ್ಕೆ ತೆರಳಿ ಮಾಲಾರ್ಪಣ ಮಾಡಿ ವಿಶೇಷ ಪೂಜೆ ಸಲ್ಲಿಸಿದರು. ತದನಂತರ ಬಸವೇಶ್ವರ ವೃತ್ತದಿಂದ ಬಸ್ ಡೀಪೋ ವರೆಗೆ ಮೆರವಣಿಗೆ ಮುಖಾಂತರ ಬಸ್ ಚಾಲಕರು ಕಂಡಕ್ಟರ್‌ಗಳು ಕುಣಿದು ಕುಪ್ಪಳಿಸಿದರು. ಈ ಸಂದರ್ಭದಲ್ಲಿ ಸಂಚಾಲಕರು ರಾಚಪ್ಪಾ ಪರಶೆಟ್ಟಿ, ಸಂಜು-ರೆಡ್ಡಿ, ಸತೀಶ, ರಮೇಶ ಕಲ್ಲೂರ, ಮಹೇಶ, ಕೈಲಾಸ, ಗಪರ್, ಕೈಲಾಸ ಮೇತ್ರೆ, ರಾಜಕುಮಾರ ವರ್ಮಾ, ರಾಜಕುಮಾರ ಬೋರರೆ, ಅನೀಲಕುಮಾರ ಕಠಳ್ಳಿ, ಗುಂಡಪ್ಪಾ ಮೇತ್ರೆ, , ಕಲ್ಲಪ್ಪಾ ಕಠಳ್ಳಿ, ವಿಜಯಕುಮಾರ, ಜಲೀಂದ್ರ, ಸಂತೋಷ, ಪೂಜಾ ಹಿರೋಳೆ, ಪ್ರಭಾವತಿ, ಶೀಲಾರೆಡ್ಡಿ, ಸವೀತಾ, ಕವೀತಾ, ಕಮಳಾಬಾಯಿ, ಸಂಗಪ್ಪಾ ಸಿಂಗ್, ಅಂಗದ್ ಬೀದರ, ಕಾರ್ತಿಕ ಸ್ವಾಮಿ, ಸಂಜು-ರೆಡ್ಡಿ ಕನಕಟ್ಟಾ, ಶಿವು ಪಲ್ಲಾರಿ ಅನೇಕರಿದ್ದರು.

# ಕಾಯಕ ಮಾಸಾಚಾರಣಕ್ಕೆ ಚಾಲನೇ ನರೇಗಾ ಕೂಲಿಕಾರ್ಮಿಕರಿಗೆ ಹೆಚ್ಚುಚ್ಚು ಕೆಲಸ ನೀಡುವ ಮೂಲಕ ಅಭಿಯಾನ ಯಶಶ್ವಿ ಗೊಳಿಸಿ: ಇಒ ಸುಲ್ಪಿ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ನರೇಗಾ ಯೋಜನೆಯಡಿ ಹೆಚ್ಚು ಕೂಲಿಕಾರರಿಗೆ ಕೆಲಸ ನೀಡುವ ಉದ್ದೇಶ ದಿಂದ ಏ.30 ರಿಂದ ಮೇ.31 ವರೆಗೆ ಹಮ್ಮಿಕೊಂಡ ಕಾಯಕ ಮಾಸಾಚಾರಣೆ ಅಭಿಯಾನವನ್ನು ಎಲ್ಲರೂ ಕೂಡಿ-ಕೊಂಡು ಯಶಶ್ವಿಗೊಳಿಸಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಪಿ ಹೇಳಿದರು.

ಜಿಲ್ಲಾ ಪಂಚಾಯತ್ ಬೀದರ್, ತಾಲ್ಲೂಕು ಪಂಚಾಯತ್ ಬಸವಕಲ್ಯಾಣ ಮತ್ತು ಐಇಸಿ ಯೋಜನೆಯಡಿ ತಾಲ್ಲೂಕಿನ ಪರತಾಪೂರ ಗ್ರಾಮದಲ್ಲಿ ಬುಧವಾರ ಹಮ್ಮಿಕೊಂಡ ಕಾಯಕ ಮಾಸಾಚಾರಣೆ ಅಭಿಯಾನಕ್ಕೆ ಚಾಲನೇ ನೀಡಿ ಅವರು ಮಾತನಾಡಿ, ಬಸವ ಜಯಂತಿ ಅಂಗವಾಗಿ ಸರ್ಕಾರದ ಆದೇಶದಂತೆ ಮೇ.ತಿಂಗಳ ವರೆಗೆ ಕನಿಷ್ಟ ಜಿಲ್ಲೆಯಲ್ಲಿ ಒಂದು ಲಕ್ಷ ಕೂಲಿಕಾರರಿಗೆ ಕೆಲಸ ನೀಡುವ ಗುರಿ ಹೊಂದಿದೆ. ಆದ್ದರಿಂದ ತಾಲ್ಲೂಕಿನ ಗ್ರಾಮ ಪಂಚಾಯತ್ ವ್ಯಾಪ್ತಿಗಳಲ್ಲಿ ಕನಿಷ್ಟ 500 ಜನ ಕೂಲಿ ಕಾರ್ಮಿಕರಿಗೆ ನಿತ್ಯ ಕೆಲಸ ನೀಡಬೇಕು ಮತ್ತು ಯಾವುದೇ ಕಾರಣಕ್ಕೂ ಮಧ್ಯದಲ್ಲಿ ಎನ್. ಎಂ.ಆರ್. ಗ್ಯಾಪ್ ಆಗಬಾರದು ಎಂದು ಸೂಚನೆ ನೀಡಿದರು.

ಕೂಲಿ ಕಾರ್ಮಿಕರು ಮಕ್ಕಳ ನೋಡಿಕೊಳ್ಳಲು ಮನೆಯಲ್ಲಿಯಾರು ಇಲ್ಲದಿದ್ದರೆ ಗ್ರಾಮ ಪಂಚಾಯತ್ ವತಿಯಿಂದ ಪ್ರಾರಂಭಿಸಲಾದ ಕೂಸಿನ ಮನೆಯಲ್ಲಿ ಬಿಟ್ಟು ಹೋಗಿ ನೆಮ್ಮದಿ ಯಿಂದ ಕೆಲಸ ಮಾಡಬೇಕು ನಿಮ್ಮ ಮಕ್ಕಳನ್ನು ನೋಡಿಕೊಳ್ಳಲು ಸಿಬ್ಬಂದಿಗಲನ್ನು ನೇಮಕ ಮಾಡಿಕೊಳ್ಳಲಾಗಿದೆ ಮತ್ತು ಅಭಿಯಾನದಲ್ಲಿ ಹೆಚ್ಚೆಚ್ಚು ಕಾರ್ಮಿಕರು ಭಾಗವಹಿಸುವ ಮೂಲಕ ಅಭಿಯಾನವನ್ನು ಯಶಶ್ವಿಗೊಳಿಸಬೇಕು ಎಂದರು ಹೇಳಿದರು. ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಮಹ್ಮದ್ ಸಲೀಂ ಅವರು ಮಾತನಾಡಿ, ಕೂಲಿ ಕಾರ್ಮಿಕರ ಸಮಸ್ಯೆಗಳನ್ನು ಆಲಿಸಿ, ಅವುಗಳ ಪರಿಹಾರದ ಕುರಿತು ತಿಳಿಸಿದರು. ನಂತರ ಗ್ರಾಮ ಪಂಚಾಯತ್ ಸದಸ್ಯರಾದ ಖುರ್ಷಿದ್ ಅವರು ಮಾತನಾಡಿ, ಗ್ರಾಮಕ್ಕೆ ಅವಶ್ಯಕತೆ ಇರುವ ಕಾಮಗಾರಿಗಳ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದು ಅವುಗಳನ್ನು ಮಂಜೂರಿ ಮಾಡಿಕೊಡಬೇಕು ಎಂದು ಮನವಿ ಮಾಡಿದರು. ಪಿಡಿಒ ಚಂದ್ರಾಮ ಧೂಳಖೇಡ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಪಂಚಾಯತ್ ಅಧ್ಯ-ಕ್ಷೆ ಶೋಭಾ ರಾಜೇಶ ಮೇತ್ರೆ ಅಧ್ಯಕ್ಷತೆ ವಹಿಸಿದರು. ಈ ಸಂದರ್ಭದಲ್ಲಿ ನವನಾಥ ರಾಠೋಡ, ರಾಜೇಶರಾವ್ ಮೇತ್ರೆ, ಟಿಸಿ ಅಮರನಾಥ ಪಾಟೀಲ್, ಐಇಸಿ ಸಂಯೋಜಕ ವೀರಾರೆಡ್ಡಿ, ಟಿಎ ಅವಿನಾಶ ಕಾಂಬ್ಳೆ, ಖುರ್ಷಿದ್ ಐಮದ್ ಹಾಗೂ ಗ್ರಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

**CITATION**

**IN THE COURT OF THE PRL. CIVIL JUDGE AND JMFC., HUMNABAD AT HUMNABAD**

**CRL. MISC. NO. 2401/2024**

Petitioners :-

1. Meharun Bee W/o Late Shaik Lal Mohammmed Age 58 R/o Kappargaon Tq: Humnabad
2. Shaik Muzzafar S/o Late Lal Mphammed Age.34 R/o Kappargaon Tq:Humnabad

Respondent:-

The Registrar of Birth and Death-through Tahasildar, Officer Humnabad.

Whereas the above named petitioner has filed the petition under section 13(3) of Birth and Death Registration Act 1969 praying this Hon'ble court to issue Death certificate of Their Husband Late Shaik Lal Mohammed S/o Mohammed Hussain, who died on dated 20-06-2009 at Kappargaon Humnabad. The petitioner claiming the death certificate of deceased Shaik Lal Mohammmed S/o Mohammed Hussain, for transfer of property and other official purpose and home record.

Therefore, it is hereby proclaimed that if any person or persons have got any objection in this regard, may he/they May approach to this Honorable court on 26/05/2025 at 08.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this the 22nd day of March-2025

//By order of the court//
Chief Ministerial Officer,
Prl.Civil Judge and JMFC
Humnabad.

# "ಕಾರ್ಮಿಕರು ಶ್ರಮದ ಮಾದರಿ, ಪೊಲೀಸ್ ಅಧಿಕಾರಿಗಳು ಶಾಂತಿಯ ರಕ್ಷಕ" ಗುರುರಾಜ್ ಅಂಗಡಿ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ.-ಕೆಂಭಾವಿ ಪಟ್ಟಣದ ಕಾರ್ಮಿಕ ಘಟಕದ ವತಿಯಿಂದ ಪಟ್ಟಣದಲ್ಲಿ ಶ್ರಮಜೀವಿಗಳಿಗೆ ಶ್ರಮದ ಮೌಲ್ಯವನ್ನು ಅರಿಸಿ, ಸಾರ್ವಜನಿಕ ಸೇವೆಯಲ್ಲಿ ಕರ್ತವ್ಯ ನಿಷ್ಠೆಯಿಂದ ಸೇವೆ ಸಲ್ಲಿಸುತ್ತಿರುವ ಪಿಎಸ್‌ಐ ಶ್ರೀ ಹಣಮಂತರಾಯ ಅವರನ್ನು ಕಾರ್ಮಿಕ ದಿನಾಚರಣೆ ಅಂಗವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರ್ಮಿಕ ಘಟಕದ ಅಧ್ಯಕ್ಷ ಗುರುರಾಜ್ ಅಂಗಡಿ ವಹಿಸಿದ್ದರು. ಅವರು ಮಾತನಾಡುತ್ತಾ, "ನಮ್ಮ ಸಮಾಜದಲ್ಲಿ ಕಾರ್ಮಿಕರು ಅವರ ಶ್ರಮವೇ ನಮ್ಮ ಪ್ರಗತಿಯ ಮೂಲ. ಇದೇ ರೀತಿ, ಕಾನೂನು ಸುವ್ಯವಸ್ಥೆ ಕಾಪಾಡುವ ಪೊಲೀಸ್ ಇಲಾಖೆ ಕೂಡ ಜನಸಾಮಾನ್ಯರ ರಕ್ಷಣೆಯಲ್ಲಿ ನಿರಂತರ ತೊಡಗಿರುತ್ತದೆ. ಪಿಎಸ್‌ಐ ಹಣಮಂತರಾಯ ಅವರು ತಮ್ಮ ಕರ್ತವ್ಯದಲ್ಲಿ ಗೌರವ ತಂದಿದ್ದಾರೆ. ಅವರ ಸೇವೆ ಸಮಾಜಕ್ಕೆ ಪ್ರೇರಣೆ-ಯಾಗಿದೆ," ಎಂದು ಹೇಳಿದರು.

ಪಿಎಸ್‌ಐ ಹಣಮಂತರಾಯ ಅವರು ತಮ್ಮ ಹುಟ್ಟಿದ ಊರಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ಎಲ್ಲರೂ ಮೆಚ್ಚಿದರು. ಅವರು ಈ ಸಂದರ್ಭದಲ್ಲಿ ಮಾತನಾಡಿ, "ನಾನು ನನ್ನ ಕರ್ತವ್ಯವನ್ನು ತಲೆ ಎತ್ತಿ ನಿಭಾಯಿಸುತ್ತೇನೆ. ಈ ಗೌರವ ನನಗೆ ಪ್ರೇರಣೆಯಾಗಿ ಕೆಲಸ ಮಾಡಲು ಇನ್ನಷ್ಟು ಶಕ್ತಿ ನೀಡುತ್ತದೆ," ಎಂದು ಧನ್ಯವಾದ ಹೇಳಿದರು.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ಸೇನೆ ಕಾರ್ಮಿಕ ಸಂಘದ ಕಾರ್ಯದರ್ಶಿ, ಇನ್ನಿತರ ಸದಸ್ಯರು ಉಪಸ್ಥಿತಿ ಇದ್ದರು.

# ಪೆಹಲ್ಗಾಮ್ ದಾಳಿ: ನ್ಯಾಯಾಂಗ ತನಿಖೆಗೆ ಕೋರಿದ್ದ ಅರ್ಜಿ ವಜಾ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಮೇ.1-ಪಹಲ್ಗಾಮ್ ನಲ್ಲಿ 26 ನಾಗರಿಕರನ್ನು ಭಯೋತ್ಪಾದಕರು ಕಗ್ಗೊಲೆ ಮಾಡಿದ ಭಯೋತ್ಪಾದನಾ ದಾಳಿಯ ನ್ನು ನ್ಯಾಯಾಂಗ ತನಿಖೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾ ಮಾಡಿದೆ. ಘಟನೆಗೆ ಸಂಭಂದಿಸಿದಂತೆ ನ್ಯಾಯಾಂಗ ತನಿಖೆಗೆ ಕೋರಿ ಸಲ್ಲಿಸಲಾದ ಅರ್ಜಿಯ ಮೇಲೆ ಯಾವುದೇ ನಿರ್ದೇಶನಗಳನ್ನು ನೀಡಲು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ ಸಶಸ್ತ್ರ ಪಡೆಗಳ ಮನೋಸ್ಥೈರ್ಯವನ್ನು ಕುಗ್ಗಿಸುವ ಏನನ್ನೂ ಮಾಡಬಾರದು. ಪ್ರತಿಯೊಬ್ಬ ನಾಗರಿಕರು ಕೈಜೋಡಿಸಿ ಭಯೋತ್ಪಾದನೆ ವಿರುದ್ಧ ಹೋರಾಡುವ ಅಗತ್ಯವಿದೆ". ಈ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ನಿರ್ದೇಶನ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿದ ನಂತರ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯನ್ನು ವಜಾಗೊಳಿಸಲಾಗಿದೆ.

# ಹೋರಾಟಗಾರರನ್ನು ಹತ್ತಿಕ್ಕುವ ಕಾರ್ಯ ಉಸ್ತುವಾರಿ ಸಚಿವರಿಂದ ನಡೆಯುತ್ತಿದೆ: ಮೇ. 6ರಂದು ನಗರದಲ್ಲಿ ಪ್ರತಿಭಟನೆ: ಜ್ಞಾನೇಶ್ವರ ಸಿಂಗಾರೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ. 01 :- ಏ. 15 ರಂದು ಅರಣ್ಯ ಅಧಿಕಾರಿಗಳಿಂದ ಪತ್ರಕರ್ತ ರವಿ ಭೂಸಂಡೆ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ನಗರದಲ್ಲಿ ಜರುಗಿದ ಪ್ರತಿಭಟನೆಯಲ್ಲಿ ಸಚಿವರ ಕಾರ್ಯವೈಖರಿ ಕುರಿತು ಬಿಎಸ್‌ಪಿ ಜಿಲ್ಲಾಧ್ಯಕ್ಷ ಕಪಿಲ್ ಗೋಡಬೊಲೆ ಮಾತನಾಡಿದ್ದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ವಿನೋದ ಅಪ್ಪೆ ಎನ್ನುವವರ ಮೂಲಕ ಕಪಿಲ್ ಅವರ ಮೇಲೆ ಕೇಸ್ ದಾಖಲಿಸಿದ್ದಾರೆ. ಅದನ್ನು ಕೂಡಲೇ ವಾಪಸ್ ಪಡೆಯಬೇಕೆಂದು ಬಿಎಸ್‌ಪಿ ಪಕ್ಷದ ರಾಜ್ಯ ಕಾರ್ಯದರ್ಶಿ ಜ್ಞಾನೇಶ್ವರ ಸಿಂಗಾರೆ ತಿಳಿಸಿದರು.




ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕ-ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈಶ್ವರ ಖಂಡ್ರೆಯವರು ಉಸ್ತುವಾರಿ ಸಚಿವರಾದಾಗಿನಿಂದಲೂ ಜಿಲ್ಲೆಯಲ್ಲಿ ದಲಿತರ ಮೇಲೆ ನಿರಂತರವಾಗಿ ಹಲ್ಲೆಗಳು ನಡೆಯುತ್ತಿವೆ. ಭಾಲ್ಕಿ ತಾಲೂಕಿನ ಚಾಳಕಾಪುರ ಗ್ರಾಮದಲ್ಲೂ ದಲಿತರ ಮೇಲೆ ಹಲ್ಲೆಗಳು ನಡೆದವು. ಖುದಂಪುರ ಗ್ರಾಮದಲ್ಲಿ ಅಂಬೇಡ್ಕರ್ ಜಯಂತಿಗೆ ಸವರ್ಣಿಯರು ಅಡ್ಡಿಪಡಿಸಿದರು. ಎಟಿಎಂ ದರೋಡೆ ನಡೆದು ನೂರು ದಿನಗಳು ಗತಿಸಿದರು ದರೋಡೆಕೋರರನ್ನು ಹಿಡಿಯಲು ಆಗಿಲ್ಲ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ತಮ್ಮ ಅಸಮಧಾನ ಹೊರಹಾಕಿದರು. ಒಂದು ಕೋಟಿ ಸಸಿ ನೆಟ್ಟಿಲ್ಲ. ಅರಣ್ಯ ಭೂಮಿ ಒತ್ತುವರಿ ಕಾರ್ಯಾಚರಣೆ ಆಗುತ್ತಿಲ್ಲ. ಇದೆಲ್ಲದಕ್ಕೂ ನಮ್ಮಲ್ಲಿ ದಾಖಲೆಗಳಿವೆ. ಮೇ 6ರಂದು ನಗರದಲ್ಲಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಪಕ್ಷದ ಜಿಲ್ಲಾ ಉಪಾಧ್ಯಕ್ಷ ಸಚಿನ್ ಗಿರಿ ಮಾತನಾಡಿ ಪಕ್ಷದ ಜಿಲ್ಲಾಧ್ಯಕ್ಷ ಕಪಿಲ್ ಗೋಡಬೊಲೆ ಅವರಿಗೆ ಮಾತನಾಡುವ ಹಕ್ಕಿಲ್ವಾ? ಜಿಲ್ಲೆಯಲ್ಲಿ ಸಂವಿಧಾನದ ಹಕ್ಕುಗಳನ್ನು ಕಸಿಯಲಾಗುತ್ತಿದೆ. ಉಸ್ತುವಾರಿ ಸಚಿವರು ಹೋರಾಟಗಾರರನ್ನು ಕೇಸ್ ದಾಖಲಿಸುವ ಮೂಲಕ ಹತ್ತಿಕ್ಕುವ ಕೆಲಸ ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವ ಹೋಗಿ ಖಂಡ್ರೆಪ್ರಭುತ್ವ ಸಾಧಿಸಲು ಪ್ರಯತ್ನಿಸುತ್ತಿದ್ದಾರೆ. ನಗರದಲ್ಲಿ ಹಾಡುಹಗಲೆ ದರೋಡೆಗಳು ನಡೆಯುತ್ತಿವೆ. ಚುಳಕಿನಾಲಾ ಸಮಸ್ಯೆ, ಮುಲ್ಲಾಮಾರಿ ಡ್ಯಾಂ ಸಮಸ್ಯೆ, ಜಿಲ್ಲಾಸ್ಪತ್ರೆ ಸಮಸ್ಯೆ, ಅರಣ್ಯ ಭೂಮಿ ಒತ್ತುವರಿ ಸಮಸ್ಯೆ ಸೇರಿದಂತೆ ಹಲವು ಸಮಸ್ಯೆಗಳನ್ನು ಬಗೆಹರಿಸುವುದನ್ನು ಬಿಟ್ಟು ಹೋರಾಟಗಾರರ ಮೇಲೆ ಕೇಸ್ ದಾಖಲಿಸುವುದನ್ನು ಸಚಿವರು ನಿಲ್ಲಿಸಲಿ. ಜಿಲ್ಲೆಯವರೇ ಆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಇದನ್ನೆಲ್ಲಾ ನೋಡುತ್ತಿಲ್ಲವೇ? ಖಂಡ್ರೆ ವಿರುದ್ಧ ಕ್ರಮ ಕೈಗೊಳ್ಳಲಿ ಎಂದರು.

ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿಕಾಂತ ಭಾವಿದೊಡ್ಡಿ ಮಾತನಾಡಿ ಕಪಿಲ್ ಗೋಡಬೊಲೆ ವಿರುದ್ಧ ದಾಖಲಾದ ಕೇಸ್‌ನ್ನು ಸಚಿವರು ತಮ್ಮ ಬೆಂಬಲಿಗರಿಗೆ ಹೇಳಿ ವಾಪಸ್ ಪಡೆಯಬೇಕು. ಗೂಂಡಾಗಿರಿ ಮಾಡುವುದನ್ನು ಬಿಡಬೇಕು. ಜಿಲ್ಲೆಯಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆಯಾಗುವುದನ್ನು ನಿಲ್ಲಿಸಬೇಕು. ಈ ಕುರಿತು ಮೇ. 6ರಂದು ರಾಜ್ಯಕ್ಕೆ ಪಕ್ಷದ ರಾಜ್ಯ ಉಸ್ತುವಾರಿ ರಾಜಾರಾಮ್ ಹಾಗೂ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ಆಗಮಿಸುತ್ತಿದ್ದಾರೆ. ಡಿಸಿ, ಎಸ್‌ಪಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ಆಯೋಜಿಸಲಾಗಿದೆ. ನಂತರ ಪ್ರತಿಭಟನೆ ಹಮ್ಮಿಕೊಂಡಿದ್ದೇವೆ. ಕೇಸ್ ವಾಪಸ್ ಪಡೆದರೂ ಕೂಡಾ ವಿನೋದಕುಮಾರ ಅಪ್ಪೆ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯದರ್ಶಿ ಅಶೋಕ ಮಂಠಾಳಕರ್, ಪ್ರಮುಖರಾದ ಮಹೇಶ ಪೋಲಾ, ರಜನಿಕಾಂತ ಡಾಕುಳಗಿ, ಔರಾದ ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ಕಪಲಾಪುರೆ, ಸತೀಶ ದೊಡ್ಡಿ ಉಪಸ್ಥಿತರಿದ್ದರು.

## ಬಸವಣ್ಣನವರ ಆದರ್ಶ–ತತ್ವಗಳು ನಮಗೆಲ್ಲಾ ದಾರಿ–ದೀಪ: ಶಾಸಕ ನಾರಾ ಭರತ್ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 01–ಸಾಂಸ್ಕೃತಿಕ ನಾಯಕ,ಜಗಜ್ಯೋತಿಬಸವಣ್ಣನವರ ಆದರ್ಶ–ತತ್ವಗಳು ಇಂದು ನಮಗೆಲ್ಲಾ ದಾರಿ–ದೀಪವಾಗಿವೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಬುಧವಾರ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾಪಂಚಾಯತ್,ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಏರ್ಪಡಿಸಿದ್ದ 892ನೇ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಾದಿ ಶರಣರೆಲ್ಲರ ವಚನ ತತ್ವ ಪ್ರಸಾರಕ್ಕಾಗಿ ಬಸವ ಸಂಗಮ ಎಂಬ ಹೆಸರಿನಡಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಪ್ರಮುಖ ಸ್ವಾಮೀಜಿಗಳಿಂದ, ಪ್ರವಚನಕಾರರಿಂದ ರಾಜ್ಯಮಟ್ಟದ ಪ್ರವಚನ ಕಾರ್ಯಕ್ರಮವನ್ನು ಬಳ್ಳಾರಿಯಲ್ಲಿ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಬಸವಜಯಂತಿಯನ್ನು ಅದ್ದೂ–ರಿಯಾಗಿ ಆಚರಿಸಿದ್ದೇವೆ. ನಗರದಲ್ಲಿ ಆಶ್ವಾರೂಢ ಬಸವಣ್ಣನವರ ಪುತ್ಥಳಿ ಹಾಗೂ ವೃತ್ತ ನಿರ್ಮಾಣದ ಕಾಮಗಾರಿಗೆ ಚಾಲನೆ ನೀಡಲಾಗಿದೆ. ವಚನ ಹೇಳುವ ಮೂಲಕ ತತ್ವಾದರ್ಶದ ಬದುಕಿಗೂ ಸಿದ್ಧ, ಸಮಯ ಬಂದರೆ ಆಶ್ವಾರೂಢ ಬಸವಣ್ಣನ ಹಾಗೆ ಶರಣರ ರಕ್ಷಣೆಗೆ ಶಸ್ತ್ರ ಹಿಡಿಯಲು ಕೂಡ ಈ ಸಮಾಜ ಸಿದ್ದ ಎಂದು ಅಭಿಮತ ವ್ಯಕ್ತಪಡಿಸಿದರು.

ವೀರಶೈವ ಲಿಂಗಾಯತ ಮಠಗಳಿಂದಾಗಿ ಇಂದು ರಾಜ್ಯದ ಲಕ್ಷಾಂತರ ಜನ ಅಕ್ಷರಸ್ಥರಾಗಿದ್ದಾರೆ. ರಾಜ್ಯದ ಮಠಗಳ ಸ್ವಾಮೀಜಿಗಳು ಭಿಕ್ಷೆ ಬೇಡಿ ಎಲ್ಲ ಸಮುದಾಯದ ಜನರಿಗೆ ಶಿಕ್ಷಣ ನೀಡಿದ್ದಾರೆ. ಅದರಿಂದಾಗಿ ನಾವೆಲ್ಲ ಇಂದು ಬದುಕು ಕಟ್ಟಿಕೊಂಡಿದ್ದೇವೆ ಎಂದರು. ಕೊಟ್ಟೂರು ಶ್ರೀ ಬಸವಲಿಂಗಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ ಬಸವಣ್ಣ ಎಲ್ಲರಿಗೂ ಸೇರಿದ ವ್ಯಕ್ತಿ. ಎಲ್ಲಾ ಕೆಳವರ್ಗದ ಜನರನ್ನು ಮೇಲೆತ್ತಿದ ಮಹಾ ಮಹಿಮರು ಎಂದು ಹೇಳಿದರು. ಬಳ್ಳಾರಿಯ ಬಸವತತ್ವ ಚಿಂತಕರಾದ ಡಾ.ರವಿಶಂಕರ್ ಅವರು ಬಸವೇಶ್ವರ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿದರು. ಬಳ್ಳಾರಿಯ ಕೆ.ದೊಡ್ಡಬಸವ ಗವಾಯಿ ತಂಡದಿಂದ ವಚನ ಸಂಗೀತ ಪ್ರಸ್ತುತಪಡಿಸಿದರು. ಕಾರ್ಯಕ್ರಮದಲ್ಲಿ ವಿಶೇಷ ಸಾಧನೆಗೈದ ಸಮುದಾಯದ ಗಣ್ಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕ ಬಿ.ನಾಗರಾಜ, ರಾಷ್ಟ್ರೀಯ ಬಸವದಳದ ಗೌರವಾಧ್ಯಕ್ಷ ಸಿರಿಗೇರಿ ಪನ್ನರಾಜ್ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸಮುದಾಯದ ಮುಖಂಡರು ಹಾಗೂ ಅನೇಕರು ಉಪಸ್ಥಿತರಿದ್ದರು.

## ಸೇಡಂ, ಕಣ್ಣು ಮುಚ್ಚಿ ಕುಳಿತಿದೆ ತಾಲೂಕು ಆರೋಗ್ಯ ಇಲಾಖೆ






ಮಲ್ಲಮ್ಮ ನುಡಿ ವಾರ್ತೆ

ಸೇಡಂ: ಮೆ. 01. ತಾಲೂಕಿನ ಇಟಕಲ್ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ

ಕೇಂದ್ರದಲ್ಲಿ ವೈದ್ಯರೆ ಇಲ್ಲ ಚಿಕಿತ್ಸೆಗೆ ಬರುವ ರೋಗಿಗಳು ಆಸ್ಪತ್ರೆಗೆ ಭೇಟಿ ನೀಡಿ ಮತ್ತೆ ಖಾಸಗಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೀತಾರೆ ಏಕೆಂದರೆ ಆಸ್ಪತ್ರೆಗೆ ಬೀಗ ಆದ್ರೂ ಹಾಕಿರತಾರೆ ಅಥವಾ ವೈದ್ಯರು ಇರುವುದಿಲ್ಲ.

ನಮ್ಮ ನಾಡಿನ ಮಹಾಪುರುಷರ ಜಯಂತಿ ಆಚರಣೆ ಬಂದರೆ ಅಂದು ಆಸ್ಪತ್ರೆ ರಜೆ ಖಚಿತ.

ಸರಿಯಾದ ಚಿಕಿತ್ಸೆ ಸಿಗದ ಅನಿವಾರ್ಯವಾಗಿ ಬೇರೆ ಊರುಗಳಿಗೆ/ಖಾಸಗಿ ಆಸ್ಪತ್ರೆಗೆ ಹೋಗುವ ಅನಿವಾರ್ಯತೆ.

ಸದಾ ರಜೆಗಳಿಗಾಗಿ ಕಾಯುತ್ತಿರುವ ಸಿಬ್ಬಂದಿ ಇಂದು ಮಹಾತ್ಮ ಬಸವೇಶ್ವರ ಜಯಂತಿಯ ಕಾರಣ ಆಸ್ಪತ್ರೆ ಬೀಗ ಹಾಕಿ ಹೋಗಿರುವುದು ಇವರ ಕೆಲಸದ ಮೇಲಿನ ನಿಷ್ಠೆ ತೋರಿಸುತ್ತದೆ.

ಇಲ್ಲಿ ರಕ್ತ ಪರೀಕ್ಷೆಗೆ ಬರುವ ರೋಗಿಗಳಿಗೆ ಖಾಸಗಿ ರಕ್ತ ಪರೀಕ್ಷ ಕೇಂದ್ರಗಳಿಗೆ ಕಳುಹಿಸುವದು, ಇವರ ಕೆಲಸವಾಗಿದೆ. ಇದರ ಕುರಿತು ತಾಲೂಕ ಆರೋಗ್ಯಧಿಕಾರಿಗಳ ಗಮನಕ್ಕೆ ಸಾಕಷ್ಟು ಬಾರಿ ತಂದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ.

ನಿತ್ಯ 4 ಗಂಟೆಯ ನಂತರ ಆಸ್ಪತ್ರೆಯಲ್ಲಿ ಯಾರು ಸಿಬ್ಬಂದಿಗಳು ಇರುವುದಿಲ್ಲ ಎಂದು ಸಾರ್ವಜನಿಕರು ಬೇಸರ ವ್ಯಕ್ತ ಪಡಿಸಿದ್ದಾರೆ. ಹಾಗೆ ಆಸ್ಪತ್ರೆಗೆ ಸಿ ಸಿ ಕ್ಯಾಮರಾ ಅಳವಡಿಕೆ ಮತ್ತು ಆಂಬುಲೆನ್ಸ್ ವ್ಯವಸ್ಥೆ ಅವಶ್ಯಕತೆ ಇದ್ದು ಈ ವಿಷಯವನ್ನು ಹಿರಿಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ಆದಷ್ಟು ಬೇಗನೆ ಅನುಕೂಲ ಮಾಡಿಕೊಡಬೇಕೆಂದು ಸಾರ್ವಜನಿಕರ ಪರವಾಗಿ ಮಹಾಂತೇಶ್ ಸೌಕಾರ್ ಸಕ್ಲೇಶಪಲ್ಲಿ ಸಮಾಜ ಸೇವಕರು ಆಗ್ರಹಿಸಿದ್ದಾರೆ.

## ಪಪ್ಪಿ ಚಿತ್ರ ಕಲಾವಿದರಿಗೆ ಗೌರವಿಸಿದ ಮಹಿಳಾ ಧ್ವನಿ ಸಂಸ್ಥೆ. ಸ್ಥಳೀಯ ಕಲಾವಿದರಿಗೆ ಪ್ರೋತ್ಸಾಹ ಬೇಕಿದೆ : ಪ್ರಿಯದರ್ಶಿನಿ ಮುಂಡರಗಿಮಠ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಮಹಿಳಾ ಧ್ವನಿ ಸಂಸ್ಥೆಯ ಕಚೇರಿಯಲ್ಲಿ ನಿನ್ನೆ ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ದೊರೆತಿರುವ ಪಪ್ಪಿ ಚಿತ್ರದ ಸ್ಥಳೀಯ ಕಲಾವಿದರಾದ ದುರುಗಪ್ಪ ಕಂಬಳಿ,ರೇಣುಕಾ ದೇಸಾಯಿ,ಹನುಮೇಶ ಬೇರ್ಗಿ ಅವರನ್ನು ಸನ್ಮಾನಿಸಿ ಅಭಿನಂಧಿಸಿ ಚಿತ್ರಕ್ಕೆ ಶುಭ ಹಾರೈಸಲಾಯಿತು.

ಕೊಪ್ಪಳದ ಚಿತ್ರಮಂದಿರಸಲ್ಲಿ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕರು ಹಾಗೂ ಅವರ ತಂಡವು ಸಿನೆಮಾ ವೀಕ್ಷಿಸಿ ಚಿತ್ರ ಕಲಾತಂಡಕ್ಕೆ ಶುಭ ಹಾರೈಸಿದ್ದರು. ನಂತರ ಕಚೇರಿಯಲ್ಲಿ ಗೌರವ ಆತಿಥ್ಯ ನೀಡಿ ಸನ್ಮಾನಿಸಲಾಯಿತು. ಇದೇ ವೇಳೆ ಮಾತನಾಡಿದ ಪ್ರಿಯದರ್ಶಿನಿ ಮುಂಡರಗಿಮಠ ಪಪ್ಪಿ ಚಿತ್ರವು ಉತ್ತಮ ರೀತಿಯಲ್ಲಿ ಮೂಡಿ ಬಂದಿದೆ. ಮಧ್ಯಮ ವರ್ಗದ ಕುಟುಂಬದ ಬದುಕಿನ ಜಂಜ–ಾಟದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬಿತ್ತರಿಸುವ ಸಂದೇಶವನ್ನು ಸಮಾಜಕ್ಕೆ ತಿಳಿಸುವಲ್ಲಿ ಈ ಚಿತ್ರತಂಡ ಯಶಸ್ವಿಯಾಗಿದೆ. ಕೊಪ್ಪಳದ ನೆಲಮೂಲ ಭಾಷೆ ಹಾಗೂ ಉತ್ತರ ಕರ್ನಾಟಕದ ಜೀವನ ಶೈಲಿಯನ್ನು ಇದರಲ್ಲಿ ಉತ್ತಮ ರೀತಿಯಲ್ಲಿ ತೋರಿಸಲಾಗಿದೆ. ಬಾಲ ಕಲಾವಿದರು ಕೂಡ ಅದ್ಭುತವಾಗಿ ನಟಿಸಿದ್ದಾರೆ ಚಿತ್ರ ಶತದಿನ ಪೂರೈಸಲಿ ಹಾಗೇಯೇ ಕಲಾವಿದರಿಗೆ ಪ್ರೋತ್ಸಾಹ ಸಿಗಲೆಂದು ಶುಭ ಹಾರೈಸಿದರು.

ಇದೇ ವೇಳೆ ಬಿ.ಎನ್. ಹೊರಪೇಟಿ,ಪುಷ್ಪಾ ಕಿನ್ನಾಳ,ಶರಣು ಕಲಾವಿದರು ಉಪಸ್ಥಿತಿ ಇದ್ದರು.

## ಸೇಡಂ, ವಿಭಿನ್ನವಾಗಿ ಕರವೇ ವತಿಯಿಂದ ವಿಶ್ವ ಕಾರ್ಮಿಕರ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ, 01. ತಾಲೂಕಿನ ರಾಘಪುರ ಗ್ರಾಮದಲ್ಲಿ

ವಿಶ್ವ ಕಾರ್ಮಿಕರ ದಿನಾಚರಣೆ ಅಂಗವಾಗಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕ ಘಟಕ ಸೇಡಂ, ವತಿಯಿಂದ ರಾಘಪುರ್ ಗ್ರಾಮದ ಹಜರತ್ ಮೌಲಾಲಿ ದರ್ಗಾದ ಆವರಣದಲ್ಲಿ ಕಾರ್ಮಿಕರ ದಿನಾಚರಣೆಯನ್ನು ವಿಶೇಷವಾಗಿ ಆಚರಣೆ ಮಾಡಲಾಯಿತು.

ಕುಶಲಕರ್ಮಿಗಳಿಗೆ (ಕಾಯಕ ಯೋಗಿ) ಬಂದುಗಳಿಗೆ ಶವಸಂಸ್ಕಾರ ಮಾಡುವ ಮಹನೀಯರಿಗೆ, ತಮ್ಮ ಜೀವದ ಹಂಗನ್ನು ತೊರೆದು ಹಗಲಿರುಳು ತಮ್ಮ ಕಾಯಕದಲ್ಲಿ ನಿರತ ರಾಗಿರುವ ಲೈನ್ ಮ್ಯಾನ್ ಗಳಿಗೆ ಹಾಗೂ ಸಮಾಜದಲ್ಲಿ ಶಾಂತಿ ನೆಲೆಸಲು ಮುಖ್ಯಪಾತ್ರ ವಹಿಸುವ ಪೋಲಿಸ್ ಸಿಬ್ಬಂದಿ ವರ್ಗಕ್ಕೆ ವಿಶೇಷವಾಗಿ ಸನ್ಮಾನ ಮಾಡಿ ವಿಭಿನ್ನವಾಗಿ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕಾಧ್ಯಕ್ಷ ಡಾ.ರಾಮಚಂದ್ರ ಗುತ್ತೇದಾರ ಶ್ರೀನಿವಾಸ ರೆಡ್ಡಿ ಮದನಾ, ಗುಂಡಪ್ಪ ಪೂಜಾರಿ, ಮಹೇಶ ರೆಡ್ಡಿ,ಚಂದ್ರಶೇಖರ ಮಡಿವಾಳ, ನವೀನ ಗುತ್ತೇದಾರ, ಮುಕುಂದ ಬಂದೆಪಲ್ಲಿ,ಸಿದ್ದಲಿಂಗಮದನ,ಅನಿಲ. ನೀಲಿ,ಹಾಗೂ ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು ಸ್ಥಳೀಯರು ಉಪಸ್ಥಿತರಿದ್ದರು.

## ಇಟಕಲ್ ಗ್ರಾಮದಲ್ಲಿ ಕ್ರಿಕೆಟ ಪಂದ್ಯ6 ನೇ ಸಿಜನ್ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮೆ. 01. ತಾಲೂಕಿನ ಇಟಕಾಲ ಗ್ರಾಮದಲ್ಲಿ ಪ್ರೀಮಿಯರ್ ಲೀಗ ಕ್ರಿಕೆಟ್ ನ 06 ಸೀಜನ ಆರಂಭ ಈ ಕಾರ್ಯಕ್ರಮಕ್ಕೆ

ಇಟಕಲ್, ಗ್ರಾಂ ಪಂ ಅಧ್ಯಕ್ಷ ಲಾಲಪ್ಪ ಪೋಟೆಲಿ

ರಾಜಾ ಶ್ರೀ ವಿಶ್ವನಾಥ್ ರೆಡ್ಡಿ ಪಾಟೀಲ ಕಾಕಲವಾರ. ಸಾಯಪ್ಪ ಬೋಯಿನಿ. ವೇಣುಗೋಪಾಲ್ ದಳಪತಿ. ವಿರಾರೆಡ್ಡಿ ದೇಶಮುಖ. ದೇವಿದ್ರಪ್ಪ. ರಫೀಕ್.ಲಾಲಪ್ಪ ಯಾದವ್.ಇಸ್ರಾಯಿಲ್. ಲಕ್ಷ್ಮಣ್ ಕಾವಲಿ.ಆನಂದ. ವೆಂಕಟ್ ರೆಡ್ಡಿ.ನರೇಶ ಗೌಡ. ಭೀಮಶಪ್ಪ ನೀರೇಟಿ. ಪ್ರಭಾಕರ. ಸಂಜು. ಆಕಾಶ. ಸಾಯಿಬಣ್ಣ.ಅಶೋಕ್ ರೆಡ್ಡಿ. ವಿನೋದ ಕುಮಾರ. ಇಮ್ರಾನ. ಭೀಮಶಪ್ಪ ಅಮ್ಜದ್ ಖಾನ. ರಾಖೆಶ. ನಾಗರಾಜ. ಮಹಿಬುಬ. ಆಫ್ರೋಜ್. ಭೀಮು ಬುರಗಪಲ್ಲಿ.ಮತ್ತು ಇಟಕಾಲ್ ಹಾಗು ವಿವಿಧ ಗ್ರಾಮಗಳ ತಂಡಗಳ ಆಟಗಾರರು ಉಪಸ್ಥಿತರಿದ್ದರು.

## ಪಂಚಕರ್ಮ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಧನ್ವಂತರಿ ಆಯುರ್ವೇದಿಕ್ ಮತ್ತು ಪಂಚಕರ್ಮ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದ್ದು, ಇಲ್ಲಿ ಮೂಲವ್ಯಾಧಿ, ಬೆನ್ನುನೋವು, ಚರ್ಮರೋಗ, ಅಲರ್ಜಿ, ಮೆಲ್ ಇನಫರ್ಟಿಲಿಟಿ, ವೆರಿಕೋಸ್ ವೇನ್, ಅಣ್ಣಿ, ಲೈಪೋಮಾ (ಗಡ್ಡೆ), ಬಿ.ಪಿ, ಗಡ್ಡೆ, ಸಕ್ಕರೆ ರೋಗ, ಸೋರಿಯಾಸಿಸ್, ಕುತ್ತಿಗೆ ನೋವು, ಕಿಡ್ನಿ ಸ್ಟೋನ್, ಅಸಿಡಿಟಿ, ಮಂಡಿ ನೋವು, ಕೂದಲು ಉದುರುವಿಕೆ, ಮೊಡವೆಗಳು (ಪಿಂಪಲ್ಸ್), ಓಬಿಸಿಟಿ, ಕೆಮ್ಮು ಮತ್ತು ದಮ್ಮು, ನರಳೆಗಳು, ಪ್ಯಾರಲೇಸೇಸ್ (ಲಕ್ವ), ಗುಪ್ತರೋಗ ಇವುಗಳಿಗೆ ಚಿಕಿತ್ಸೆ ನೀಡಲಾಗುತ್ತದೆ. ಒಬ್ಬ ರೋಗಿಗೆ ಆತ್ಮವಿಶ್ವಾಸವೇ ದಿವ್ಯೌಷಧ. ಒಂದು ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆ ಸಿಗುತ್ತದೆ ಎನ್ನುವ ಭರವಸೆ ಸಿಕ್ಕಿದರೆ ಆತ ಎಲ್ಲವನ್ನೂ ಗೆದ್ದಂತೆ. ಇದಕ್ಕೆ ಉತ್ತಮ ಉದಾಹರಣೆ ಹುಮನಾಬಾದನ ಧನ್ವಂತರಿ ಆಯುರ್ವೇದಿಕ್ ಮತ್ತು ಪಂಚಕರ್ಮ ಆಸ್ಪತ್ರೆ ಎನ್ನಲಾಗಿದೆ. ಯಾವುದೇ ಕಾಯಿಲೆ ಇದ್ದರೂ ಗುಣಪಡಿಸಬಹುದಾಗಿದೆ. ವಿಳಾಸ ಅಗಡಿ ಕಾಂಪ್ಲೆಕ್ಸ್ ಕೇಂದ್ರ ಬಸ್ ನಿಲ್ದಾಣ ಹತ್ತಿರ ಹುಮನಾಬಾದ್ ಜಗದೀಶ ಅಗಡಿ ಇವರ ಪುತ್ರ ಡಾ. ಸಚೀನ್ ಅಗಡಿ ಮೂಲವ್ಯಾದಿ ತಜ್ಞರು M.S.(Ayu) 9742081111 ಹಾಗೂ ಡಾ. ರಚಿತಾ ಎಸ್. ಅಗಡಿ ಎಂ.ಡಿ. (ಪಂಚಕರ್ಮ) ಇವರಿಗೆ 8971997505 ಸಂಪರ್ಕಿಸಬಹುದು.

## ಉದ್ಯೋಗ ಖಾತ್ರಿ ಕೂಲಿ ಕಾರ್ಮಿಕರಿಂದ ಮೇ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.1– ಜಿಲ್ಲೆಯ ಕಮಲಾಪುರ ತಾಲೂಕಿನ ಮಹಾಗಾಂವ ಗ್ರಾಮದಲ್ಲಿ ಉದ್ಯೋಗ ಖಾತ್ರಿ ಅಡಿಯಲ್ಲಿ ಕೆರೆ ಹೂಳೆತ್ತುವ ಕಾಮಗಾರಿಯ ಕೆಲಸದ ಮುನ್ನ ಕೂಲಿ ಕಾರ್ಮಿಕರು ವಿಶ್ವಕಾರ್ಮಿಕ ದಿನಾಚರಣೆಯನ್ನು ಆಚರಿಸಿದರು.

ಡಾ.ಬಿ.ಆರ್. ಅಂಬೇಡ್ಕರ ಹಾಗೂ ಮಹಾತ್ಮ ಗಾಂಧೀಜಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಕಾರ್ಮಿಕರ ದಿನಾಚರಣೆಗೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ನೀಲಮ್ಮ ಹಾಗೂ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯ ಕಾರ್ಯಕರ್ತರಾದ. ಸುನಿತಾ ಮತ್ತು ರಾಜ್ಯಪ್ರಧಾನಕಾರ್ಯದರ್ಶಿಗಳಾದ ಗುರುರಾಜ ಸರ. ಹಾಗೂ ಗ್ರಾಮ ಪಂಚಾಯತಿಯ. ಬಿ ಎಫ್ ಟಿ ವಿಜಯ್ ಕುಮಾರ ಮತ್ತು ಕಾಯಕ ಮಿತ್ರರಾದ ಶ್ರೀಮತಿ ರೇಷ್ಮಾ ಹಾಗೂ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ನರೇಗಾ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಂದ ವಿಶ್ವ ಕಾರ್ಮಿಕರ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಹಾತ್ಮಗಾಂಧಿ ನರೇಗಾ ಯೋಜನೆಯೂ ಗ್ರಾಮೀಣ ಪ್ರದೇಶದ ಬಡ ಕೂಲಿಕಾರರ ಆರ್ಥಿಕ ಜೀವನದ ಭದ್ರ ಬುನಾದಿಯಾಗಿದೆಂದು ಕಾಯಕ ಬಂಧು ಶಿವಾನಂದ ಬೆಣಕಲ್ ಕರೆ ನೀಡಿದರು.

"ದಿನಾಂಕ:01–05–2025ರಂದು ವಿಶ್ವ ಕಾರ್ಮಿಕ ದಿನಾಚರಣೆ–ಯ ನಿಮಿತ್ತ ಹಿರೆಬಗನಾಳ ಗ್ರಾಮ ಪಂಚಾಯತಿಯಿಂದ ಹಿರೆಬಗನಾಳ ಗ್ರಾಮದ ನರೇಗಾ ಕಾಮಗಾರಿ ಸ್ಥಳವಾದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಕಾರ್ಮಿಕ ದಿನಾಚರಣೆ ಆಚರಿಸಿ ಮಾತನಾಡಿ ಅಸಂಘಟಿತ ಕೂಲಿಕಾರರೆಂದೆ ಕರೆಸಿಕೊಳ್ಳುವ ನರೇಗಾ ಕೂಲಿಕಾರರು ಪ್ರತಿನಿತ್ಯ ವಿಭಿನ್ನವಾದ ಕಾಮಗಾರಿಗಳಲ್ಲಿ ಕೆಲಸ ಮಾಡುತ್ತಿರುತ್ತಾರೆ. ಆದರೂ ಸಹ ಗ್ರಾಮಸ್ಥರೆಲ್ಲರೂ ಸೇರಿ ಒಂದು ಕಡೆ ಕೆಲಸ ಮಾಡುವುದರಿಂದ ಗ್ರಾಮೀಣ ಪ್ರದೇಶದ ಸೊಗಡನ್ನು ನಾವು ನರೇಗಾ ಕಾಮಗಾರಿಗಳಲ್ಲಿ ಕಾಣಬಹುದು. ಇದರಿಂದಾಗಿ ಆರ್ಥಿಕ ಸಧೃಡತೆಯ ಜೊತೆಗೆ ಸಾಮಾಜಿಕ ಜೀವನದಲ್ಲಿಯೂ ಸಹ ಬೆರೆಯುತ್ತಾ ಬೆಸರವಿಲ್ಲದೇ ಮಹಾತ್ಮಗಾಂಧಿ ನರೇಗಾ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಇದಕ್ಕೆ ಸಾಕ್ಷಿ ಎಂಬಂತೆ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಹಿರೇಬಗನಾಳ ಗ್ರಾಮ ಪಂಚಾಯತಿಯಲ್ಲಿ ಪ್ರತೀವರ್ಷ ಸಾವಿರಾರು ಕೂಲಿಕಾರರು ಕೆಲಸ ಮಾಡುತ್ತಾ ತಮ್ಮ ಬದುಕಿನ ಬಂಡಿ ಸಾಗಿಸುತ್ತಿದ್ದಾರೆ ಎಂದರು.

ಮಹಾತ್ಮಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಕೂಲಿಕಾರರರು ವಲಸೆ ಹೊಗಬಾರದೆಂದು ಜಾರಿಯಾದ ಮಹಾತ್ವಾಕಾಂಕ್ಷಿ ಯೋಜನೆಯುಲ್ಲೊಂದು, ಒಂದು ಕುಟುಂಬಕ್ಕೆ 100 ದಿನಗಳ ಖಾತ್ರಿ ಕೆಲಸವನ್ನು ಗ್ರಾಮ ಪಂಚಾಯತಿಯಿಂದ ನೀಡಲಾಗುತ್ತದೆ, ಅದನ್ನು ಎಲ್ಲರೂ ಪಡೆದುಕೊಳ್ಳಬೇಕು ಅದೇ ರೀತಿ ಪ್ರಸ್ತುತ ಆರ್ಥಿಕ ವರ್ಷದಲ್ಲಿ ರೂ.370ಕೂಲಿ ಆಗಿದ್ದು ಇದರಿಂದಾಗಿ ಗ್ರಾಮೀಣ ಪ್ರದೇಶದ ಒಂದು ಕುಟುಂಬ ಅಂದರೆ (ಕನಿಷ್ಟ ಇಬ್ಬರು) ಒಂದು ದಿನ ನರೇಗಾ ಕಾಮಗಾರಿ ನಿರ್ವಹಿಸಿದರೆ ರೂ. 740 ಕೂಲಿ ದೊರೆಯುತ್ತದೆ ಅದಕ್ಕಾಗಿ ಗ್ರಾಮೀಣ ಪ್ರದೇಶದ ಕೂಲಿಕಾರರು ಹೆಚ್ಚಿನ ಸಂಖ್ಯೆಯಲ್ಲಿ ನರೇಗಾ ಕಾಮಗಾರಿಯಲ್ಲಿ ತೋಡಗಬೇಕು ಮತ್ತು ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿಗಳಲ್ಲಿ ಪಾಲ್ಗೊಳ್ಳಲು ಸಲಹೆ ನೀಡಿದರು.

ಸ್ಥಳದಲ್ಲಿ ಗ್ರಾಮ ಪಂಚಾಯತಿಯ ವಾಟರ್ ಮ್ಯಾನ್ ದೇವರಾಜ ಅಳವಂಡಿ, ಕಾಯಕ ಬಂಧು ಶಾಂತಮ್ಮ ರೊಟ್ಟಿ, ಮರಿಶಾಂತವೀರ ಅಂಗಡಿ, 151 ಕೂಲಿಕಾರರು ಹಾಜರಿದ್ದರು.

## ವಕ್ಫ್ ತಿದ್ದುಪಡಿ ಕಾಯಿದೆ ವಿರೋಧಿಸಿ ಕೊಪ್ಪಳದಲ್ಲಿ ನಾಳೆ ಬೃಹತ್ ಪ್ರತಿಭಟನಾ ಮೆರವಣಿಗೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೇಂದ್ರ ಸರ್ಕಾರ ಜಾರಿಗೆತಂದಿರುವ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಹಾಗೂ ಈ ಕಾಯ್ದೆಯನ್ನು ವಾಪಸ್ ಪಡೆಯಲು ಆಗ್ರಹಿಸಿ ಅಖಿಲ ಭಾರತ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿ ವತಿಯಿಂದ ಕೊಪ್ಪಳ ನಗರದಲ್ಲಿ ಮೇ. 3 ರಂದು ಶನಿವಾರ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಮುಸ್ಲಿಂ ಧರ್ಮ ಗುರು ಹಾಗೂ ಯುಸೂಫಿ ಯ ಮಸೀದಿಯ ಖತೀಬ್ ಇಮಾಮ್ ಮೌಲಾನ ಮುಫ್ತಿ ಮೊಹಮ್ಮದ್ ನಜೀರ್ ಅಹಮದ್ ಖಾದ್ರಿ ವ ತಸ್ಕಿನಿ ಹೇಳಿದರು,

ಅವರು ಗುರುವಾರದಂದು ನಗರದ ಪತ್ರಿಕಾ ಭವನದಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಂವಿಧಾನದ ಮೂಲಭೂತಅಂಶಗಳವಿರುದ್ಧವಾಗಿ ಮುಸ್ಲಿಮರ ನ್ಯಾಯಯುತವಾದ ಆಸ್ತಿಗಳಾದ ಮಸ್ಜಿದ್, ದರ್ಗಾ, ಈದ್ಗಾ, ಖಬ್ರಸ್ಥಾನಗಳಿಗೆ ದಕ್ಕೆ ಮತ್ತು ಮುಸ್ಲಿಂರ ಭಾವನೆಗಳಿಗೆ ಘಾಸಿಯನ್ನುಂಟು ಮಾಡುವ ವಕ್ಫ್ ತಿದ್ದುಪಡಿ ಕಾಯಿದೆ 2025 ಯನ್ನು ಜಾರಿ ಮಾಡಿರವ ಕ್ರಮವು ಸಂವಿಧಾನಾತ್ಮಕವಾದ ಹಕ್ಕುಗಳನ್ನು ಕಸಿದುಕೊಳ್ಳುವದಾಗಿದೆ ಇದನ್ನು ನಾವು ಬಲವಾಗಿ ಖಂಡಿಸಿ, ಇದರ ವಿರುದ್ಧ ಹೋರಾಟವನ್ನು ಮುಂದುವರೆಸುತ್ತೇವೆ ಎಂದರು

ಮುಸ್ಲಿಂಸಮಾಜದಮುಖಂಡರಾದ ಅಮ್ಜದ್ ಪಟೇಲ್ ಮಾತನಾಡಿ

ವಕ್ಫ್ ಆಸ್ತಿ ಅಂದರೆ ದಾನಿಗಳು

ಮುಸ್ಲಿಮ್ ಸಮುದಾಯದ ಸಾಮೂಹಿಕ ಕೆಲಸಗಳಿಗೆ ದಾನ ಮಾಡಿದ ಆಸ್ತಿಗಳು ಸದರಿ ಆಸ್ತಿಗಳನ್ನು ಯಾರು ದುರುಪಯೋಗ ಮಾಡಬಾರದು ಎಂದು ಸರ್ಕಾರದ ಅಡಿಯಲ್ಲಿ ಬರುವ ವಕ್ಫ್ ಎಂಬ ಸರ್ಕಾರಿ ಮಂಡಳಿಯಲ್ಲಿ ನೊಂದಣಿ ಮಾಡಲಾಗುತ್ತದೆ ಮತ್ತು ಅದರ ನಿರ್ವಹಣೆಯನ್ನು ಮುಸ್ಲಿಮರೆ ಇಸ್ಲಾಂ ಧರ್ಮದ ಆಚರಣೆಗಳ ಅನುಗುಣವಾಗಿ ಮಾಡುತ್ತಾರೆ ಇದು ಸಂವಿಧಾನವು ಮುಸ್ಲಿಮರಿಗೆ ನೀಡಿರುವ ಮೂಲಭೂತ ಹಕ್ಕು ಸಂವಿಧಾನದ ಆರ್ಟಿಕಲ್ 26ರ ಪ್ರಕಾರ ಭಾರತದ ಯಾವುದೇ ಧರ್ಮೀಯರು ತಮ್ಮ ಧಾರ್ಮಿಕ ಚಟುವಟಿಕೆಗಳನ್ನು ನಡೆಸಲು ಹಾಗೂ ದತ್ತಿದಾನಗಳನ್ನು ಮಾಡಲು ತಮ್ಮದೇ ಆದ ಸಂಸ್ಥೆಗಳನ್ನು ರಚಿಸಿಕೊಂಡು ನಿರ್ವಹಣೆ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಮುಸ್ಲಿಮ್ ಸಮಾಜದ ಮುಖಂಡ ಹಾಗೂ ನಗರ ಕಾಂಗ್ರೆಸ್ ಅಧ್ಯಕ್ಷ ಎಂ. ಪಾಶಾ ಕಾಟನ್ ಮಾತನಾಡಿ, ಮೇಲ್ನೋಟಕ್ಕೆ ಸೆಕ್ಯುಲಾರ್ ಕ್ರಮವೆಂದು ಕಾಣುವ ಈ ತಿದ್ದುಪಡಿಗಳು ಅನ್ಯಾಕ್ರಮಣ ದುರುದ್ದೇಶವನ್ನೇ ಹೊಂದಿರುವುದು ಸ್ಪಷ್ಟ, ಏಕೆಂದರೆ ಮುಸ್ಲಿಂ ಧಾರ್ಮಿಕ ಸಂಸ್ಥೆಗಳಲ್ಲಿ ಮುಸ್ಲಿಮೇತರರನ್ನು ಕಡ್ಡಾಯ ಮಾಡುವ ಮೋದಿ ಸರ್ಕಾರ ಅದೇ ನಿರ್ಬಂಧವನ್ನು ಹಿಂದೂ, ಜೈನ, ಸಿಖ್, ಕ್ರಿಸ್ಚಿಯನ್ ಧಾರ್ಮಿಕ ಸಂಸ್ಥೆಗಳ ಆಡಳಿತ ನಿರ್ವಾಹಣೆಗಳಲ್ಲೂ ಆಯಾ ಧರ್ಮದವರಲ್ಲದವರನ್ನು ಏಕೆ ಕಡ್ಡಾಯ ಮಾಡುವುದಿಲ್ಲ? ಎಂದು ಪ್ರಶ್ನಿಸಿದರು.

ಕೇಂದ್ರಸರ್ಕಾರದ ಕೋಮುವಾದಿ ಪಕ್ಷಪಾತ ಮತ್ತು ತಾರತಮ್ಯ ಎದ್ದು ಕಾಣುತ್ತದೆ. ಸ್ವಾತಂತ್ರ್ಯಾ ನಂತರದಲ್ಲಿ 1954 ರಲ್ಲಿ ವಕ್ಫ್ ಕಾಯಿದೆಯೊಂದು ಜಾರಿಯಾಯಿತು. ಅದಾದ ನಂತರದಲ್ಲಿ ಪ್ರಧಾನವಾಗಿ 1995 ರಲ್ಲಿ ಒಂದು ಸಮಗ್ರವಾದ ವಕ್ಫ್ ಕಾಯಿದೆ ಜಾರಿಯಾಯಿತು. ಇದು ಪ್ರಧಾನ ಕಾಯಿದೆಯಾಗಿದ್ದು ಮೋದಿ ಸರ್ಕಾರ ಈ ಕಾಯಿದೆಗೆ ಅಮೂಲಾಗ್ರವಾದ ತಿದ್ದುಪಡಿಯನ್ನು ತಂದಿದೆ ಎಂದು ಹೇಳಿದರು. ಸೈಯದ್ ಫೌಂಡೇಶನ್ ಅಧ್ಯಕ್ಷ ಹಾಗೂ ಸಮಾಜದ ಮುಖಂಡರಾದ ಕೆ.ಎಂ.ಸೈಯದ್ ಮಾತನಾಡಿ ಸದರಿ ಕಾಯ್ದೆ ತಿದ್ದುಪಡಿ ಮಾಡಿರುವ ಕ್ರಮ ಖಂಡಿಸಿ ಬೃಹತ್ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು, ಸಮಾಜದ ಯುವ ಮುಖಂಡ ಸಲೀಂ ಮಂಡಲಗೇರಿ ಮಾತನಾಡಿ, ಸಂವಿಧಾನ ವಿರೋಧಿ ಕ್ರಮಗಳನ್ನು ಅನುಸರಿಸುತ್ತಿರುವ ಕೇಂದ್ರ ಸರ್ಕಾರವು ಮುಸ್ಲಿಂರನ್ನು ಗುರಿಯಾಗಿರಿಸಿಕೊಂಡು ಧಮನೀಯ ಕ್ರಮಗಳನ್ನು ಕೈಗೊಂಡಿರುವುದು ಅತ್ಯಂತ ಖಂಡನೀಯವಾದುದ್ದು, ಇಂತಹ ಕ್ರಮಗಳು ದೇಶವಾಸಿಗಳ ಭಾವನೆಗಳಿಗೆ ಮಾತ್ರವಲ್ಲ, ಸಂವಿಧಾನದ ಹಕ್ಕು ಕಸಿದುಕೊಳ್ಳುವ ಸರ್ವಾಧಿಕಾರಿ ಧೋರಣೆಯನ್ನು ನಾವು ಬಲವಾಗಿ ವಿರೋಧಿಸುತ್ತೇವೆ, ಸಂವಿಧಾನ ಹಾಗೂ ಅದರ ಹಕ್ಕುಗಳನ್ನು ಕಾಪಾಡಿಕೊಳ್ಳಲು ನಾವು ಹೋರಾಟ ನಡೆಸುತ್ತೇವೆ ಎಂದರು.

ಸಂವಿಧಾನ ವಿರೋಧಿ ವಕ್ಫ್ ತಿದ್ದುಪಡಿ ಕಾಯಿದೆ 2025 ಜಾರಿ ವಿರೋಧಿಸಿ ಹಾಗೂ ಇದನ್ನು ವಾಪಸ್ ಪಡೆಯಲು ಆಗ್ರಹಿಸಿ ಮೇ. 3 ಶನಿವಾರ ಜರುಗುವ ಹೋರಾಟಕ್ಕೆ ಅನೇಕ ಸಂಘ–ಸಂಸ್ಥೆಗಳ, ಮತ್ತು ವಿವಿಧ ಸಮುದಾಯದವರು ಬೆಂಬಲವನ್ನು ನೀಡಿದ್ದಾರೆ, ಸಮಸ್ತ ಮುಸ್ಲಿಂ ಭಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಅಖಿಲ ಭಾರತ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿಯ ಮುಖಂಡರು ಜಂಟಿಯಾಗಿ ಕರೆ ನೀಡಿದರು.

ಈ ಸಂದರ್ಭದಲ್ಲಿ ಅಂಜುಮನ್ ಕಮಿಟಿ ಅಧ್ಯಕ್ಷರಾದ ಎಂ.ಡಿ ಆಸಿಫ್ ಕರ್ಕಿಹಳ್ಳಿ ,ಸಮಾಜದ ಮುಖಂಡರಾದ ಹಾಗೂ ಕೊಪ್ಪಳ ನಗರಸಭೆ ಸದಸ್ಯರಾದ ಅಜೀಂ ಅತ್ತಾರ, ಮಾಜಿ ಸದಸ್ಯರಾದ ಮಾನ್ವಿ ಪಾಷಾ, ಸಮಾಜದ ಯುವ ನಾಯಕರಾದ ಸಲೀಂ ಅಳವಂಡಿ ಸೈಯದ್ ನಾಸಿರ್ ಕಂಠಿ, ಫಕ್ರುದ್ದೀನ್ ಸಾಬ್ ನದಾಫ್, ಅಬ್ದುಲ್ ಅಜೀಜ್ ಮಾನ್ವಿಕರ್ ಸೇರಿದಂತೆ ಇತರರು ಇದ್ದರು.

# ಕಾಯಕ ತತ್ವ ಅರಿತು ಶ್ರಮ ಜೀವಿಗಳಾಗಿ–ಡಾ.ಗಾಳಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.1– ಬಸವಣ್ಣನವರ ಕಾಯಕ ತತ್ವ ತಿಳಿಯುವ ಮೂಲಕ ಶ್ರಮ ಸಂಸ್ಕೃತಿಯನ್ನು ಅರಿತುಕೊಳ್ಳಬೇಕು ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಬುಧವಾರ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ವಚನ ಸಾಹಿತ್ಯದಲ್ಲಿರುವ ಮಾನವೀಯ ಮೌಲ್ಯಗಳನ್ನು ಹಾಗೂ ಕಾಯಕ ತತ್ವಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಬಸವಣ್ಣನವರು ಸಮಾಜಕ್ಕೆ ವೈಚಾರಿಕ ಬೆಳಕನ್ನು ನೀಡಿದ ಮಹಾಮಾನವತಾವಾದಿಯಾಗಿದ್ದಾರೆ ಎಂದು ಅವರು ಹೇಳಿದರು.

ಬಸವಣ್ಣನವರ ವಚನಗಳಲ್ಲಿ ವೈಚಾರಿಕತೆ,ಸಮಾನತೆಯ ಪರಿಕಲ್ಪನೆ, ದೂರದೃಷ್ಟಿ,ಮಾನವೀಯ ಅಂತಃಕರಣ ತುಂಬಿಕೊಂಡಿದೆ. ಜಾತಿ, ಮತ ಹಾಗೂ ಲಿಂಗ ತಾರತಮ್ಯ ಹೊಡೆದು ಹಾಕಿ ಎಲ್ಲರಿಗೂ ಸಾಮಾಜಿಕ,ಆರ್ಥಿಕ,ರಾಜಕೀಯ ಸಮಾನತೆ ತಂದುಕೊಡಲು ಶ್ರಮಿಸಿರುವ ಬಸವಣ್ಣನವರು ಸಮಾಜ ಸುಧಾರಕರಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಕಸಾಪದಿಂದ ಮೂವರಿಗೆ ‘ಬಸವಶ್ರೀ’ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.1–ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಬಸವ ಜಯಂತಿ ಅಂಗವಾಗಿ ಪರಿಷತ್ ಭವನದಲ್ಲಿ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಬಸವ ಜಯಂತಿ–2025 ಕಾರ್ಯಕ್ರಮದಲ್ಲಿ ಮೂವರಿಗೆ ಬಸವಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ಬೆಂಗಳೂರಿನ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷ ಡಾ.ಚೆನ್ನಪ್ಪ ಕಟ್ಟಿ ಹಾಗೂ ಜಿಲ್ಲಾ ಕಸಾಪ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಪ್ರಶಸ್ತಿ ಪುರಸ್ಕೃತರಾದ ರಬಕವಿಯ ಮಲ್ಲೇಶಪ್ಪ ಕುಚನೂರ, ರಬಕವಿ–ಬನಹಟ್ಟಿಯ ಸೋಮಶೇಖರ ಕೊಟ್ರಶೆಟ್ಟಿ ಹಾಗೂ ಬಾಗಲಕೋಟೆಯ ಬಸವರಾಜ ಚಿತ್ತವಾಡಗಿ ಅವರಿಗೆ ಬಸವಶ್ರೀ ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿ ಎಂ.ಎಚ್. ಗಾಣಗೇರ, ಕರ್ನಾಟಕ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಆನಂದ ಹಲಕುರ್ಕಿ, ಡಾ.ವಿ.ಎಸ್.ಕಟಗಿಹಳ್ಳಿಮಠ, ಡಾ.ಪ್ರಕಾಶ ಖಾಡೆ, ಮ.ಕೃ.ಮೇಗಾಡಿ, ಡಾ. ಮೈನುದ್ದೀನ್ ರೇವಡಿಗಾರ, ಪಿ.ಎಸ್.ಆಲೂರ, ಹಣಗಂಡಿ, ಹುಲಗಬಾಳಿ, ಪ್ರಿಯಾ ಕಟ್ಟಿ ಇನ್ನಿತರರು ಇದ್ದರು.

# ಮಹಾತ್ಮರ ಸಾಧನೆಯ ಜೀವನ ಸಮಾಜಕ್ಕೆ ಮಾದರಿ–ಪ್ರದೀಪ ಗುರೂಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.1–ಮಹಾತ್ಮರು, ಯೋಗಿಗಳು,ಶರಣರು,ತತ್ವಜ್ಞಾನಿಗಳ ಸಾಧನೆಯ ಜೀವನ ಸಮಾಜಕ್ಕೆ ಮಾದರಿಯಾದುದು ಎಂದು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದ್ದಾರೆ.

ಜಿಲ್ಲೆಯ ಮುಧೋಳ ತಾಲೂಕಿನ ಮಾಚಕನೂರ ಗ್ರಾಮದಲ್ಲಿ ಬೆನಕಟ್ಟಿಯ ಹೇಮ–ವೇಮನ ಸದ್ಬೋಧನ ಪೀಠಸ್ಥಳೀಯ ಹೇಮ–ವೇಮ ರಡ್ಡಿ ಗ್ರಾಮೀಣಾಭಿವೃದ್ಧಿ ಸೇವಾ ಸಮಿತಿಯ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಮನೆ ಮನದಲ್ಲಿ ವೇಮನರ 179 ನೇಯ ಮಾಸಿಕ ತತ್ವ ಚಿಂತನ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಮಹಾತ್ಮರ ಸಾಧನೆಯ ಜೀವನ ತಿಳಿದಾಗ ನಮ್ಮ ಅಂತ:ಕರಣದ ಕುರುಡತ್ವವನ್ನು ಕಳೆದುಕೊಳ್ಳಬಹುದಾಗಿದೆ ಎಂದರು.

ಹೇಮರಡ್ಡಿ ಮಲ್ಲಮ್ಮ, ಮಹಾಯೋಗಿ ವೇಮನ ಸೇರಿದಂತೆ ಶರಣರು,ಮಹಾತ್ಮರು,ಜ್ಞಾನಿಗಳು, ಯೋಗಿಗಳು ವಚನ,ತತ್ವ ಚಿಂತನ ಹಾಗೂ ಸಂದೇಶಗಳ ಮೂಲಕ ಸಮಾಜಕ್ಕೆ ಬೆಳಕು ನೀಡುವ ರೀತಿಯಲ್ಲಿ ಆಧ್ಯಾತ್ಮದ ಸಂಪತ್ತನ್ನು ನೀಡಿದ್ದಾರೆ. ಆ ಸಂಪತ್ತನ್ನು ಉಣ್ಣುವ ಭಾಗ್ಯ ನಮ್ಮದಾದರೆ ನಮಗೆ ಬದುಕಿನ ಅರ್ಥ ತಿಳಿಯುತ್ತದೆ ಎಂದು ಪ್ರದೀಪ ಗುರೂಜಿ ಹೇಳಿದರು.

ಅತಿಥಿಯಾಗಿದ್ದ ನಿವೃತ್ತ ಶಿಕ್ಷಕ ಶಂಕರ ಯಡಹಳ್ಳಿ, ಸತ್ಸಂಗ ನಡೆಸುವುದು ಮತ್ತು ಆಲಿಸುವುದರಿಂದ ಅರ್ಥಪೂರ್ಣ ಬದುಕನ್ನು ಕಾಣಬಹುದಲ್ಲದೇ ಅದರಿಂದ ಒಳ್ಳೆಯ ಫಲ ಲಭಿಸುತ್ತದೆ ಎಂದರು.

ಚಿಂತನಸಿರಿ ಕೋಶಾಧ್ಯಕ್ಷ ಡಿ.ಎಂ.ಬೆಣ್ಣೂರ,ಹೇಮ–ವೇಮನ ಸದ್ಬೋಧನ ಪೀಠ ನಡೆದು ಬಂದ ದಾರಿ, ಅದರ ಕಾರ್ಯ ಚಟುವಟಿಕೆಗಳನ್ನು ತಿಳಿಸಿದರು. ಹೊಳೆ ಬಸವೇಶ್ವರ ದೇವಸ್ಥಾನದ ಅರ್ಚಕ ಮಲ್ಲಯ್ಯ ಗಣಾಚಾರಿ ಅಧ್ಯಕ್ಷತೆ ವಹಿಸಿದ್ದರು.

ಹೇಮ–ವೇಮ ರಡ್ಡಿ ಸೇವಾ ಸಮಿತಿ ಅಧ್ಯಕ್ಷ ರಾಜು ಪಾಟೀಲ, ಭೀಮನಗೌಡ ಪಾಟೀಲ,ಬಸವರಾಜ ಹುಗ್ಗಿ,ವೆಂಕಟೇಶ ಕೇರಿ,ದುಂಡಪ್ಪ ದಾಸರಡ್ಡಿ,ರಮೇಶಗೌಡ ಪಾಟೀಲ, ಸುನೀಲ ಮದರಖಂಡಿ, ಸುರೇಶ ಕೋನರಡ್ಡಿ,ಹನಮಂತ ಬಡಪ್ಪನವರ, ನಿಂಗಣ್ಣ ಚಿತ್ತರಗಿ, ಗೋಪಾಲ ದಾಸರಡ್ಡಿ, ಸೇವಾ ಸಮಿತಿ ಕಾರ್ಯದರ್ಶಿ ಕಲ್ಮೇಶ ಪಾಟೀಲ, ವಿನಾಯಕ ಪಾಟೀಲ, ಹೇಮ ವೇಮನ ಸದ್ಬೋಧನ ಪೀಠದ ಕಾರ್ಯದರ್ಶಿ ಟಿ.ಎಚ್.ಸನ್ನಪ್ಪನವರ, ಮಾಲತೇಶ ಅಮಾತೆಪ್ಪನವರ ಪಾಲ್ಗೊಂಡಿದ್ದರು.

ಬೆನಕಟ್ಟಿಯ ಮಲ್ಲಮಾಂಬೆ ಭಜನಾ ತಂಡ ವೇಮನರ ವಚನ ಪಠಿಸಿದರು. ಶಿಕ್ಷಕ ಮಂಜುನಾಥ ಫರೀಟ ಸ್ವಾಗತಿಸಿ,ನಿರೂಪಿಸಿದರು.

# ಜಗತ್ತಿಗೆ ಸಂಸತ್ ಪರಿಕಲ್ಪನೆ ನೀಡಿದವರು ಜಗಜ್ಯೋತಿ ಬಸವಣ್ಣನವರು – ಸಂಸದ ಕೆ.ರಾಜಶೇಖರ ಹಿಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಗತ್ತಿಗೆ ಸಂಸತ್ ಪರಿಕಲ್ಪನೆಯನ್ನು ನೀಡಿದವರು ಜಗಜ್ಯೋತಿ ಬಸವಣ್ಣನವರು ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಬುಧವಾರ ಕೊಪ್ಪಳ ನಗರದ ಶ್ರೀಗವಿಮಠದ ಆವರಣದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಬಸವ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಸವಣ್ಣನವರು 12ನೇ ಶತಮಾನದಲ್ಲಿ ವಿಶ್ವದಲ್ಲೇ ಮೊದಲನೆ ಸಂಸತ್ತನ್ನು ರಚನೆ ಮಾಡಿ, ವರ್ಣ ಭೇದ, ಜಾತಿ ಭೇದವನ್ನು ಹೋಗಲಾಡಿಸಲು ಶ್ರಮಿಸಿದವರು. ಸಮಾನತೆಯ ಸಮಾಜವನ್ನು ಕೊಡಬೇಕೆಂಬ ಉದ್ದೇಶದಿಂದ ಚಿಂತನೆಗಳನ್ನಷ್ಟೇ ಮಾಡದೆ, ಚಳುವಳಿಗಳ ಮೂಲಕ ಕಲ್ಯಾಣ ಕ್ರಾಂತಿಗೆ ನಾಂದಿ ಹಾಡಿದರು. ಜಗತ್ತಿನಲ್ಲಿ ಬಹಳಷ್ಟು ರಾಷ್ಟ್ರಗಳಿದ್ದು, ಎಲ್ಲಾ ದೇಶಗಳು ಸಂಸತ್ತನ್ನು ಹೊಂದಿವೆ, ಇಲ್ಲಿ ಸಮಸ್ಯೆಗಳ ಕುರಿತು ಚರ್ಚೆ ಮಾಡಲಾಗುತ್ತದೆ. ಸಮಾಜದಲ್ಲಿ ಸಮಾನತೆ ಕೊಡುವುದರ ಬಗ್ಗೆಯೂ ಚರ್ಚೆ ಮಾಡಲಾಗುತ್ತದೆ. ಇಂದು ಎಲ್ಲರಿಗೂ ಸಮಾನ ಅವಕಾಶಗಳು ಸಿಗುತ್ತಿವೆ ಅಂದರೆ, 12ನೇ ಶತಮಾನದಲ್ಲಿ ಬಸವಣ್ಣನವರು ವಿಶ್ವದ ಮೊದಲ ಸಂಸತ್ತನ್ನು ಸ್ಥಾಪನೆ ಮಾಡಿರುವುದೇ ಮುಖ್ಯ ಕಾರಣ. ಇದಕ್ಕಾಗಿ ಅವರನ್ನು ಜಗಜ್ಯೋತಿ ಬಸವಣ್ಣ ಎಂದು ಕರೆಯಲಾಗುತ್ತಿದೆ ಎಂದರು.

ಬಸವಣ್ಣನವರು ಸಮಾನತೆಯ ಜತೆಗೆ ಎಲ್ಲರೂ ಶ್ರಮ ಪಡಬೇಕು, ಶ್ರಮದ ಫಲವನ್ನ ಸಮಾನವಾಗಿ ಹಂಚಿಕೊಳ್ಳಬೇಕು ಎನ್ನುವುದನ್ನು ಸಹ ಸಮಾಜಕ್ಕೆ ತಿಳಿಸಿ ಕೊಟ್ಟಿದ್ದಾರೆ. 'ಕಾಯಕವೇ ಕೈಲಾಸ' ಎಂಬಂತೆಯೇ ಎಲ್ಲಾ ಧರ್ಮಗಳಲ್ಲಿ ದುಡಿಯುವ ಬಗ್ಗೆ ತಿಳಿಸಲಾಗುತ್ತದೆ. ಕೆಲಸದಲ್ಲಿ ಶ್ರದ್ಧೆಯಿರಬೇಕು, ಅದರಲ್ಲೆ ಕೈಲಾಸ ಕಾಣಬೇಕು ಅಂತ ವಿವಿಧ ರೀತಿಯಲ್ಲಿ ಹೇಳಲಾಗುತ್ತದೆ. ಜಗತ್ತಿನ ಬಹಳಷ್ಟು ರಾಷ್ಟ್ರಗಳಲ್ಲಿ ಶಾಂತಿಯುತ ದೇಶ, ಸಂಸ್ಕೃತಿಯಲ್ಲಿ ಜಗತ್ತಿಗೆ ಮೊದಲನೆಯ ಸ್ಥಾನದಲ್ಲಿ ಬರುವಂತ ರಾಷ್ಟ್ರ ಅಂದರೆ ಭಾರತ. ನಮ್ಮ ದೇಶವು ಸಂಸ್ಕೃತಿಯಲ್ಲಿ ಅಷ್ಟೊಂದು ಶ್ರೇಷ್ಠವಾಗಿದೆ. ಇಂತಹ ಸಂಸ್ಕೃತಿಗೆ ಭೂನಾದಿ ಹಾಕಿದವರು ಬಸವಣ್ಣನವರು. ಇದಕ್ಕಾಗಿ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಕರೆಯುತ್ತೇವೆ. ನಾವೆಲ್ಲರೂ ಬಸವಣ್ಣನವರ ಆದರ್ಶಗಳನ್ನು ಪಾಲನೆ ಮಾಡುವುದರ ಜತೆಗೆ ಸಮ ಸಮಾಜವನ್ನು ನಿರ್ಮಾಣ ಮಾಡುವಂತಹ ಕೆಲಸ ಮಾಡೋಣ ಎಂದು ಹೇಳಿದರು.

ಬೆಂಗಳೂರು ಬಸವ ಸಮಿತಿ ಅಧ್ಯಕ್ಷರಾದ ಅರವಿಂದ ಜತ್ತಿ ಅವರು ಜಗಜ್ಯೋತಿ ಬಸವೇಶ್ವರರ ಕುರಿತು ವಿಶೇಷ ಉಪನ್ಯಾಸ ನೀಡಿ, ಬಸವಣ್ಣನವರು ವಿಶ್ವಮಾನವತೆ ಹಾಗೂ ವಿಶ್ವ ಪ್ರಜ್ಞೆಯ ಮೂಲಕ 12ನೇ ಶತಮಾನದಲ್ಲಿಯೇ ಸಮಾಜದಲ್ಲಿ ಹೊಸ ಕ್ರಾಂತಿಯನ್ನು ಸೃಷ್ಟಿಸಿದರು. ಬಸವಣ್ಣನವರ ಬದುಕು, ವಚನಗಳನ್ನು ಬರಿ ಮಾತುಗಳಲ್ಲಿ ವಿಜೃಂಭಿಸದೇ ಅಕ್ಷರಶಃ ಅವುಗಳನ್ನು ನಮ್ಮ ನಡೆನುಡಿಯೊಳಗೆ ಒಂದಾಗಿಸಿಕೊಂಡು ಬದುಕನ್ನು ಸಾಗಿಸಿದರೆ, ಹನ್ನೆರಡನೇ ಶತಮಾನದಲ್ಲಿ ಬಸವಣ್ಣನವರು ಕಂಡ ಸಮಾನತೆಯ ಸಮಾಜವನ್ನು ನಾವೆಲ್ಲರೂ ನಿರ್ಮಿಸಬಹುದು. ಬಸವ ಜಯಂತಿಯು ರಾಷ್ಟ್ರ ಮಟ್ಟದ ಕಾರ್ಯಕ್ರಮವಾಗಬೇಕು. ಈ ಬಗ್ಗೆ ಕರ್ನಾಟಕ ರಾಜ್ಯದ ಎಲ್ಲಾ ಸಂಸದರು ಲೋಕಸಭೆಯಲ್ಲಿ ಧ್ವನಿ ಎತ್ತಬೇಕು ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಅಥಣಿ ತಾಲ್ಲೂಕಿನ ಜನವಾಡದ ಅಲ್ಲಮಪ್ರಭು ಮಠದ ಪೂಜ್ಯಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿದರು. ಧಾರವಾಡದ ಕೆ.ಎಲ್.ಇ. – ಮೃತ್ಯುಂಜಯ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ವೀಣಾ ಯಲಿಗಾರ ಅವರು ಬಸವ ಚಿಂತನೆಗಳ ಕುರಿತು ಮಾತನಾಡಿದರು.

*ಬಸವ ಕಾರುಣ್ಯ ಪ್ರಶಸ್ತಿ ಪ್ರದಾನ:* ಕಾರ್ಯಕ್ರಮದಲ್ಲಿ ಕೊಪ್ಪಳ ಬಸವ ಜಯಂತ್ಯೋತ್ಸವ ಸಮಿತಿ ಮತ್ತು ಬಸವಾನುಯಾಯಿ ಸಂಘ ಸಂಸ್ಥೆಗಳ ವತಿಯಿಂದ ಕಾಯಕ ಜೀವಿಗಳಾದ ಜಯಶ್ರೀ ಗುಳಗಣ್ಣವರ್ ಹಾಗೂ ಬಸವನಗೌಡ ಅವರಿಗೆ 'ಬಸವ ಕಾರುಣ್ಯ' ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.


ಸಮಾರಂಭದಲ್ಲಿ ಬಿಜಕಲನ ಶಿವಲಿಂಗ ಮಹಾಸ್ವಾಮಿಗಳು, ಬಸವ ಸಮಾಜದ ಜಿಲ್ಲಾಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಭಾಗ್ಯನಗರದ ಶ್ರೀ ಗುರುಕೃಪಾ ಕಲಾಸಂಘದ ಶಕುಂತಲಾ ಬೆನ್ನಾಳ ಹಾಗೂ ಸಂಗಡಿಗರು ವಚನ ಸಂಗೀತ ಹಾಗೂ ನಾಡಗೀತೆ ಕಾರ್ಯಕ್ರಮ ನಡೆಸಿಕೊಟ್ಟರು.

*ಪುತ್ಥಳಿಗೆ ಮಾಲಾರ್ಪಣೆ:* ಬಸವ ಜಯಂತ್ಯೋತ್ಸವ ಅಂಗವಾಗಿ ನಗರದ ಹೊಸಪೇಟೆ ರಸ್ತೆಯ ಶಿವಶಾಂತವೀರ ನಗರದಲ್ಲಿರುವ ನಗರಸಭೆಯ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಉದ್ಯಾನವನದಲ್ಲಿರುವ ಮಹನೀಯರ ಪುತ್ಥಳಿಗೆ ಹಾಗೂ ನಗರದ ಬಸವೇಶ್ವರ ವೃತ್ತದ (ಗಂಜ್ ಸರ್ಕಲ್) ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮ ನಡೆಯಿತು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಮಾಜಿ ಸಂಸದ ಸಂಗಣ್ಣ ಕರಡಿ, ಕೊಪ್ಪಳ ನಗರಸಭೆ ಉಪಾಧ್ಯಕ್ಷರಾದ ಅಶ್ವಿನಿ ಗದಗಿನಮಠ, ಸದಸ್ಯರಾದ ಮುತ್ತುರಾಜ ಕುಷ್ಟಗಿ, ಗುರುರಾಜ ಹಲಗೇರಿ, ಲತಾ ಚಿನ್ನೂರು ಹಾಗೂ ಇತರೆ ಸದಸ್ಯರು, ಕೊಪ್ಪಳ ತಹಶಿಲ್ದಾರ ವಿಠ್ಠಲ ಚೌಗಲಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಬಸವ ಸಮಾಜದ ಜಿಲ್ಲಾಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಇತರೆ ಜನಪ್ರತಿನಿಧಿಗಳು ಹಾಗೂ ಹಲವಾರು ಜನರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದು, ಜಗಜ್ಯೋತಿ ಬಸವೇಶ್ವರರ ಭಾವಚಿತ್ರ ಮತ್ತು ಪುತ್ಥಳಿಗೆ ಪುಷ್ಪ ನಮನವನ್ನು ಸಮರ್ಪಿಸುವುದರ ಮೂಲಕ ಗೌರವ ಸಲ್ಲಿಸಿದರು.

# ಬಸವ ಜಯಂತಿ ವೈಭವದ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ


ಭಾಲ್ಕಿ:ಪಟ್ಟಣದಲ್ಲಿ ಬಸವಣ್ಣನವರ ಜಯಂತಿ ನಿಮಿತ್ತ ವೈಭವದ ಮೆರವಣಿಗೆ ಜರುಗಿತು. ಹಿರೇಮಠ ಸಂಸ್ಥಾನದ ಆವರಣದಲ್ಲಿ ಬಸವ ಜಯಂತಿ ಉತ್ಸವ ಸಮಿತಿ ವತಿಯಿಂದ ಬುಧವಾರ ಆಯೋಜಿಸಿದ್ದ ವಿಶ್ವಗುರು ಬಸವಣ್ಣನವರ ಭಾವಚಿತ್ರ ಮೆರವಣಿಗೆಗೆ ಸಂಸದ ಸಾಗರ ಖಂಡ್ರೆ ಚಾಲನೆ ನೀಡಿದ್ದರು.

ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಹಿರೇಮಠ ಸಂಸ್ಥಾನದ ಆವರಣದಿಂದ ಅಲಂಕೃತ ಸಾರೋಟಿಯಲ್ಲಿ ಆರಂಭಗೊಂಡ ಬಸವಣ್ಣನವರ ಮೆರವಣಿಗೆ ಹಿರೇಮಠ ಬಡಾವಣೆ, ಚವಡಿ, ತಿನ್ ದುಕಾನ್, ಗಡಿ ಏರಿಯಾ, ಪುರಸಭೆ, ಬೊಮಗೊಂಡೇಶ್ವರ ವೃತ್ತ, ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತದ ಮೂಲಕ ಬಸವೇಶ್ವರ ವೃತ್ತದಲ್ಲಿ ಸಮಾವೇಶಗೊಂಡಿತು.

ಮೆರವಣಿಗೆ ಮಾರ್ಗ ಮಧ್ಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಸಲ್ಲಿಸಿ ಗೌರವಿಸಿದರು. ಮೆರವಣಿಗೆಯುದ್ದಕ್ಕೂ ಲಂಬಾಣಿ ನೃತ್ಯ, ಹಲಿಗೆ ವಾದ್ಯ ಸೇರಿ ವಿವಿಧ ಕಲಾ ತಂಡಗಳು ಭಾಗವಹಿಸಿ ಮೆರಗು ಹೆಚ್ಚಿಸಿದ್ದವು. ಡಿಜೆ ಸೌಂಡ್‌ನ ಬಸವಣ್ಣನವರ ವಚನಗಳ ಹಾಡಿಗೆ ಪ್ರಮುಖರು, ಯುವಕರು ಹೆಜ್ಜೆ ಹಾಕಿ ಮೆರವಣಿಗೆ ಜೋಶ್ ಹೆಚ್ಚಿಸಿದರು. ಸಾವಿರಾರು ಬಸವ ಭಕ್ತರು ಬಸವಣ್ಣನವರ ಘೋಷಣೆ ಕೂಗಿ ಭಕ್ತಿ ಭಾವ ಮೆರೆದರು.

ಈ ಸಂದರ್ಭದಲ್ಲಿ ಹವಾ ಮಲ್ಲಿನಾಥ ಮಹಾರಾಜರು, ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷ ಶಿವು ಲೋಖಂಡೆ, ಪುರಸಭೆ ಮಾಜಿ ಅಧ್ಯಕ್ಷರಾದ ಬಸವರಾಜ ವಂಕೆ, ವಿಶಾಲ ಪುರಿ, ಪ್ರಮುಖರಾದ ಜಯರಾಜ ಪಾತ್ರೆ, ಜಗದೀಶ ಖಂಡ್ರೆ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

# ದಿಗಂಬರ ಕರಿಬಸವೇಶ್ವರ ಜಾತ್ರಾ ಮಹೋತ್ಸವ ಇಂದಿನಿಂದ ಆರಂಭ



ಹುಮನಾಬಾದ್:–ತಾಲೂಕಿನ ಹುಡುಗಿ ಕಟ್ಟಿಮನಿ ಹಿರೇಮಠ್ ಸಂಸ್ಥಾನ ಶ್ರೀ ಕರಿಬಸವೇಶ್ವರ ಜಾತ್ರಾ ಮಹೋತ್ಸವ ವೀರುಪಾಕ್ಷ ಶಿವಾಚಾರ್ಯ ಹಾಗೂ ಸೋಮೇಶ್ವರ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ 01–05–2025ರಂದು ಆರಂಭವಾಗಿ 04–05–2025ರವರೆಗೆ ಸಡಗರದಿಂದ ಜರುಗಲಿದೆ. 01–05–2025ರಂದು ಗುರುವಾರ ಬೆಳಿಗ್ಗೆ 08 ಘಂಟೆಗೆ ಪಶುಗಳ ಪ್ರದರ್ಶನ ಹಾಗೂ ಪಶುಗಳ ಆರೋಗ್ಯ ತಪಾಸಣೆ ಜರಗಲಿದೆ. ಮೇ 02ರಂದು ಅಗ್ನಿಪೂಜೆ ಜರುಗಲಿದೆ. 03–05–2025ರಂದು ಸಂಜೆ ರಥೋತ್ಸವ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಿಂದ ಹಾದು ನಂದಗಾಂವ ರಸ್ತೆಯಲ್ಲಿರುವ ರಥೋತ್ಸವ ಮೈದಾನಕ್ಕೆ ತಲುಪಿದಾಗ ವೈಭವದ ರಥೋತ್ಸವ ಜರುಗುವುದು. 04ರಂದು ರವಿವಾರ ಬೆಳಿಗ್ಗೆ 8 ಘಂಟೆಗೆ ಜಂಗಿ ಕುಸ್ತಿಗಳು ಜರುಗಲಿವೆ. ಸಾಯಂಕಾಲ 07 ಗಂಟೆಗೆ ಸಂಗೀತ ದರ್ಬಾರ್ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಾತ್ರಾ ಮಹೋತ್ಸವ ಪಂಚ ಕಮಟಿ ಅವರು ಮನವಿ ಮಾಡಿದ್ದಾರೆ.

# ಹಡಗಿಲ್‌ದಲ್ಲಿ ಅದ್ದೂರಿಯ ಕಂಠಿ ಬಸವೇಶ್ವರ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.1:ತಾಲೂಕಿನ ಹಡಗಿಲ ಗ್ರಾಮದಲ್ಲಿ ಕಂಠಿ ಬಸವೇಶ್ವರ ಜಾತ್ರಾ ರಥ ಮಹೋತ್ಸವ ಅದ್ದೂರಿಯಾಗಿ ಜರುಗಿತು.

ಮಹಾತಾಯಿ ದಾನಮ್ಮ ದೇವಿಯ ಉಡಿತುಂಬುವ ಕಾರ್ಯಕ್ರಮ ಮುಗಳ ನಾಗಾವ ಸಿದ್ಧ ಶಿವಾಚಾರ್ಯರು ನೆರವೇರಿಸಿದರು. ಕಂಠಿ ಬಸವೇಶ್ವರ ಗದ್ದುಗೆಗೆ ಮಹಾ ರುದ್ರಾಭಿಷೇಕ ಜರಗಿ–ತು. ನೂರಾರು ಭಕ್ತರ ಉಪಸ್ಥಿತಿಯಲ್ಲಿ ಉಚ್ಚಾಯಿ ಉತ್ಸವ, ಪಲ್ಲಕ್ಕಿ ಮಹೋತ್ಸವ ನಂತರ ರಥೋತ್ಸವ ಜರುಗಿ–ತು. ಇಂದು ಗೀಗಿ ಪದ, ಕುಸ್ತಿ ಕಾರ್ಯಕ್ರಮ ನಡೆಯಲಿವೆ.

